ಕನ್ನಡ ದಿನಪತ್ರಿಕೆ
2 ಮೇ । ಗುರುವಾರ
2 MAY 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 64 ಪುಟ – 4 | RNI. KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಪ್ರಜ್ವಲ್ ಪ್ರಕರಣದಲ್ಲಿ ಕ್ರಮ ಕೈಗೊಳ್ಳಲು ವಿಳಂಬವಾಗಿಲ್ಲ: ಜಿ.ಪರಮೇಶ್ವರ್



ದಾವಣಗೆರೆ: ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ ಕ್ರಮ ಕೈಗೊಳ್ಳಲು ನಾವು ವಿಳಂಬ ಮಾಡಿಲ್ಲ ಎಂದು ಗೃಹ ಸಚಿವ ಜಿ. ಪರಮೇಶ್ವರ್ ಹೇಳಿದ್ದಾರೆ.

ದಾವಣಗೆರೆಯಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿ ಮಹಿಳಾ ಆಯೋಗದಿಂದ ದೂರು ಬಂದ ಕೂಡಲೇ ಸಂಬಂಧ ಪಟ್ಟ ಅಧಿಕಾರಿಗಳು ಕ್ರಮ ಕೈಗೊಂಡಿದ್ದಾರೆ ಇದರಲ್ಲಿ ಯಾವುದೇ ವಿಳಂಬವಾಗಿಲ್ಲ ಎಂದು ಹೇಳಿದ್ದಾರೆ. ಎಸ್ ಐಟಿ ಈ ಬಗ್ಗೆ ತನಿಖೆ ನಡೆಸುತ್ತಿದೆ ಇದರ ಆಧಾರದ ಮೇಲೆ ಮುಂದಿನ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಹೇಳಿದರು.


ಬಳಿಕ ಮಾತನಾಡಿದ ಅವರು ದೇಶದಲ್ಲಿ ಬದಲಾವಣೆ ಗಾಳಿ ಬೀಸುತ್ತಿದೆ. ಯಾವ ಮೋದಿ ಅಲೆ ಇಲ್ಲ, ಮೋದಿಯನ್ನು ಬದಲಾವಣೆ ಮಾಡಬೇಕು ಎನ್ನುವ ಗಾಳಿ ಬೀಸುತ್ತಿದೆ ಎಂದು ಹೇಳಿದರು.

ಈಗಾಗಲೇ ರಾಜ್ಯದಲ್ಲಿ 14 ಕ್ಷೇತ್ರದಲ್ಲಿ ಚುನಾವಣೆ ನಡೆದಿದ್ದು ಅದರಲ್ಲೂ ಕಾಂಗ್ರೆಸ್ ಪರವಾದ ಅಲೆ ಇದೆ. ರಾಜ್ಯದ ಜನರಿಗೆ ನೀಡಿದ ಗ್ಯಾರೆಂಟಿ ಯೋಜನೆಗಳಿಂದ ಜನರು ಕಾಂಗ್ರೆಸ್ ಮೇಲೆ ಆಶೀರ್ವಾದ ಮಾಡಿದ್ದಾರೆ ಎಂದು ಹೇಳಿದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕೆಟ್ಟೋಗಿದೆ ಎಂದು ಪ್ರಧಾನಿ ಗಳು ಹೇಳಿದ್ದಾರೆ. ಅದಕ್ಕೆ ನಾನು ಅಂಕಿ ಅಂಶಗಳನ್ನು ಸದನದಲ್ಲಿ ಬಹಿರಂಗ ಪಡಿಸುತ್ತೇನೆ. ಬಿಜೆಪಿ ಅಡಳಿತ ಅವಧಿಯಲ್ಲಿ ಎಷ್ಟರ ಮಟ್ಟಿಗೆ ಕಾನೂನು ಸುವ್ಯವಸ್ಥೇ ಇತ್ತು ಎನ್ನುವುದನ್ನು ತಿಳಿಸುತ್ತೇನೆ ಎಂದು ಹೇಳಿದರು.

ರಾಮೇಶ್ವರ ಕೆಫೆ ಬಾಂಬ್ ಬ್ಲಾಸ್ಟ್ ಆರೋಪಿಯನ್ನು ಕರ್ನಾಟಕ ಪೋಲೀಸರೇ ಸುಳಿವು ಹಿಡಿದು ಬಂಧಿಸಿದ್ದಾರೆ. ನೇಹಾ ಹತ್ಯೆ ಮಾಡಿದ ಅರೋಪಿಯನ್ನು ಒಂದು ಗಂಟೆಯೊಳಗೆ ಬಂಧನ ಮಾಡಿದ್ದೇವೆ. ಕಾನೂನು ಬಾಹಿರವಾಗಿ ಕೃತ್ಯಗಳು ನಡೆದರೆ ಅದರ ವಿರುದ್ದ ತಕ್ಷಣ ಕ್ರಮ ಕೈಗೊಳ್ಳುವ ಕೆಲಸ ನಮ್ಮ ಸರ್ಕಾರ ಮಾಡಿದೆ. ಬೆಂಗಳೂರಿನಲ್ಲಿ ಸಾವಿರಾರು ಕೋಟಿ ಮೌಲ್ಯದ ಡ್ರಗ್ಸ್ ಅನ್ನು ಕೂಡ ನಾನೇ ಮುಂದು ನಿಂತು ಸುಟ್ಟು ಹಾಕಿಸಿದ್ದೇನೆ ಬಿಜೆಪಿಯವರು ಇದನ್ನೇಲ್ಲ ಅರಿತು ಮಾತಮಾಡಲಿ ಎಂದು ಹೇಳಿದರು.

## ಅಯೋಧ್ಯೆ ಮಂದಿರ ಉದ್ಘಾಟನೆ ಬಳಿಕ ಮೊದಲ ಬಾರಿಗೆ ರಾಮಲಲ್ಲಾನ ದರ್ಶನ ಪಡೆದ ರಾಷ್ಟ್ರಪತಿ ದ್ರೌಪದಿ ಮುರ್ಮು!



ಅಯೋಧ್ಯೆ ಮಂದಿರ ಉದ್ಘಾಟನೆ ಬಳಿಕ ಮೊದಲ ಬಾರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ರಾಮಲಲ್ಲಾನ ದರ್ಶನ ಪಡೆದಿದ್ದಾರೆ. ರಾಮಲಲ್ಲಾನ ದರ್ಶನದ ನಂತರ ಸಂಜೆಯ ಆರತಿಯಲ್ಲಿಯೂ ಪಾಲ್ಗೊಂಡರು.

ಅಲ್ಲದೆ ಮುರ್ಮು ಅವರು ದೇವಾಲಯದ ಒಳಗೆ ಸಾಕಷ್ಟು ಸಮಯ ಧ್ಯಾನ ಸಕ್ತರಾಗಿದ್ದರು. ಇದಕ್ಕೂ ಮೊದಲು, ಹನುಮಾನ್ ಗರ್ಹಿಯ ದರ್ಶನದ ಜೊತೆಗೆ, ಅವರು ಸರಯೂ ದಡದಲ್ಲಿ ಆರತಿಯನ್ನೂ ಮಾಡಿದರು.

ಅಧ್ಯಕ್ಷೆ ದ್ರೌಪದಿ ಮುರ್ಮು ಅವರು ಬುಧವಾರ ಅಯೋಧ್ಯಾಧಾಮ ತಲುಪಿ ಮೊದಲು ಹನುಮಾನ್‌ಗರ್ಹಿಯಲ್ಲಿ ದರ್ಶನ ಮತ್ತು ಪೂಜೆ ಸಲ್ಲಿಸಿದರು. ಇಲ್ಲಿ ಅರ್ಚಕ ರಾಜು ದಾಸ್ ಅವರಿಗೆ ಬೆಳ್ಳಿ ಗದೆ, ಬೆಳ್ಳಿ ರಾಮ್ ದರ್ಬಾರ್ ಮತ್ತು ಹಸುವಿನ ಪ್ರತಿಕೃತಿಯನ್ನು ನೀಡಿದರು.

ಹನುಮಂತನಗರಕ್ಕೆ ಭೇಟಿ ನೀಡಿದ ನಂತರ ರಾಷ್ಟ್ರಪತಿಗಳು ಸರಯೂ ಘಾಟ್‌ನ ಆರತಿ ಸ್ಥಳಕ್ಕೆ ತಲುಪಿದರು. ಅಲ್ಲಿ ಅವರು ಮಹಾ ಆರತಿಯಲ್ಲಿ ಭಾಗವಹಿಸಿದ್ದರು.

ಸರಯೂ ಘಾಟ್‌ನ ಸುತ್ತಲೂ ವೇದಮಂತ್ರಗಳ ಪ್ರತಿಧ್ವನಿಗಳು ಕೇಳಿಬರುತ್ತಿವೆ. ರಾಷ್ಟ್ರಪತಿಯವರೊಂದಿಗೆ ರಾಜ್ಯಪಾಲ ಆನಂದಿ ಬೆನ್ ಪಟೇಲ್ ಮತ್ತು ಯುಪಿ ಸರ್ಕಾರದ ಸಚಿವ ಸೂರ್ಯ ಪ್ರತಾಪ್ ಶಾಹಿ ಉಪಸ್ಥಿತರಿದ್ದರು.

## ಜೆಡಿಎಸ್–ಬಿಜೆಪಿ ಒಟ್ಟಾಗಿ ಹೋಗುವುದರಲ್ಲಿ ಎರಡು ಮಾತಿಲ್ಲ: ಬಿಎಸ್‌ವೈ

ಹೊಳೆಹೊನ್ನೂರು : ಮುಂದಿನ ದಿನಗಳಲ್ಲಿ ಬಿಜೆಪಿ ಜೆಡಿಎಸ್ ಒಟ್ಟಾಗಿ ಹೋಗುವುದರಲ್ಲಿ ಎರಡು ಮಾತಿಲ್ಲ ಎಂದು ಮಾಜಿ ಮುಖ್ಯ ಮಂತ್ರಿ ಬಿ.ಎಸ್ ಯಡಿಯೂರಪ್ಪ ಹೇಳಿದರು. ಸಮೀಪದ ಸೂಗೂರಿನಲ್ಲಿ ಬುಧವಾರ ಹೊಳಲೂರು ಮಹಾಶಕ್ತಿ ಕೇಂದ್ರ ವತಿಯಿಂದ ಹಮ್ಮಿಕೊಂಡದ ಬಹಿರಂಗ ಪ್ರಚಾರ ಸಭೆಯಲ್ಲಿ ಮಾತನಾಡಿದರು.

ಮುಂದಿನ ದಿನಗಳಲ್ಲಿ ಚುನಾವಣೆಗೆ ಸ್ಪರ್ಧೆ ಮಾಡುವವರು ಭಯ ಪಡಬೇಕು ಆ ರೀತಿಯ ಬಹುಮತಗಳೊಂದಿಗೆ ಬಿ.ವೈ ರಾಘವೇಂದ್ರ ಗೆದ್ದು ಬರಲಿದ್ದಾರೆ ರಾಜ್ಯ ಸರ್ಕಾರ ಸ್ಥಗಿತವಾಗಿದು ಸಂಪೂರ್ಣವಾಗಿ ದಿವಾಳಿಯಾಗಿದೆ. ಜನ ಹಿತ ಮರೆತು ತುಘಲಕ್ ಆಢಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷವನ್ನು ದೂಳಿಪಟ ಮಾಡಬೇಕಿದೆ. ರಾಜ್ಯದಲ್ಲಿ ಕಾಂಗ್ರೆಸ್ ಪರ ಯಾವೊಬ್ಬ ಮತದಾರರನು ಒಲವು ತೋರುತ್ತಿಲ್ಲ. ಕಾಂಗ್ರೆಸ್‌ಗೆ ದಿಕ್ಕು ದೆಸೇ ಇಲ್ಲ. ನಾಯಕನಿಲ್ಲದ ಹಡಗಿನ ಕಡೆ ತಿರುಗಿ ನೋಡದಂತೆ ಈ ಬಾರಿ ಬಿಜೆಪಿ ಮತ ನೀಡಿ ಮಹಿಳಾ ಮತದಾರರು ಪಕ್ಷ



ಬೆಂಬಲಿಸುತ್ತಿರುವುದು ಆಶಾದಾಯಕ ಬೆಳವಣಿಗೆ.

ಈ ಚುನಾವಣೆ ನಂತರ ಕಾಂಗ್ರೆಸ್ ಧೂಳಿಪಟ ಆಗುವುದು ನಿಶ್ಚಿತ. ದೇಶದಲ್ಲಿ ಬದಲಾವಣೆಯ ಗಾಳಿ ಬೀಸುತ್ತಿದೆ. ಮಹಿಳಾ ಸಭಲಿಕರಣ ಬಿಜೆಪಿ ಯಿಂದ ಮಾತ್ರ ಸಾಧ್ಯ ಎಂದರು.

ಮತದಾರರು ಜಾಗೃತರಾಗಿದ್ದಾರೆ ಚುನಾವಣೆಗಳಲ್ಲಿ ಹಣದ ಬಲ ಬಳಸಿ ಜಾತಿಯ ವಿಷ ಬೀಜ ಬಿತ್ತಿ ಗೆಲ್ಲುವು ಸಾದಿಸುವುದು ಸುಲಭವಲ್ಲ. ಪ್ರಧಾನಿ ನರೇಂದ್ರ ಮೊದಿ 10 ವರ್ಷದಲ್ಲಿ ಒಂದು ದಿನವು ವಿಶ್ರಾಂತಿ ತೆಗೆದುಕೊಂಡಿಲ್ಲ. ವಿಶ್ವವೇ ದೇಶದ ಕಡೆ ತಿರುಗಿ ನೋಡುವಂತಾಗಿದೆ. ನಾನು ಜಾರಿ ಮಾಡಿದ ಭಾಗ್ಯಲಕ್ಷ್ಮಿ, ಸುವರ್ಣಗ್ರಾಮ, ಸುವರ್ಣ ಭೂಮಿ ಯೋಜನೆಗಳು ನಿಂತು ಹೋಗಿವೆ. ಶಿವಮೊಗ್ಗ ಕ್ಷೇತ್ರದಲ್ಲಿ ರಾಘವೇಂದ್ರ ಒಳ್ಳೆಯ ಕೆಲಸ ಮಾಡಿದ್ದಾರೆ. ರಾಘವೇಂದ್ರ ಬಗ್ಗೆ ಕೆಲವರು ಹಗುರವಾಗಿ ಮಾತನಾಡ್ತಿದ್ದಾರೆ. ರಾಜ್ಯದ ಉದ್ದಗಲಕ್ಕೂ ಪ್ರವಾಸ ಮಾಡಿದ್ದೇನೆ ರಾಜ್ಯದ 28 ಲೋಕಸಭಾ ಕ್ಷೇತ್ರದಲ್ಲಿ 28 ಸ್ಥಾನವನ್ನೂ ಬಿಜೆಪಿ ಗೆಲ್ಲಲಿದೆ ಎಂದರು.

ಶಾಸಕಿ ಶಾರದ ಪರ್ಯಾನಾಯ್ಕ್ , ಮಾಜಿ ಶಾಸಕ ಅಶೋಕ್‌ನಾಯ್ಕ್, ಮಹಿಳಾಧ್ಯಕ್ಷೆ ನಾಗರತ್ನ, ವೈದ್ಯ ಡಾ॥ ದನಂಜಯ್ ಸರ್ಜಿ, ದಿನೇಶ್, ಷಣುಖಪ್ಪ, ರವೀಶ್, ನವೀಲಯ್ಯ, ಷಡಾಕ್ಷರಪ್ಪ, ಬಸವರಾಜಪ್ಪ, ಸಂತೋಷ್, ಕಾಂತರಾಜ್, ಸತೀಶ್ ಕಶೇಟ್ಟಿ, ಅಶೋಕ್, ಶ್ರೀನಿವಾಸ್ ಇತರರಿದ್ದರು.

## ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ 19 ರೂ. ಇಳಿಕೆ

ನವದೆಹಲಿ: ದೇಶದಲ್ಲಿ ವಾಣಿಜ್ಯ ಬಳಕೆಯ ಪ್ರತಿ ಸಿಲಿಂಡರ್‌ನ ಬೆಲೆ 19 ರೂ. ಇಳಿಕೆಯಾಗಿದೆ. ಬೆಲೆ ಇಳಿಕೆ ನಂತರ ಬೆಂಗಳೂರಿನಲ್ಲಿ 19 ಕೆ.ಜಿ.ಯ ವಾಣಿಜ್ಯ ಬಳಕೆಯ ಎಲ್‌ಪಿಜಿ ಸಿಲಿಂಡರ್ ದರ 1,825.50 ರೂ. ಆಗಿದೆ.

ಇದಕ್ಕೂ ಮುನ್ನ ಏ.1ರಂದು ವಾಣಿಜ್ಯ ಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು ಪ್ರತಿ ಯೂನಿಟ್‌ಗೆ 30.50 ರೂ. ಇಳಿಕೆ ಮಾಡಲಾಗಿತ್ತು. ಸತತ ಎರಡನೇ ತಿಂಗಳು ಬೆಲೆಯನ್ನು ತಗ್ಗಿಸಲಾಗಿದೆ.

ಇನ್ನು ಗೃಹ ಬಳಕೆಯ ಎಲ್‌ಪಿಜಿ ಸಿಲಿಂಡರ್ ದರದಲ್ಲಿ ಯಾವುದೇ ಬದಲಾವಣೆ ಇಲ್ಲ. ಅಲ್ಲದೇ ಪೆಟ್ರೋಲ್ ಮತ್ತು ಡೀಸೆಲ್ ದರದಲ್ಲಿ ಕೂಡ ಯಾವುದೇ ಬದಲಾವಣೆ ಇಲ್ಲ.

## 100 ಶಾಲೆಗಳಿಗೆ ಬಾಂಬ್ ಬೆದರಿಕೆ: ಪೊಲೀಸರಿಗೆ ಅಗ್ನಿಪರೀಕ್ಷೆ

ನವದೆಹಲಿ: ದೆಹಲಿ ಎನ್‌ಸಿಆರ್ ಪ್ರದೇಶದ ಸುಮಾರು 100 ಶಾಲೆಗಳಿಗೆ ಬುಧವಾರ ಇ–ಮೇಲ್ ಮೂಲಕ ಬಂದ ಬಾಂಬ್ ಬೆದರಿಕೆಯ ಸಂದೇಶವು ಪೋಷಕರು ಮತ್ತು ಮಕ್ಕಳಲ್ಲಿ ಆತಂಕ ಸೃಷ್ಟಿಸಿತು.

ಬುಧವಾರ ನಸುಕಿನಲ್ಲಿ ಈ ಶಾಲೆಗಳಿಗೆ ಒಂದೇ ರೀತಿಯಾಗಿ ಏಕ ಕಾಲಕ್ಕೆ ಬೆದರಿಕೆ ಸಂದೇಶ ಬಂದಿದ್ದರಿಂದ ಪೋಷಕರು ತಮ್ಮ ಮಕ್ಕಳನ್ನು ಮನೆಗೆ ಕರೆದುಕೊಂಡು ಹೋಗಲು ಆತಂಕದಿಂದ ಶಾಲೆಗಳತ್ತ ದೌಡಾಯಿಸಿದರು.

ಅಲ್ಲದೆ, ಪೊಲೀಸರು ಕೂಡ ಬಾಂಬ್ ಪತ್ತೆಗೆ ಶಾಲೆಗಳತ್ತ ಶ್ವಾನದಳದೊಂದಿಗೆ ದೌಡಾಯಿಸಿದರು. ಮುನ್ನೆಚ್ಚರಿಕೆ ಕ್ರಮವಾಗಿ ಅಗ್ನಿಶಾಮಕ ದಳದ ವಾಹನಗಳು ಕೂಡ ಸೈರನ್ ಶಬ್ದ ಮೊಳಗಿಸುತ್ತಾ ಶಾಲೆಗಳ ಆವರಣದಲ್ಲಿ ಜಮಾಯಿಸಿದವು. ಶೋಧದ ವೇಳೆ ಯಾವುದೇ ಅನುಮಾನಾಸ್ಪದ ವಸ್ತುಗಳು ಮತ್ತು ಸ್ಫೋಟಕಗಳು ಪತ್ತೆಯಾಗಿಲ್ಲ. ಇದೊಂದು ಹುಸಿ ಬಾಂಬ್ ಬೆದರಿಕೆಯ ಸಂದೇಶವೆಂದು ಪೊಲೀಸರು ಸ್ಪಷ್ಟಪಡಿಸಿದರು.

## ವಿಚಾರಣೆಗೆ ಕಾಲಾವಕಾಶ ಕೋರಿದ ಪ್ರಜ್ವಲ್ ರೇವಣ್ಣ

ಬೆಂಗಳೂರು: ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರದ್ದು ಎನ್ನಲಾದ ಅಶ್ಲೀಲ ವಿಡಿಯೋ ಪ್ರಕರಣದ ವಿಚಾರಣೆಗೆ ಹಾಜರಾಗಲು ಏಳು ದಿನಗಳ ಕಾಲಾವಕಾಶ ನೀಡುವಂತೆ ಪ್ರಜ್ವಲ್ ರೇವಣ್ಣ ಪರ ವಕೀಲ ಅರುಣ್ ಜಿ. ಅವರು ಎಸ್ ಐಟಿ ಅಧಿಕಾರಿಗಳಿಗೆ ಪತ್ರವೊಂದನ್ನು ಬರೆದಿದ್ದಾರೆ.

ಅಲ್ಲದೆ ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿ ಪ್ರಜ್ವಲ್ ರೇವಣ್ಣ ಅವರು ಮೊದಲ ಬಾರಿಗೆ ಸಾಮಾಜಿಕ ಜಾಲತಾಣ 'ಘ' ಮೂಲಕ ತಮ್ಮ ಮೊದಲ ಪ್ರತಿಕ್ರಿಯೆಯನ್ನು



ನೀಡಿದ್ದಾರೆ. ಇದರಲ್ಲಿ 'ವಿಚಾರಣೆಗೆ ಹಾಜರಾಗಲು ನಾನು ಬೆಂಗಳೂರಿನಲ್ಲಿ ಇಲ್ಲದ ಕಾರಣ, ನಾನು ನನ್ನ ವಕೀಲರ ಮೂಲಕ ಅ.ಖ.ಆ ಬೆಂಗಳೂರಿಗೆ ಮನವಿ ಮಾಡಿದ್ದೇನೆ. ಸತ್ಯ ಆದಷ್ಟು ಬೇಗ ಹೊರಬರಲಿದೆ. ಎಂದು ಬರೆದುಕೊಂಡಿದ್ದಾರೆ.

ಈ ನಡುವೆ ಪ್ರಕರಣಕ್ಕೆ ಸಂಬಂಧಿಸಿ ವಿಚಾರಣೆಗೆ ಹಾಜರಾಗುವಂತೆ ನೀಡಿರುವ ನೊಟೀಸ್ ಗೆ ವಕೀಲರಾದ ಅರುಣ್ ಉತ್ತರ ನೀಡಿದ್ದು ನನ್ನ ಕಕ್ಷಿದಾರ ಪ್ರಜ್ವಲ್ ರೇವಣ್ಣ ಸದ್ಯ ವಿದೇಶ ಪ್ರವಾಸದಲ್ಲಿರುವ ಕಾರಣ ವಿಚಾರಣೆಗೆ ಏಳು ದಿನಗಳ ಸಮಯಾವಕಾಶ ನೀಡಿ ಬದಲಿ ದಿನಾಂಕವನ್ನು ನೀಡುವಂತೆ ಕೋರಿಕೊಂಡಿದ್ದಾರೆ.

## ಕೇಂದ್ರ ಬರ ಪರಿಹಾರ ನೀಡದಿರಲು ಸೋಲಿನ ಸೇಡು: ರಾಮಲಿಂಗಾರೆಡ್ಡಿ

ವಿಜಯಪುರ: ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕರ್ನಾಟಕ ರಾಜ್ಯದಲ್ಲಿ ಭೀಕರ ಬರ ಆವರಿಸಿದರೂ 7 ತಿಂಗಳಾದರೂ ಬರ ಪರಿಹಾರ ನೀಡದಿರಲು ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಸೋಲಿನ ಸಿಟ್ಟು, ಪ್ರತಿಕಾರವೇ ಕಾರಣ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಕೇಂದ್ರದ ವಿರುದ್ಧ ವಾಗ್ದಾಳಿ ನಡೆಸಿದರು.

ಬುಧವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಸೋಲಿನ ಸಿಟ್ಟನ್ನು ರಾಜ್ಯದ ರೈತರ ಮೇಲೆ ತೀರಿಸಿಕೊಳ್ಳುವುದಕ್ಕಾಗಿ ಪ್ರಧಾನಿ ಮೋದಿ, ಗೃಹ ಸಚಿವ ಅಮಿತ್ ಶಾ ಕರ್ನಾಟಕ ರಾಜ್ಯದ ಬಗ್ಗೆ ಅಸಡ್ಡೆ ಹೊಂದಿದ್ದಾರೆ ಎಂದು ದೂರಿದರು.

ರಾಜ್ಯದಿಂದ 4.34 ಲಕ್ಷ ಕೋಟಿ ಹಣವನ್ನು ಕೇಂದ್ರಕ್ಕೆ ತೆರಿಗೆ ಕಟ್ಟಿದರೂ 1 ರೂಪಾಯಿಯಲ್ಲಿ 13 ಪೈಸೆ ಮಾತ್ರ ಬರುತ್ತಿದೆ. ಇದನ್ನೇ ಮುಖ್ಯಮಂತ್ರಿ ಸಿದ್ದರಾಮಯ್ಯ ಜನತೆಯ ಮುಂದೆ ತೆರೆದಿಟ್ಟಿದ್ದಾರೆ ಎಂದರು.

ಉತ್ತರ ಭಾರತದ ರಾಜ್ಯಗಳಿಗೆ ಅನುದಾನ ನೀಡಿಕೆಯಲ್ಲಿ ತೋರುವ ಧಾರಾಳತನ ನಮ್ಮ ರಾಜಕ್ಕೆ ಸಿಗುತ್ತಿಲ್ಲ. ಕರ್ನಾಟಕ ರಾಜ್ಯ ಸರ್ಕಾರ ಕೇಂದ್ರಕ್ಕೆ ಮನವಿ ಸಲ್ಲಿಸಿದರೂ, ಕೇಂದ್ರ ಸಚಿವರನ್ನು ಭೇಟಿ ಮಾಡಿ ಕೋರಿಕೊಂಡರೂ ಸ್ಪಂದಿಸಲಿಲ್ಲ ಎಂದು ದೂರಿದರು.

ಕಳೆದ ಹತ್ತು ವರ್ಷಗಳ ಆಡಳಿತದಲ್ಲಿ ಪ್ರಧಾನಿ ನರೇಂದ್ರ ಮೋದಿ ಸುಳ್ಳು ಹೇಳುತ್ತಲೇ ಬಂದಿದ್ದಾರೆ. ರಾಜ್ಯದ ತೆರಿಗೆ ಪಾಲಿನ ಹಣ, ಕೃಷ್ಣಾ ನ್ಯಾಯಾಧೀಕರಣದ ತೀರ್ಪಿನ ಅಧಿಸೂಚನೆ ಹೊರಡಿಸುವ ವಿಷಯ, ಬರ ಪರಿಹಾರ ನೀಡಿಕೆ ಸೇರಿದಂತೆ ಕರ್ನಾಟಕ ರಾಜ್ಯಕ್ಕೆ ಕೇಂದ್ರದಿಂದ ಆಗಿರುವ ಯಾವುದೇ ಅನ್ಯಾಯದ ಕುರಿತು ರಾಜ್ಯದ ಬಿಜೆಪಿ ಸಂಸಸದರು ಬಾಯಿ ತೆರೆದಿಲ್ಲ ಎಂದು ವಾಗ್ದಾಳಿ ನಡೆಸಿದರು.

2008 ರಲ್ಲಿ ಕಂಠೀರವ ಮೈದಾನದ ಬಳಿ ಸ್ಫೋಟವಾದಾಗ, 2020 ರಲ್ಲಿ ಸ್ಫೋಟ ನಡೆದಾಗ ಯಡಿಯೂರಪ್ಪ ಮುಖ್ಯಮಂತ್ರಿ ಆಗಿದ್ದರು. 2013 ರಲ್ಲಿ ಮಲ್ಲೇಶ್ವರಂ ನಲ್ಲಿ ಸ್ಫೋಟ ನಡೆದಾಗ ಜಗದೀಶ ಶೆಟ್ಟರ ಮುಖ್ಯಮಂತ್ರಿ ಆಗಿದ್ದರು. 2022 ಬಾಂಬ್ ಸ್ಫೋಟದ ಸಂದರ್ಭದಲ್ಲಿ ಮುಖ್ಯಮಂತ್ರಿ ಆಗಿದ್ದವರು ಬಸವರಾಜ ಬೊಮ್ಮಾಯಿ. 2010 ರಲ್ಲೂ ಬಾಂಬ್ ಸ್ಫೋಟ ಕೃತ್ಯವಾದಾಗಲೂ ಬಿಜೆಪಿ ಸರ್ಕಾರವೇ ಅಧಿಕಾರದಲ್ಲಿ ಇತ್ತು. ಈಗ ರಾಮೇಶ್ವರಂ ಕೆಫೆ ಸ್ಫೋಟದ ಘಟನೆಯನ್ನು



ಉಲ್ಲೇಖಿಸಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಟೀಕೆ ಮಾಡುವ ಪ್ರಧಾನಿ ನರೇಂದ್ರ ಮೋದಿ ಹಿಂದಿನ ಸ್ಫೋಟ ಕೃತ್ಯಗಳು ಸಂಭವಿಸಿದಾಗ ಯಾವ ಪಕ್ಷದ ಸರ್ಕಾರದ ಅಧಿಕಾರದಲ್ಲಿ ಇತ್ತು ಎಂಬುದನ್ನು ಹೇಳಲಿ ಎಂದು ಸವಾಲು ಹಾಕಿದರು.

ಜಗತ್ತಿನ ಅತಿ ಸುಳ್ಳುಗಾರ ಎಂದು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ವಾಗ್ದಾಳಿ ನಡೆಸಿದ ಸಚಿವ ರಾಮಲಿಂಗಾರೆಡ್ಡಿ, ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ 200 ಸ್ಥಾನಗಳಲ್ಲಿ ಗೆಲ್ಲುವುದು ಕಷ್ಟ. ಏಕೆಂದರೆ ಮೋದಿ ಜನಯಪ್ರಿಯತೆ ಕಳೆದುಕೊಂಡಿದ್ದು, ಅವರ ಕಾರ್ಯಕ್ರಮಕ್ಕೆ ಜನ ಬರುತ್ತಿಲ್ಲ. ಖಾಲಿಕುರ್ಚಿಗಳೇ ರಾರಾಜಿಸುತ್ತವೆ ಎಂಬ ಕಾರಣಕ್ಕೆ ಮೋದಿ ಬೆಂಗಳೂರಿಗೆ ಬರುವಾಗ ಜನರನ್ನು ಕರೆದುಕೊಂಡು ಬರುತ್ತಾರೆ ಎಂದು ಕುಟುಕಿದರು.

## ಕಾಂಗ್ರೆಸ್ ಅಪಪ್ರಚಾರಕ್ಕೆ ಕಿವಿಗೊಡಬೇಡಿ– ಬಿ.ವೈ. ರಾಘವೇಂದ್ರ

ಆನಂದಪುರ: 'ಬಿಜೆಪಿ ಅಧಿಕಾರಕ್ಕೆ ಬಂದರೆ ಸಂವಿಧಾನ ಬದಲಿಸುತ್ತದೆ ಎಂಬ ಕಾಂಗ್ರೆಸ್ ಅಪಪ್ರಚಾರಕ್ಕೆ ಕಿವಿಗೊಡಬೇಡಿ' ಎಂದು ಬಿಜೆಪಿ ಅಭ್ಯರ್ಥಿ ಬಿ.ವೈ. ರಾಘವೇಂದ್ರ ಮನವಿ ಮಾಡಿದರು. ಅವರು ಆನಂದಪುರದಲ್ಲಿ ಬುಧವಾರ ನಡೆದ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿದರು. 'ಉತ್ತಮ ಉದ್ದೇಶವನ್ನು ಹೊಂದಿರುವ ಸಂವಿಧಾನವನ್ನು ಬದಲಿಸುವುದು ಅಸಾಧ್ಯ.

ಅಂಬೇಡ್ಕರ್ ಅವರ ಹುಟ್ಟು ಸಾವಿನ ಸ್ಥಳ ಸೇರಿ 5 ಸ್ಥಳಗಳನ್ನು ಪಂಚ ಕ್ಷೇತ್ರಗಳಾಗಿ ಅಭಿವೃದ್ಧಿ ಮಾಡುತ್ತಿದ್ದಾರೆ. ಬಿಜೆಪಿ ಯಾವಗಲೂ ಸಂವಿಧಾನಕ್ಕೆ ಧಕ್ಕೆ ಆಗುವ ಕೆಲಸ ಮಾಡುವುದಿಲ್ಲ' ಎಂದು ತಿರುಗೇಟು ನೀಡಿದರು.

'ಈ ಬಾರಿ ನಡೆಯುತ್ತಿರುವುದು ರಾಷ್ಟ್ರಕ್ಕಾಗಿ ಚುನಾವಣೆ, ಜಾತಿಗಾಗಿ ಮತವಲ್ಲ. ಕಾಂಗ್ರೆಸ್ ದ್ವೇಷದ ರಾಜಕಾರಣ ಮಾಡುತ್ತಿದ್ದು, ದಲ್ಲಾಳಿಗಳ ಮೂಲಕ ವಸೂಲಿ ಮಾಡುವುದೇ ಅವರ ಕಾರ್ಯಕ್ರಮವಾಗಿದೆ' ಎಂದು ಮಾಜಿ ಸಚಿವ ಕುಮಾರ ಬಂಗಾರಪ್ಪ ಹೇಳಿದರು.

'ನಮ್ಮ ಬಾವ, ತಂಗಿ, ತಮ್ಮ ಯಾರೇ ಬಂದರೂ ಬಿಜೆಪಿಯನ್ನು ಅಲುಗಾಡಿಸುವುದಕ್ಕೆ ಅಗುವುದಿಲ್ಲ. ಕೈಯ ಮುಷ್ಠಿ ಕಟ್ಟಿದಾಗ ರಾಜಕಾರಣದಲ್ಲಿ ಯಾವಾಗಲೂ ಹೆಬ್ಬಟ್ಟಿನ ಕೆಲಸವನ್ನು ಅಂದರೆ ಎದ್ದು ನಿಲ್ಲುವ ಕೆಲಸವನ್ನು ಬಿಜೆಪಿ ಮಾಡುತ್ತದೆ. ರಾಘಣ್ಣನ ಕೆಲಸದ ಮುಂದೆ ಅವರ ಆಟ ನಡೆಯಲ್ಲ' ಎಂದು ತಮ್ಮ ವಿರೋಧಿ ಗುಂಪಿಗೆ ಟಾಂಗ್ ನೀಡಿದರು.

'ಚಿತ್ರರಂಗದಲ್ಲಿ ನಾಯಕ ನಾಯಕಿ ಹೀಗಿರಬೇಕು ಹಾಗಿರಬೇಕು ಎಂದು ಹೇಳುತ್ತೇವೆ.



ಆದರೆ ರಾಜಕೀಯ ರಂಗದಲ್ಲಿ ನಾಯಕನಿಗಿಂತ ಸೇವಕ ಬೇಕು. ಕಷ್ಟಗಳನ್ನು ಆಲಿಸುವ, ಬದುಕು ಕಟ್ಟಿಕೊಡುವಂತಹ ಮಹಾನ್ ಸೇವಕ ಬೇಕು. ಆ ರೀತಿಯಲ್ಲಿ ಸೇವೆ ಮಾಡುತ್ತಾ ಮನೆ ಮಗನಾಗಿ ಕೆಲಸ ನಿರ್ವಹಿಸುತ್ತಿರುವ ಸಹೋದರ ರಾಘಣ್ಣನನ್ನು ಅತ್ಯಧಿಕ ಅಂತರದಿಂದ ಗೆಲ್ಲಿಸಬೇಕು' ಎಂದು ಚಿತ್ರನಟಿ ತಾರ ಹೇಳಿದರು.

ಬಿಜೆಪಿ ರಾಜ್ಯ ಘಟಕದ ಉಪಾಧ್ಯಕ್ಷ ಹರತಾಳು ಹಾಲಪ್ಪ, ಪ್ರಮುಖರಾದ ರತ್ನಾಕರ್ ಹೊನಗೋಡು, ಮಲ್ಲಿಕಾರ್ಜುನ ಹಕ್ರೆ, ಶಾಂತಪ್ಪಗೌಡ, ರಾಜನಂದಿನಿ ಕಾಗೋಡು, ಪ್ರಸನ್ನ ಕೆರೆಕೈ, ದೇವೇಂದ್ರಪ್ಪ, ಮೋಹನ್ ಕುಮಾರ್, ಗುರುರಾಜ್, ಹಿರಣಯ್ಯ, ಪ್ರಕಾಶ್, ಮೋಹನ್ ಕಾಲೊನಿ ಇದ್ದರು.

## ಬಂಗಾರಪ್ಪನವರಂತೆ ನಾನೂ ನಿಮ್ಮ ಸೇವೆಗೆ ಸಿದ್ಧ; ಗೀತಾ ಶಿವರಾಜ್‌ಕುಮಾರ್

ತ್ಯಾಗರ್ತಿ: 'ಗ್ಯಾರಂಟಿ ಯೋಜನೆಗಳು ಮಧ್ಯವರ್ತಿಗಳಿಲ್ಲದೇ ನೇರವಾಗಿ ಜನರಿಗೆ ತಲುಪುವಂತಹ ಯೋಜನೆಯಾಗಿದ್ದು ಬಂಗಾರಪ್ಪ ಅವರ ಮಗಳಾಗಿ ಶಿವಮೊಗ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾಗಿ ಕಣಕ್ಕಿಳಿದಿರುವೆ. ತಮ್ಮ ಆಶೀರ್ವಾದ ಬೇಡುವೆ' ಎಂದು ಗೀತಾ ಶಿವರಾಜ್‌ಕುಮಾರ್ ಕೋರಿದರು.

ಸಾಗರ ತಾಲ್ಲೂಕಿನ ತ್ಯಾಗರ್ತಿಯಲ್ಲಿ ಬುಧವಾರ ಚುನಾವಣಾ ಪ್ರಚಾರ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, 'ಬಂಗಾರಪ್ಪ ಅವರ ಅಧಿಕಾರಾವಧಿಯಲ್ಲಿ ಜನಪರ ಯೋಜನೆಗಳನ್ನು ಜಾರಿಗೆ ತಂದು ಗ್ರಾಮೀಣ ಪ್ರದೇಶದ ರೈತರ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಅವರಂತೆ ನಾನೂ ನಿಮ್ಮ ಸೇವೆಗೆ ಸಿದ್ಧಳಾಗಿದ್ದು ಒಂದು ಅವಕಾಶವನ್ನು ಕಲ್ಪಿಸಿಕೊಡಿ' ಎಂದು ಮತ ಯಾಚಿಸಿದರು.

ಸಾಗರ ಶಾಸಕರಾದ ಗೋಪಾಲಕೃಷ್ಣ ಮಾತನಾಡಿ, 'ಬಂಗಾರಪ್ಪ ಅವರು ಮುಖ್ಯಮಂತ್ರಿಯಾಗಿದ್ದಾಗ ರೈತರಿಗೆ ಉಚಿತ ವಿದ್ಯುತ್ ಯೋಜನೆಯನ್ನು ಜಾರಿಗೆ ತಂದು ಪ್ರತಿ ರೈತರ ಅಭಿವೃದ್ಧಿಗೆ ಶ್ರಮಿಸಿದರು. ಆಶ್ರಯ, ಆರಾಧನಾ, ಅಕ್ಷಯ ಯೋಜನೆಯಡಿ ಗ್ರಾಮೀಣ ಪ್ರದೇಶದ ಅಭಿವೃದ್ಧಿಗೆ ಸಹಕಾರಿಯಾಗಿದ್ದರು. ಅದರಂತೆ ಇಂದಿನ ಸಿದ್ದರಾಮಯ್ಯ ನೇತೃತ್ವದ ಸರ್ಕಾರ 5 ಗ್ಯಾರಂಟಿಗಳನ್ನು ಈಡೇರಿಸಿದೆ' ಎಂದು ಹೇಳಿದರು. ಮುಖಂಡರಾದ ಚೇತನ್‌ರಾಜ್ ಕಣ್ಣೂರು, ಸೋಮಶೇಖರ್ ಲಾವಿಗೆರೆ, ಶಿವರಾಜ್‌ಕುಮಾರ್, ದುನಿಯಾ ವಿಜಯ್, ಕಲಸೆ ಚಂದ್ರಪ್ಪ, ಜ್ಯೋತಿ, ರೇಖಾ ಸೇರಿ ಹಲವಾರು ಗಣ್ಯರು ಉಪಸ್ಥಿತರಿದ್ದರು.

## ಜನ ಮೋದಿ ಮೋದಿ ಎಂದರೆ ಕಾಂಗ್ರೆಸ್‌ಗೆ ಭೇದಿ ಜಾಸ್ತಿಯಾಗುತ್ತೆ ಅದಕ್ಕೆ ಚೆಂಬು ಬಿಡುತ್ತಿಲ್ಲ: ಸಿ.ಟಿ. ರವಿ

ಕೊಪ್ಪಳ: ಈ ಬರಿ ಲೋಕ ಸಭಾ ಚುನಾವಣೆಯಲ್ಲಿ ಜನರು ಮೋದಿ ಪರವಾಗಿ ಇರುವುದನ್ನು ಕಂಡು ಕಾಂಗ್ರೆಸ್ ಹೊಟ್ಟೆಕಿಚ್ಚು ಪಡುತ್ತಿದೆ, ಒಂದೆಡೆ ಜನರು ಮೋದಿ ಮೋದಿ ಎಂದು ಹೇಳಿದರೆ ಕಾಂಗ್ರೆಸ್ ಗೆ ಬೇದಿ ಜಾಸ್ತಿ ಆಗುತ್ತೆ ಹಾಗಾಗಿ ಅವರು ಚೆಂಬು ಕೈಯಲ್ಲಿ ಬಿಡುತ್ತಿಲ್ಲ ಎಂದು ಮಾಜಿ ಸಚಿವ ಸಿ.ಟಿ. ರವಿ ಕಾಂಗ್ರೆಸ್ ವಿರುದ್ಧ ಹರಿಹಾಯ್ದಿದ್ದಾರೆ.

ಕೊಪ್ಪಳದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು ಕಾರ್ಮಿಕರ ದುಡಿಮೆಯಲ್ಲಿ ದೇಶದ ಭವಿಷ್ಯವಿದೆ ಪ್ರಧಾನಿ ತಮ್ಮನ್ನ ಪ್ರಧಾನ ಸೇವಕ ಎಂದು ಕರೆದಿದ್ದಾರೆ ಅವರು ನಾಡಿನ ಪ್ರಧಾನ ಸೇವಕ ಅವರ ಉದ್ದೇಶ ರಾಜಕಾರಣ ನಾಡಿನ ಸೇವೆಗೆ ಇರಬೇಕು ಎಂದವರು, ಪ್ರಧಾನಿ ಮೋದಿ ಅವರು ಒಂದು ದಿನವೂ ರಜೆ ಪಡೆಯದೇ ಭ್ರಷ್ಟಾಚಾರ ರಹಿತ ಆಡಳಿತ ಕೊಟ್ಟಿದ್ದಾರೆ ಹಾಗಾಗಿ ಈ ಚುನಾವಣೆಯಲ್ಲಿ ಮತ್ತೊಮ್ಮೆ ಮೋದಿ ಪ್ರಧಾನಿಯಾಗಿ ಮುಂದುವರೆಯಬೇಕು ಎಂದು ವಿಕಸಿತ ಭಾರತದ ಸಂಕಲ್ಪ ಪತ್ರ ಜನರ ಮುಂದಿಟ್ಟು ಮತಯಾಚನೆ ಮಾಡಿದೆ ಎಂದು ಹೇಳಿದರು.

10 ವರ್ಷದಲ್ಲಿ ಆಡಳಿತಾತ್ಮಕ ಸುಧಾರಣೆಯಾಗಿದೆ ದೇಶದ ಜನರನ್ನು ದೇಶದ ಹೊರ ಹಾಗೂ ಒಳಗೆ ಸಂರಕ್ಷಣೆ ಮಾಡಲಾಗಿದೆ ದೇಶದ ಅಭಿವೃದ್ಧಿ, ಅಂತ್ಯೋದಯದ ಮೂಲಕ ಸರ್ವೋದಯವಾಗಿದೆ, ಸುಧಾರಣೆ ಡಿಬಿಟಿ ಹಾಗೂ ಜಿಎಸ್ಟಿ ಮೂಲಕ ಆಗಿದೆ ಹಲವು ಪಾಲಸಿಗಳ ಮೂಲಕ ಸುಧಾರಣೆ ತಂದಿದೆ, ಭಯೋತ್ಪಾದನೆಯಿಂದ ಸಂರಕ್ಷಣೆ ಮಾಡಿದೆ ಉಕ್ರೇನ್, ಸುಡಾನ್ , ಇರಾನ್, ಇಸ್ರೇಲ್, ಅಪಘಾನಿಸ್ತಾನದಲ್ಲಿ ಸಿಲುಕಿದ ಜನರ ಸಂರಕ್ಷಣೆ ಮಾಡಿದೆ, ಭಾರತ ದೊಡ್ಡ ಆರ್ಥಿಕ ಶಕ್ತಿಯಾಗಿ ಬದಲಾಗಿದೆ. ಈಗ ಉದ್ಯೋಗ ಸೃಷ್ಟಿಯಾಗಿ ಗೋಚರ ಆಗುತ್ತಿದೆ ದೇಶದಿಂದ ರಫ್ತು ಹೆಚ್ಚಾಗುತ್ತಿದೆ ಎಂದರು.

ಕಳೆದ ವರ್ಷ ದೇಶದಲ್ಲಿ 2.71 ಕೋಟಿ ವಾಹನಗಳ ಖರೀದಿ ಮಾರಾಟ ಆಗಿದೆ ಇದು ಸರ್ವ ಕಾಲಿಕ ಹಾಗೂ ಜಾಗತೀಕ ದಾಖಲೆ ಆಗಿದೆ. ಅಯೋಧ್ಯಾ, ಉಜ್ಜಯಿನಿ, ಸೋಮನಾಥ ಕಾರಿಡಾರ್ ಆಗಿದೆ. ಭಾರತದ ಸಾಂಸ್ಕೃತಿಕ ಅಸ್ಮಿತೆಗೆ ಜಾಗತೀಕ ಗುರುತಿಸುವಿಕೆ ಭಾರತ ಮಾಡಿದೆ. ರೈಲ್ವೇ ವಿದ್ಯೂದ್ದೀಕರಣ, ವಿಮಾನ ನಿಲ್ದಾಣ, ಚತುಸ್ಪಥ ಹೆದ್ದಾರಿ ನಿರ್ಮಾಣ ಮಾಡಿದೆ.

ಬಡವರಿಗೆ ಲಾಭ ವರ್ಗಾಯಿಸುವ ಕೆಲಸ ನಾವು ಮಾಡಿದ್ದೇವೆ, ಮೋದಿ ಗ್ಯಾರಂಟಿ ಬದುಕನ್ನು ಬದಲಿಸಿದೆ, ಗೌರವದ ಜೊತೆಗೆ ಭಾರತೀಯರು ಬದುಕಬೇಕು ಎನ್ನುವುದು ಮೋದಿ ಗ್ಯಾರಂಟಿ, ಅಭಿವೃದ್ಧಿ ಹೊಂದಿದ ಸುರಕ್ಷಿತ ಭಾರತ ನಮ್ಮ ಗುರಿಯಾಗಿದೆ. ಮೋದಿ ನಾಲ್ಕು ಜಾತಿಗಳ ಲೆಕ್ಕ ಹಾಕಿದ್ದಾರೆ. ಬಡವರು, ಮಹಿಳೆಯರು, ರೈತರು ಮತ್ತು ಯುವಕರ ಬಗ್ಗೆ ಮೋದಿ ವಿಶೇಷ ಕಾಳಜಿ ವಹಿಸಿದ್ದಾರೆ. ಮೋದಿ ಪರಿವಾರದಲ್ಲಿ ದೇಶದಲ್ಲಿ 140 ಕೋಟಿ ಜನ ಇದ್ದಾರೆ, ಆಡು ಮುಟ್ಟದ ಸೊಪ್ಪಿಲ್ಲ, ಕಾಂಗ್ರೆಸ್ ಮುಟ್ಟದ ಭ್ರಷ್ಟಾಚಾರವಿಲ್ಲ ಎನ್ನುವುದಿತ್ತು ಮೋದಿ ಹೊಸ ಯೋಜನೆಗಳ ಮೂಲಕ ಭಾರತ ಅಭಿವೃದ್ಧಿ ಮಾಡಿದ್ದಾರೆ. ಯಾವ ಕ್ಷೇತ್ರದಲ್ಲಿ ದುರ್ಬಲ ಇದ್ದೆವೋ ಅದಕ್ಕಾಗಿ ಆತ್ಮ ನಿರ್ಭರ ಯೋಜನೆ ಜಾರಿ ತಂದಿದೆ ಮೂರು ವರ್ಷದಲ್ಲಿ 3ನೇ ಆರ್ಥಿಕ ಶಕ್ತಿ ನಾವಾಗಲಿದ್ದೇವೆ. ಜಪಾನ್,ಜರ್ಮನ್ ಹಿಂದೆ ಹಾಕಲಿದ್ದೇವೆ ಭಾರತ ಜಗತ್ತಿನ ಎದುರು ತಲೆ ತಗ್ಗಿಸಬಾರದು ಭಾರತ ವಿದೇಶದಲ್ಲಿ ತಲೆಎತ್ತಿ ನಿಲ್ಲಬೇಕು ಕಾಂಗ್ರೆಸ್ ಗೆ ನೀತಿ ಇಲ್ಲ, ನಿಯತ್ತಿಲ್ಲ, ನೇತೃತ್ವ ಇಲ್ಲ ಕಾಂಗ್ರೆಸ್ ನಿಯೋಜಿತ ಪ್ರಧಾನಿ ಅಭ್ಯರ್ಥಿ ಹೆಸರು ಹೇಳಲು ಹೆದರುತ್ತಿದ್ದಾರೆ.

ಚುನಾವಣೆಯಲ್ಲಿ ಖರ್ಗೆ ಅಳಿಯನ ಗೆಲ್ಲಿಸಲು ಪ್ರಯತ್ನಗಳು ನಡೆಯುತ್ತಿವೆ ಕಾಂಗ್ರೆಸ್ ಗೆ ಸಾಧನೆಯ ಬಲ ಇಲ್ಲ , ಅವರಿಗೆ ಅಪ ಪ್ರಚಾರ, ಅಪನಂಬಿಕೆ ಮೂಲಕ ಜನರ ದಿಕ್ಕು ತಪ್ಪಿಸುವ ಕೆಲಸ ಮಾಡಿದೆ ಹಾಗಾಗಿ ಜಾಹಿರಾತಿನಲ್ಲಿ ಚಂಬು ಬಳಸಿದರು. ಜನ ಮೋದಿ ಮೋದಿ ಎಂದರೆ ಕಾಂಗ್ರೆಸ್ ಗೆ ಬೇದಿ ಜಾಸ್ತಿ ಆದಂತೆ ಕಾಣುತ್ತಿದೆ ಹಾಗಾಗಿ ನೀವು



ಚೆಂಬು ಬಿಡುವಂತಿಲ್ಲ.

ಕಾಂಗ್ರೆಸ್ ತುಷ್ಟೀಕರಣದ ರಾಜಕಾರಣ ಮಾಡುತ್ತಿದೆ. ಜಿನ್ನಾ ಕನಸು ನನಸು ಮಾಡುವ ರೀತಿ, ಅಂಬೇಡ್ಕರ್ ಗೆ ಅಪಮಾನ ಮಾಡುವ ರೀತಿ ಅವರ ಪ್ರಣಾಳಿಕೆ ಇದೆ. ನಮಗೆ ಜಾತಿ ಆಧಾರಿತ ಮೀಸಲಾತಿ ಇದೆ. ಓಬಿಸಿ ಒಳಗೆ ಮತ ಆಧಾರಿತ ಮೀಸಲಾತಿ ತುರುಕಿದೆ.

ದೇಶದ ಸಂಪತ್ತಿನ ಮೊದಲ ಅಧಿಕಾರ ಮುಸ್ಲಿಂಗೆ ಎಂದು ಮನಮೋಹನ್ ಸಿಂಗ್ ಹೇಳಿದ್ದರು. ನಾವು ಬಡವರಿಗೆ ಮೊದಲ ಅಧಿಕಾರ ಎಂದಿದ್ದೇವೆ, ಜನರ ಸಂಪತ್ತಿನ ಮೇಲೆ ಕಾಂಗ್ರೆಸ್ ಕಣ್ಣು ಇಟ್ಟಿದೆ ವ್ಯಕ್ತಿಗತ ಜನರ ಸಂಪತ್ತು ಗಣತಿಗೆ ಕಾಂಗ್ರೆಸ್ ಮುಂದಾಗಿದೆ ಅವರಿಗೆ ಸೋಲಿನ ಭಯ ಕಾಡುತ್ತಿದೆ.

ಸುಳ್ಳು– ಕಾಂಗ್ರೆಸ್ ಒಂದು ನಾಣ್ಯದ ಎರಡು ಮುಖಗಳು 1.42 ಲಕ್ಷ ಕೋಟಿ ಕೇಂದ್ರ 2004–14ರ ವರೆಗೂ ರಾಜ್ಯಕ್ಕೆ ಕೊಟ್ಟಿದೆ ಅವರು ಚೆಂಬಿನ ಜಾಹಿರಾತು ಕೊಟ್ಟಿದ್ದಾರೆ. ಅಪಪ್ರಚಾರ ಅಪನಂಬಿಕೆ ಮಾಡುತ್ತಿದೆ ಬರ ನಿರ್ವಹಣೆಯಲ್ಲಿ ನಿಮ್ಮ ಖಜಾನೆಯಿಂದ ಏಷ್ಟು ಹಣ ಕೊಟ್ಟಿದ್ದಾರೆ. ಈ ಬಗ್ಗೆ ಸಿಎಂ, ಸಚಿವರು ತಲೆ ಕೆಡಿಸಿಕೊಂಡಿಲ್ಲ ಕಾಂಗ್ರೆಸ್ ಅವರನ್ನು ಮಂಪರು ಪರೀಕ್ಷೆ ಮಾಡಿದರೆ ಮಷಿನ್ ಸಹ ತನ್ನ ಮಿತಿ ದಾಟುತ್ತೆ ಎಂದು ಗುಡುಗಿದರು.

ಯಾವುದೇ ಅನ್ಯಾಯ ಸಹಿಸಲ್ಲ, ನ್ಯಾಯ ಸಮಾನವಾಗಿರಬೇಕು ಎಸ್‌ಐಟಿ ತನಿಖೆ ಮಾಡಲಿ ಪ್ರಜ್ವಲ್ ಪರ ಹಿಂದೆ ಸಿಎಂ ಸೇರಿ ಕಾಂಗ್ರೆಸ್ ನಾಯಕರೇ ಪ್ರಚಾರ ಮಾಡಿದ್ದರು ಉಪ್ಪು ತಿಂದವನು ನೀರು ಕುಡಿಯಬೇಕು ಇದು ಎಲ್ಲರಿಗೂ ಆಗಬೇಕು ನಾವು ಪ್ರಕರಣ ಖಂಡಿಸಿದ್ದೇವೆ ತನಿಖೆ ನಂತರ ಸತ್ಯ ಸುಳ್ಳು ಹೊರಬರಲಿದೆ.

ಸರ್ಕಾರ ಯಾವುದೇ ಕಠಿಣ ಕ್ರಮ ಕೈಗೊಳ್ಳಲಿ, ನೇಹಾ ಹತ್ಯೆಯಾದ ನಂತರ ಸಿಎಂ, ಗೃಹ ಸಚಿವರ ಹೇಳಿಕೆ ಖಂಡಿಸುವೆ ಕಾಂಗ್ರೆಸ್ ಓಲೈಕೆ ರಾಜಕಾರಣದ ವಿರುದ್ದ ನಮ್ಮ ಧ್ವನಿ ಕಾಂಗ್ರೆಸ್ ದ್ವಂದ್ವ ನಿಲುವು ಇದೆ ನಾವು ಪ್ರಜ್ವಲ್ ಪರ ವಕಾಲತ್ತು ವಹಿಸಲ್ಲ ಎಂದು ಹೇಳಿದರು.

ಗ್ಯಾರಂಟಿ ಯಿಂದ ಹಾಲಿನ ದರ ಬಂದಿಲ್ಲ ಗ್ಯಾರಂಟಿಗಳಿಗೆ ಅವರ ಫಾದರ್ ಮನೆ ಆಸ್ತಿ ಮಾರಿಯಾದರೂ ಹಣ ಕೊಡಲಿ ಆದರೆ ರಾಜ್ಯ ಮಾರಬೇಡಿ ನಾವು ಕೇಂದ್ರದಿಂದ ಪರಿಹಾರ ಕೊಟ್ಟಿದ್ದೇವೆ ನೀವು ಏಷ್ಟು ಕೊಟ್ಟಿದ್ದೀರಿ ? ನಿಮ್ಮ ಚಂಬು ಖಾಲಿಯಾಗಿದೆಯಾ ? ತೂತು ಬಿದ್ದಿದೆಯಾ ? ಎಂದು ರಾಜ್ಯ ಕಾಂಗ್ರೆಸ್ ವಿರುದ್ದ ಸಿ ಟಿ ರವಿ ಗುಡುಗು.

## ಸಂಪಾದಕೀಯ

# ಭಾರತದಲ್ಲಿ ತೀವ್ರ ನಿರುದ್ಯೋಗ; ಸರ್ಕಾರ ಎಚ್ಚರಗೊಳ್ಳಲು ಸಕಾಲ

ಭಾರತದಲ್ಲಿ ನಿರುದ್ಯೋಗ ಸಮಸ್ಯೆಯು ಗಂಭೀರವಾಗಿಯೇ ಇದೆ ಎಂದು ಅಂತರರಾಷ್ಟ್ರೀಯ ಕಾರ್ಮಿಕ ಸಂಘಟನೆಯು (ಐಎಲ್‌ಒ) ಇತ್ತೀಚೆಗೆ ಬಿಡುಗಡೆ ಮಾಡಿದ 'ಭಾರತದ ಉದ್ಯೋಗ ಸ್ಥಿತಿಯ ವರದಿ' ಹೇಳಿದೆ. ನಿರುದ್ಯೋಗಿಗಳ ಪೈಕಿ ಶೇಕಡ 83ರಷ್ಟು ಯುವಜನರೇ ಇದ್ದಾರೆ ಎಂದು ವರದಿಯಲ್ಲಿ ಹೇಳಲಾಗಿದೆ.

ಪ್ರೌಢಶಿಕ್ಷಣ ಪಡೆದ ನಿರುದ್ಯೋಗಿ ಯುವಜನರ ಪ್ರಮಾಣವು 2000ನೇ ಇಸವಿಯಲ್ಲಿ ಶೇ 35.2ರಷ್ಟು ಇತ್ತು; ಈ ಪ್ರಮಾಣವು 2022ರಲ್ಲಿ ಶೇ 65.7ರಷ್ಟಕ್ಕೆ ಏರಿಕೆಯಾಗಿದೆ. ಕಾರ್ಮಿಕ ವರ್ಗದ ಭಾಗವಹಿಸುವಿಕೆ ದರ (ಎಲ್‌ಎಫ್‌ಪಿಆರ್), ಕಾರ್ಮಿಕ–ಜನಸಂಖ್ಯೆ ಅನುಪಾತವು 2000ನೇ ಇಸವಿಯಿಂದ 2018ರವರೆಗಿನ ದೀರ್ಘಾವಧಿಯಲ್ಲಿ ಕುಸಿಯುತ್ತಲೇ ಸಾಗಿತ್ತು.

2019ರ ಬಳಿಕ ಈ ಅಂಶಗಳಲ್ಲಿ ಅಲ್ಪ ಸುಧಾರಣೆ ಕಂಡಿ–ದೆ. ಈ ಸುಧಾರಣೆಯನ್ನು ಕೂಡ ಹೆಚ್ಚು ಜಾಗರೂಕತೆಯಿಂದ ವ್ಯಾಖ್ಯಾನಿಸಬೇಕಾಗಿದೆ ಎಂದು ವರದಿಯಲ್ಲಿ ಹೇಳಲಾಗಿದೆ. ಏಕೆಂದರೆ, ಆರ್ಥಿಕತೆಯ ಬೆಳವಣಿಗೆ ದರವು ಅತ್ಯಂತ ಕಡಿಮೆ ಇದ್ದ ಅವಧಿಯಲ್ಲಿ ಈ ಸುಧಾರಣೆ ಕಂಡುಬಂದಿರುವುದು ಪ್ರಶ್ನೆ ಹುಟ್ಟುಹಾಕಿದೆ. ಕಾರ್ಮಿಕ ವರ್ಗದಲ್ಲಿ ಶೇ 90ರಷ್ಟು ಮಂದಿ ಅನೌಪಚಾರಿಕ ಕೆಲಸಗಳಲ್ಲಿ ಇದ್ದಾರೆ.

ಕಾರ್ಮಿಕ ವರ್ಗದ ಭಾಗವಹಿಸುವಿಕೆ ದರವು ಇಂಡೊನೇಷ್ಯಾ ಮತ್ತು ವಿಯೆಟ್ನಾಂನಂತಹ ಅಭಿವೃದ್ಧಿಶೀಲ ದೇಶಗಳಿಗಿಂತಲೂ ಭಾರತದಲ್ಲಿ ಕಡಿಮೆ ಇದೆ. ಈ ದೇಶಗಳಲ್ಲಿ ಈ ದರವು ಶೇ 60ಕ್ಕಿಂತ ಹೆಚ್ಚು ಇದೆ. ಮಹಿಳೆಯರ ಭಾಗವಹಿಸುವಿಕೆ ದರವು 2022ರಲ್ಲಿ ಶೇ 32.8ರಷ್ಟು ಮಾತ್ರ ಇತ್ತು. ಇದು ಅತ್ಯಂತ ಕಳವಳಕಾರಿ. ಪುರುಷರ ಭಾಗವಹಿಸುವಿಕೆ ದರವು ಶೇ 77.2ರಷ್ಟಿದೆ. ಮಹಿಳೆಯರ ದರಕ್ಕೆ ಹೋಲಿಸಿದರೆ ಇದು 2.3 ಪಟ್ಟು ಹೆಚ್ಚು.

ವರದಿಯಲ್ಲಿ ಎಚ್ಚರಿಕೆಯ ಅಂಶಗಳು ಹಲವು ಇವೆ. 2010ರಿಂದ 2019ರ ನಡುವೆ ಉದ್ಯೋಗ, ಶಿಕ್ಷಣ ಅಥವಾ ತರಬೇತಿಯಲ್ಲಿ ತೊಡಗಿಕೊಂಡಿಲ್ಲದ ಯುವಜನರ ಪಾಲು ಸರಾಸರಿ ಶೇ 29.2ರಷ್ಟಿತ್ತು. ಇದು ದಕ್ಷಿಣ ಏಷ್ಯಾದಲ್ಲಿಯೇ ಅತಿ ಹೆಚ್ಚು. ಕುಶಲ ಕೆಲಸಗಳಿಗೆ ಉದ್ಯೋಗಿಗಳೇ ಸಿಗುತ್ತಿಲ್ಲ ಎಂಬ ದೂರು ಉದ್ಯಮ ವಲಯದಲ್ಲಿ ಸದಾ ಇದೆ. ಹಾಗಿದ್ದರೂ ನಿರುದ್ಯೋಗಿಗಳಲ್ಲಿ ಹೆಚ್ಚಿನವರು ವಿದ್ಯಾವಂತರೇ ಎಂಬುದು ವಿರೋಧಾಭಾಸಕರ.

ನಮ್ಮ ಶಿಕ್ಷಣ ವ್ಯವಸ್ಥೆಯು ಉದ್ಯೋಗಗಳಿಗೆ ಬೇಕಾದ ಸಮರ್ಪಕ ತರಬೇತಿಯನ್ನು ನೀಡುತ್ತಿಲ್ಲ ಎಂಬುದು ಒಂದೆಡೆ ಯಾದರೆ, ಅರ್ಥವ್ಯವಸ್ಥೆಯು ಅಗತ್ಯ ಇರುವಷ್ಟು ಉದ್ಯೋಗಗಳನ್ನು ಸೃಷ್ಟಿಸುತ್ತಿಲ್ಲ ಎಂಬುದು ಇನ್ನೊಂದು ವಾಸ್ತವ. ಕೋವಿಡ್ ಸಾಂಕ್ರಾಮಿಕದ ಬಳಿಕ ಅರ್ಥವ್ಯವಸ್ಥೆಯು ಚೇತರಿಸಿಕೊಂಡಿದ್ದರೂ ಸೃಷ್ಟಿಯಾಗು ತ್ತಿರುವ ಉದ್ಯೋಗದ ಸ್ವರೂಪವೇ ಬದಲಾಗಿದೆ.

ಹಲವು ಮಂದಿ ಬೇಸಾಯ ಮಾಡಲು ಹಿಂದಿರುಗಿದ್ದಾರೆ. ಆದರೆ ಬೇಸಾಯವನ್ನು ಲಾಭದಾಯಕ ಎಂದು ಪರಿಗಣಿಸುವುದಕ್ಕೆ ಸಾಧ್ಯವಿಲ್ಲ. ಬಹಳ ಮಂದಿ, ಅದರಲ್ಲೂ ಮುಖ್ಯವಾಗಿ ಮಹಿಳೆಯರು ಸ್ವಉದ್ಯೋಗ ಕಂಡುಕೊಂಡಿದ್ದಾರೆ. ಆದರೆ ಅವು ಸುಸ್ಥಿರವಲ್ಲ ಮತ್ತು ವೈಫಲ್ಯದ ಭಯ ಸದಾ ಇರುತ್ತದೆ. ಬೇಸಾಯೇತರ ಉದ್ಯೋಗಗಳಲ್ಲಿ ಕುಸಿತ ಉಂಟಾಗಿದೆ. ಬಹಳ ಜನರಿಗೆ ಪೂರ್ಣಾವಧಿ ಕೆಲಸ ಇಲ್ಲದಿರುವುದು ಗಂಭೀರವಾದ ಸಮಸ್ಯೆಯಾಗಿದೆ.

ಜನಸಂಖ್ಯೆಯಲ್ಲಿ ಯುವಜನರ ಪಾಲು ಗಣನೀಯ ಎಂಬ ವಿಚಾರದಲ್ಲಿ ಭಾರತಕ್ಕೆ ಬಹುದೊಡ್ಡ ಹೆಮ್ಮೆ ಇದೆ. ದೊಡ್ಡ ಪ್ರಮಾಣದಲ್ಲಿ ಇರುವ ಯುವ ಸಮೂಹದ ಅನುಕೂಲವನ್ನು ಪಡೆದುಕೊಳ್ಳಬೇಕು ಎಂಬ ಬಯಕೆಯನ್ನೂ ದೇಶವು ಹೊಂದಿದೆ. ಆದರೆ ಜನಸಂಖ್ಯೆಯಲ್ಲಿ ಇರುವ ಯುವಜನರ ಪಾಲು ಕ್ರಮೇಣ ಕುಸಿಯಲಿದೆ. ಹಾಗಾಗಿ, ದೇಶದ ಪ್ರಗತಿಯಲ್ಲಿ ಈ ಯುವ ವರ್ಗದ ಅನುಕೂಲ ಪಡೆಯಬಹುದು ಎಂಬ ಅಂಶವೂ ಮರೆಯಾಗುತ್ತದೆ.

ದೊಡ್ಡ ಮಟ್ಟದ ನಿರುದ್ಯೋಗವು ಸೃಷ್ಟಿಸುವ ಸಂಕಟ ಮತ್ತು ಅತೃಪ್ತಿಯು ಆರ್ಥಿಕವಾಗಿ, ಸಾಮಾಜಿಕವಾಗಿ ಮತ್ತು ರಾಜಕೀಯವಾಗಿ ಗಂಭೀರ ಪರಿಣಾಮಗಳನ್ನು ಉಂಟು ಮಾಡಬಲ್ಲದು. ಆರ್ಥಿಕ ಪ್ರಗತಿಯೊಂದೇ ಸಾಲದು. ಅಸಮಾನ ಪ್ರಗತಿ, ನಿರುದ್ಯೋಗ ಮತ್ತು ಹಣದುಬ್ಬರ ಒಟ್ಟಾಗಿ ಬಿಕ್ಕಟ್ಟು ಸೃಷ್ಟಿಸಬಲ್ಲವು. ಈಗ ಇರುವ ಸಂಕಷ್ಟದ ಸ್ಥಿತಿಯಿಂದ ದೇಶವು ಹೊರಗೆ ಬರಲು ಉದ್ಯೋಗ ಸೃಷ್ಟಿ ಆಧಾರಿತ ಆರ್ಥಿಕ ಪ್ರಗತಿ ಕಾರ್ಯತಂತ್ರ, ಅದಕ್ಕೆ ಪೂರಕವಾದ ಶಿಕ್ಷಣ ವ್ಯವಸ್ಥೆ, ಸಾಮರಸ್ಯದ ಸಾಮಾಜಿಕ ಮತ್ತು ಆರ್ಥಿಕ ನೀತಿಯು ಅತ್ಯಗತ್ಯ.

# ಉತ್ತಮ ಆರೋಗ್ಯಕ್ಕೆ ಕೆಮಿಕಲ್ ಮುಕ್ತ ಹಣ್ಣು–ತರಕಾರಿ ಬಳಸಿ



ಇತ್ತೀಚಿನ ದಿನಗಳಲ್ಲಿ ಹಣ್ಣು ಮತ್ತು ತರಕಾರಿಗಳು ಹೆಚ್ಚು ದಿನ ತಾಜಾವಾಗಿರಲೆಂದು ಕ್ರಿಮಿನಾಶಕಗಳನ್ನು ಹೆಚ್ಚಾಗಿ ಬಳಸಲಾಗುತ್ತದೆ. ಇವುಗಳನ್ನು ಮಾರುಕಟ್ಟೆಯಿಂದ ತಂದು ನೇರವಾಗಿ ಅಡುಗೆಗೆ ಹಾಗೂ ತಿನ್ನುವುದಕ್ಕೆ ಬಳಸಿದರೆ ಅಪಾಯ ಕಟ್ಟಿಟ್ಟ ಬುತ್ತಿ.

ಹಾಗಾಗಿ ಹೊರಗಡೆಯಿಂದ ತಂದ ಹಣ್ಣು – ತರಕಾರಿಗಳನ್ನು ಚೆನ್ನಾಗಿ ಸ್ವಚ್ಛಗೊಳಿಸಿದ ನಂತರವಷ್ಟೇ ಬಳಸಬೇಕು.

ಹಣ್ಣು ತರಕಾರಿಗಳನ್ನು ಕೇವಲ ನೀರಿನಿಂದ ತೊಳೆದರೆ ಸಾಲದು. ಅವುಗಳಿಗೆ ಸಿಂಪಡಿಸಿರುವ ಕ್ರಿಮಿನಾಶಕಗಳು ಸಂಪೂರ್ಣವಾಗಿ ಹೋಗಬೇಕೆಂದರೆ ಕೆಲ ವಿಧಾನಗಳನ್ನು ಅನುಸರಿಸಬೇಕು.

* ಹಣ್ಣು ಮತ್ತು ತರಕಾರಿಗಳಲ್ಲಿರುವ ಕ್ರಿಮಿನಾಶಕಗಳನ್ನು ಸಂಪೂರ್ಣವಾಗಿ ತೆಗೆಯುವ ಅಂಶ ವಿನೆಗರ್ ಗೆ ಇದೆ. ಒಂದು ದೊಡ್ಡ ಟಬ್ ನಲ್ಲಿ ನೀರು ತುಂಬಿ ಅದಕ್ಕೆ ವಿನೆಗರ್ ಹಾಕಿ. ಅದರಲ್ಲಿ ಹಣ್ಣು ಮತ್ತು ತರಕಾರಿಗಳನ್ನು ಹಾಕಿ ಸ್ವಲ್ಪ ಸಮಯ ಬಿಡಿ. ನಂತರ ಶುಭ್ರವಾದ ನೀರಿನಿಂದ ಸ್ವಚ್ಛಗೊಳಿಸಿ ನಂತರ ಉಪಯೋಗಿಸಿ.

* ಹಣ್ಣು ಮತ್ತು ತರಕಾರಿಗಳಲ್ಲಿನ ರಾಸಾಯನಿಕ ಅಂಶಗಳನ್ನು ಹೋಗಲಾಡಿಸಲು ಬೇಕಿಂಗ್ ಸೋಡಾ ಸರಿಯಾದ ಆಯ್ಕೆ. ದೊಡ್ಡ ಟಬ್ ಅಥವಾ ಪಾತ್ರೆಗೆ ನೀರು ತುಂಬಿಸಿ ಅದಕ್ಕೆ ಬೇಕಿಂಗ್ ಸೋಡಾ ಹಾಕಿ. ಅದರಲ್ಲಿ ಹಣ್ಣು ಮತ್ತು ತರಕಾರಿಗಳನ್ನು ಹಾಕಿ 15 ರಿಂದ 20 ನಿಮಿಷ ಬಿಡಿ. ನಂತರ ಅವುಗಳನ್ನು ಸ್ವಚ್ಛ ನೀರಿನಿಂದ ತೊಳೆದು ಬಳಸಬಹುದು.

* ಇದೇ ರೀತಿ ಹಣ್ಣು – ತರಕಾರಿಗಳನ್ನು ತೊಳೆಯಲು ಅರಿಶಿನ ಮತ್ತು ಉಪ್ಪು ಬಳಸಬಹುದು. ಯಾಕಂದ್ರೆ ಇವುಗಳಲ್ಲಿ ಕ್ರಿಮಿನಾಶಕಗಳನ್ನು ಕೊಲ್ಲುವ ಅಂಶ ಇವೆ.


# ದೇಹಕ್ಕೆ ಸೂರ್ಯನ ಬೆಳಕಿನ ಪ್ರಯೋಜನಗಳು ನಿಮಗೆ ತಿಳಿದಿದೆಯೇ

ಸೂರ್ಯನ ಬೆಳಕಿನಿಂದ ದೇಹಕ್ಕೆ ಅನೇಕ ಪ್ರಯೋಜನಗಳಿವೆ. ಏಕೆಂದರೆ ಸೂರ್ಯನ ಬೆಳಕು ವಿಟಮಿನ್ ಡಿ ಕೊರತೆಯನ್ನು ಕಡಿಮೆ ಮಾಡುವ ಶಕ್ತಿಯನ್ನು ಒದಗಿಸುತ್ತದೆ.

ಆದರೆ ಇತ್ತೀಚಿನ ದಿನಗಳಲ್ಲಿ ಅನೇಕ ಜನರು ವಿಟಮಿನ್ ಡಿ ಪಡೆಯಲು ಮಾತ್ರೆಗಳನ್ನು ಬಳಸುತ್ತಿದ್ದಾರೆ. ಆರೋಗ್ಯ ತಜ್ಞರ ಪ್ರಕಾರ ಮಾತ್ರೆಗಳ ಬದಲು ಸೂರ್ಯನ ಬೆಳಕಿನಿಂದ ಪಡೆದ ವಿಟಮಿನ್ ಡಿ ದೇಹಕ್ಕೆ ತುಂಬಾ ಒಳ್ಳೆಯದು. ಆದಾಗ್ಯೂ, ಇದು ಚರ್ಮದ ಸಮಸ್ಯೆಗಳಿಂದ ಸುಲಭ ಪರಿಹಾರವನ್ನು ಸಹ ನೀಡುತ್ತದೆ. ಸೂರ್ಯನ ಬೆಳಕನ್ನು ಪಡೆಯುವ ಮೂಲಕ ಯಾವ ರೀತಿಯ ಆರೋಗ್ಯ ಸಮಸ್ಯೆಗಳನ್ನು ನಿವಾರಿಸಬಹುದು ಎಂಬುದನ್ನು ಈಗ ತಿಳಿದುಕೊಳ್ಳೋಣ

**ಸೂರ್ಯನ ಬೆಳಕು ಈ ಸಮಸ್ಯೆಗಳನ್ನು ನಿವಾರಿಸುತ್ತದೆ:** 1. ಚರ್ಮದ ಸಮಸ್ಯೆಗಳು ದೂರವಾಗುತ್ತವೆ: ಸೂರ್ಯನ ಬೆಳಕು ಚರ್ಮವು ಕಪ್ಪು ಬಣ್ಣಕ್ಕೆ ತಿರುಗಲು ಕಾರಣವಾಗುತ್ತದೆ ಎಂದು ಹೆಚ್ಚಿನ ಜನರು ಸಾಮಾನ್ಯವಾಗಿ ಭಾವಿಸುತ್ತಾರೆ. ಆದರೆ ಸೂರ್ಯನ ಬೆಳಕಿನ ಶಕ್ತಿಯಿಂದಾಗಿ ಅನೇಕ ರೀತಿಯ ಚರ್ಮದ ಸಮಸ್ಯೆಗಳು ದೂರವಾಗುತ್ತವೆ ಎಂದು ತಜ್ಞರು ಹೇಳುತ್ತಾರೆ.

ಸೂರ್ಯನ ನೇರಳಾತೀತ ಕಿರಣಗಳು



ದೇಹದ ಮೇಲೆ ಬೀಳುತ್ತವೆ ಮತ್ತು ಸೋರಿಯಾಸಿಸ್, ತುರಿಕೆ, ಕಾಮಾಲೆ, ಮೊಡವೆ ಮುಂತಾದ ಸಮಸ್ಯೆಗಳಿಂದ ಪರಿಹಾರ ನೀಡುತ್ತವೆ. ಸೂರ್ಯನ ಬೆಳಕು ಚರ್ಮದ ಸೋಂಕುಗಳಿಗೆ ಕಾರಣವಾಗುವ ಅನೇಕ ಬ್ಯಾಕ್ಟೀರಿಯಾಗಳನ್ನು ಕಡಿಮೆ ಮಾಡುತ್ತದೆ.

ಆದ್ದರಿಂದ ಚರ್ಮದ ಸಮಸ್ಯೆಗಳಿಂದ ಬಳಲುತ್ತಿರುವವರು ಖಂಡಿತವಾಗಿಯೂ ಪ್ರತಿದಿನ ಸೂರ್ಯನ ಬೆಳಕಿನ ಕಿರಣಗಳ ಮೂಲಕ ವಿಟಮಿನ್ ಡಿ ಪಡೆಯಬೇಕು.


2. ಮನಸ್ಥಿತಿ: ನಿಮ್ಮನ್ನು ಸಂತೋಷವಾಗಿಡುವಲ್ಲಿ ಸೂರ್ಯನ ಬೆಳಕು ಸಹ ಪ್ರಮುಖ ಪಾತ್ರ ವಹಿಸುತ್ತದೆ ಎಂದು ತಜ್ಞರು ಹೇಳುತ್ತಾರೆ. ಮೆದುಳಿನಲ್ಲಿರುವ ಸೆರೊಟೋನಿನ್ ಎಂಬ ಅಂಶವು ಸೂರ್ಯನ ಬೆಳಕಿನಿಂದ ವೇಗವಾಗಿ ಬಿಡುಗಡೆಯಾಗುತ್ತದೆ. ಇದು ಒಂದು ರೀತಿಯ ಸಂತೋಷದ ಹಾರ್ಮೋನ್ ಅನ್ನು ಬಿಡುಗಡೆ ಮಾಡುತ್ತದೆ. ಇದಲ್ಲದೆ, ಖಿನ್ನತೆ ಅಥವಾ ಒತ್ತಡದ ಸಮಸ್ಯೆಗಳು ದೂರವಾಗುತ್ತವೆ.

3. ಮೂಳೆಗಳು ಬಲಗೊಳ್ಳುತ್ತವೆ: ಸೂರ್ಯನ ಬೆಳಕಿನಿಂದಾಗಿ ದೇಹವು ವಿಟಮಿನ್ ಡಿ ಅನ್ನು ವೇಗವಾಗಿ ಪಡೆ–ಯುತ್ತದೆ. ಆದ್ದರಿಂದ ಮೂಳೆ ಕ್ಯಾನ್ಸರ್ ನಂತಹ ಸಮಸ್ಯೆಗಳಿಂದ ಸುಲಭ ಪರಿಹಾರವಿದೆ. ಇದಲ್ಲದೆ, ಮೂಳೆಗಳು ಸಹ ಸುಲಭವಾಗಿ ಬಲಗೊಳ್ಳುತ್ತವೆ. ಆದ್ದರಿಂದ ಮೂಳೆ ಸಮಸ್ಯೆಗಳಿಂದ ಬಳಲುತ್ತಿರುವವರು ಖಂಡಿತವಾಗಿಯೂ ಸೂರ್ಯನ ಬೆಳಕಿನಿಂದ ಬರುವ ವಿಟಮಿನ್ ಡಿ ಸೇವಿಸಬೇಕು.

# ಪರಿಸರ ಪ್ರಿಯರಿಗೆ ಇಷ್ಟವಾಗುವ ಸ್ಥಳ ಪಿಲಿಕುಳ ನಿಸರ್ಗಧಾಮ

ಕಡಲನಗರಿ ಮಂಗಳೂರು ಪ್ರವಾಸಿಗರ ಫೆವರೇಟ್ ಸ್ಥಳ. ಯಾಕಂದ್ರೆ ಇಲ್ಲಿ ಪ್ರವಾಸಿ ಸ್ಥಳಗಳಿಗೆ ಯಾವುದೆ ಕೊರತೆಯಿಲ್ಲ. ಇಂತಹ ಪ್ರವಾಸಿ ಸ್ಥಳಗಳಲ್ಲಿ ಮಂಗಳೂರು ಹೊರವಲಯದ ಮೂಡುಶೆಡ್ಡೆಯ ಬಳಿ ಇರುವ ಪಿಲಿಕುಳ ನಿಸರ್ಗಧಾಮವೂ ಒಂದು. ಸಾಕಷ್ಟು ಸಂಖ್ಯೆಯಲ್ಲಿ ಟೂರಿಸ್ಟ್ ಗಳು ಇಲ್ಲಿಗೆ ಬರ್ತಾರೆ.

ಪಿಲಿಕುಳ ನಿಸರ್ಗಧಾಮದಲ್ಲಿ ಜೈವಿಕ ಉದ್ಯಾನವನವೇ ಸುಮಾರು 150 ಎಕರೆ ಪ್ರದೇಶದಲ್ಲಿ ವ್ಯಾಪಿಸಿಕೊಂಡಿದ್ದು ದೇಶದ 17 ಬೃಹತ್ ವಿವಿಧ ಮೃಗಾಲಯದಲ್ಲಿ ಇದು ಒಂದಾಗಿದೆ. ವಿವಿಧ ಪ್ರಭೇದದ 1,200 ಕ್ಕೂ ಅಧಿಕ



ಪ್ರಾಣಿ, ಪಕ್ಷಿ ಉರಗಗಳು ಇಲ್ಲಿವೆ. ರಾಜ್ಯದಲ್ಲಿ ಬನ್ನೇರುಘಟ್ಟ ಹಾಗೂ ಮೈಸೂರು ಹೊರತುಪಡಿಸಿದರೆ ಮೂರನೇ ಅತೀ ದೊಡ್ಡ ಮೃಗಾಲಯ ಇದಾಗಿದೆ. ದೇಶದಲ್ಲೇ ಅತೀ ವಿರಳವಾಗಿರುವ ಕೃಷ್ಣ ಮೃಗದ ಸಂತತಿ ಈ ಜೈವಿಕ ಉದ್ಯಾನವನದಲ್ಲಿ ಜಾಸ್ತಿಯಾಗಿದೆ. ಪಿಲಿಕುಳ ಮೃಗಾಲಯದಲ್ಲಿ ಚಿಟ್ಟೆ ಜಿಂಕೆ, ಸಾರಂಗ, ಕೃಷ್ಣ ಮೃಗ ಸಹಿತ ವಿವಿಧ ಜಿಂಕೆ ಪ್ರಬೇಧಗಳಿವೆ. ಪಿಲಿಕುಳದ ಝೂನಲ್ಲಿರುವ ಎಲ್ಲಾ ಪ್ರಾಣಿ, ಪಕ್ಷಿಗಳು ಪ್ರವಾಸಿಗರ ಆಕರ್ಷಣೆಯ ಕೇಂದ್ರವಾಗಿದೆ.

ಇನ್ನು ಇಲ್ಲಿ ಬೋಟಿಂಗ್ ಮಾಡುವುದಕ್ಕೂ ಅವಕಾಶವಿದೆ. ಇದರ ಜೊತೆ ಮಾನಸ ವಾಟರ್ ಪಾರ್ಕ್ ಕೂಡ ಇಲ್ಲಿದೆ. ಹೀಗಾಗಿ ಒಂದಿಡಿ ದಿನ ಇಲ್ಲಿ ಕಳೆಯುವಷ್ಟು ಮನೋರಂಜನಾ ಕೇಂದ್ರಗಳಿವೆ.

# ತ್ವಚೆ ಆರೈಕೆಗೆ ಇಲ್ಲಿದೆ ಕೆಲವು ಟಿಪ್ಸ್

ರಾತ್ರಿ ಮಲಗಿ ಬೆಳಗ್ಗೆ ಎದ್ದಾಗ ನಿಮ್ಮ ಮುಖದ ತ್ವಚೆ ಡಲ್ ಆಗಿ ಕಾಣಿಸುತ್ತದೆ. ಹಾಗಾಗದಂತೆ ಮಾಡಲು ಮತ್ತು ಬೆಳಗ್ಗೆ ನಿಮ್ಮ ಮುಖ ಹೊಳೆಯುತ್ತಿರುವಂತೆ ಮಾಡಲು ಈ ಕೆಳಗಿನ ಟಿಪ್ಸ್ ಗಳನ್ನು ಫಾಲೋ ಮಾಡಿ.



ರಾತ್ರಿ ಮಲಗುವ ಮುನ್ನ ನಿಮ್ಮ ಮುಖಕ್ಕೆ ಮಸಾಜ್ ಮಾಡಿ. ಇದರಿಂದ ತ್ವಚೆಯ ಸತ್ತ ಜೀವಕೋಶಗಳು ದೂರವಾಗಿ ಹೊಳೆಯುವ ತ್ವಚೆ ನಿಮ್ಮದಾಗುತ್ತದೆ.

ಸಾಧ್ಯವಾದಷ್ಟು ಒತ್ತಡದಿಂದ ದೂರವಿರಿ. ನಯವಾದ, ಹಿತಕರ ಅನುಭವ ನೀಡುವ ತಲೆದಿಂಬನ್ನೇ ಬಳಸಿ.

ಗಟ್ಟಿಯಾದ ದಿಂಬು ನಿಮಗೆ ಬೆನ್ನು, ತಲೆ ನೋವನ್ನು ಕೊಡುವುದು ಮಾತ್ರವಲ್ಲ, ಮುಖದ ಮೇಲೆ ನೆರಿಗೆಗಳನ್ನೂ ಮೂಡಿಸಬಹುದು.

ನಿತ್ಯ ಸಾಕಷ್ಟು ನೀರು ಕುಡಿಯಲು ಮರೆಯದಿರಿ. ನೀರು ಕುಡಿದಷ್ಟೂ ನಿಮ್ಮ ತ್ವಚೆ ಸೌಂದರ್ಯ ಹೆಚ್ಚಿಸಿಕೊಳ್ಳುತ್ತದೆ ಎಂಬುದನ್ನು ನೆನಪಿನಲ್ಲಿ ಇಟ್ಟುಕೊಳ್ಳಿ. ಎರಡು ಗಂಟೆಗೊಮ್ಮೆಯಾದರೂ ನೀರು ಕುಡಿಯುವುದನ್ನು ಮರೆಯದಿರಿ.

# ಇಲ್ಲಿದೆ ಬಕ್ಕ ತಲೆ ನಿವಾರಣೆಗೆ ಪರಿಹಾರ

ಮಹಿಳೆಯರಲ್ಲಿ ಹೇಗೆ ಕೂದಲು ಉದುರುವ ಸಮಸ್ಯೆ ಕಾಣಿಸಿಕೊಳ್ಳುತ್ತದೆಯೋ ಅದರಂತೆ ಪುರುಷರ ಕೂದಲೂ ಉದುರುತ್ತದೆ. ಕೊನೆಗೆ ನೆತ್ತಿಯ ಅಥವಾ ಹಿಂಭಾಗದ ಕೂದಲೇ ಇಲ್ಲವಾಗಿ



ಬಕ್ಕತಲೆಯಾಗಿ ಮಾರ್ಪಡುತ್ತದೆ. ಇದರ ನಿವಾರಣೆಗೆ ಹೀಗೆ ಮಾಡಿ.

ಸೌತೆಕಾಯಿಯನ್ನು ನಿತ್ಯ ಸೇವಿಸಿ. ಹಸಿಯಾಗಿ ತಿನ್ನುವುದರಿಂದ ಕೂದಲು ದಪ್ಪಗಾಗಿ ಬೆಳೆಯುತ್ತದೆ.

# ಬೇಸಿಗೆಯಲ್ಲಿ ತಣ್ಣೀರು ಕುಡಿಯೋದ್ರ ಅಡ್ಡ ಪರಿಣಾಮಗಳೇನು ಗೊತ್ತಾ?

ನೀವು ಬೇಸಿಗೆಯಲ್ಲಿ ಫ್ರಿಜ್‌ನಲ್ಲಿಟ್ಟಿದ್ದ ನೀರು ಕುಡಿದರೆ ತುಂಬಾನೆ ತಂಪಾಗಿರುತ್ತದೆ. ಹೀಗೆ ಮಾಡುವುದರಿಂದ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ ದೇಹವು ಅಸಮತೋಲನಗೊಳ್ಳುತ್ತದೆ ಎಂದು ಅನೇಕ ವೈದ್ಯರು ಎಚ್ಚರಿಸುತ್ತಾರೆ.

ನಿಮ್ಮ ರೋಗನಿರೋಧಕ ಶಕ್ತಿ ಉತ್ತಮವಾಗಬೇಕೆಂದು ಬಯಸಿದರೆ, ಬೇಸಿಗೆಯಲ್ಲಿ ತಣ್ಣೀರನ್ನು ಕುಡಿಯುವುನ್ನು ಬದಲಾಯಿಸುವುದು ಉತ್ತಮ. ಇದು ಜೀರ್ಣಕ್ರಿಯೆಯ ಮೇಲೆ ಪರಿಣಾಮ ಬೀರುತ್ತದೆ. ತಣ್ಣೀರು ಇನ್ನೂ ಅನೇಕ ಅಡ್ಡಪರಿಣಾಮಗಳನ್ನು ಉಂಟುಮಾಡಬಹುದು.ಯಾವುವು ಅನ್ನೋರ ಮಾಹಿತಿ ಇಲ್ಲಿದೆ

ಆಮ್ಲೀಯತೆ ಸಮಸ್ಯೆ

ತಣ್ಣೀರು ಕುಡಿಯುವುದರಿಂದ ಆಮ್ಲೀಯತೆಯ ಸಮಸ್ಯೆಗಳಿಗೆ ಕಾರಣವಾಗಬಹುದು. ತಣ್ಣೀರು ಕುಡಿದ ನಂತರ, ಆಹಾರವು ದೇಹದ ಮೂಲಕ ಹಾದುಹೋಗುವುದರಿಂದ ಅದು ತುಂಬಾ ಗಟ್ಟಿಯಾಗುತ್ತದೆ. ಇದು ಕರುಳುಗಳು ಕುಗ್ಗಲು ಕಾರಣವಾಗುತ್ತದೆ ಮತ್ತು ಆಮ್ಲೀಯತೆಯ ಸಮಸ್ಯೆ ಪ್ರಾರಂಭವಾಗುತ್ತದೆ.



ಆಹಾರ ಜೀರ್ಣಿಸಿಕೊಳ್ಳಲು ಕಷ್ಟ

ನೀವು ಹೆಚ್ಚು ತಣ್ಣೀರು ಕುಡಿದರೆ, ಅದು ಜೀರ್ಣಾಂಗ ವ್ಯವಸ್ಥೆಯ ಮೇಲೆ ಪರಿಣಾಮ ಬೀರುತ್ತದೆ. ಆಹಾರವನ್ನು ಜೀರ್ಣಿಸಿಕೊಳ್ಳಲು ಕಷ್ಟವಾಗುವುದು ಮಲಬದ್ಧತೆ ಮತ್ತು ಹೊಟ್ಟೆ ನೋವು, ವಾಕರಿಕೆ, ಉಬ್ಬರ ಇತ್ಯಾದಿಗಳಿಗೆ ಕಾರಣವಾಗಬಹುದು.

ತಲೆನೋವು ಹೆಚ್ಚು ತಣ್ಣೀರು ಕುಡಿಯುವುದರಿಂದ ಮೆದುಳು ನಿಷ್ಕ್ರಿಯಗೊಳ್ಳುತ್ತದೆ. ತಣ್ಣೀರು ಬೆನ್ನುಮೂಳೆಯಲ್ಲಿರುವ ಅನೇಕ ಸೂಕ್ಷ್ಮ ನರಗಳನ್ನು ತಂಪಾಗಿಸುತ್ತದೆ, ಅಲ್ಲಿಂದ ಸಂದೇಶವನ್ನು ತಕ್ಷಣ ಮೆದುಳಿಗೆ ಕಳುಹಿಸಲಾಗುತ್ತದೆ, ಇದರಿಂದಾಗಿ ತಲೆನೋವು ಪ್ರಾರಂಭವಾಗುತ್ತದೆ. ಈ ಕಾರಣದಿಂದಾಗಿ ಸೈನಸೈಟಿಸ್ ಅಪಾಯವೂ ಇದೆ.

ಹೃದಯ ಬಡಿತವನ್ನು ನಿಧಾನಗೊಳಿಸುವ ಅಪಾಯ ತಣ್ಣೀರು ಕುಡಿಯುವುದರಿಂದ ಹೃದಯ ಬಡಿತ ನಿಧಾನಗೊಳ್ಳುವ ಅಪಾಯ ಕಡಿಮೆಯಾಗುತ್ತದೆ. ಇದು ವಾಗಸ್ ನರದ ಮೇಲೆ ಪರಿಣಾಮ ಬೀರುತ್ತದೆ. ಕಡಿಮೆ ನೀರಿನ ತಾಪಮಾನವು ವೇಗಸ್ ನರಕ್ಕೆ ಹಾನಿಯನ್ನುಂಟು ಮಾಡುತ್ತದೆ, ಇದರಿಂದಾಗಿ ಹೃದಯ ಬಡಿತ ಕಡಿಮೆಯಾಗುತ್ತದೆ. ಇದು ಹೃದ್ರೋಗಗಳಿಗೆ ಕಾರಣವಾಗಬಹುದು.

ತೂಕ ಹೆಚ್ಚಾಗಬಹುದು ಹೆಚ್ಚು ತಣ್ಣೀರು ಕುಡಿಯುವುದರಿಂದ ದೇಹದಲ್ಲಿನ ಕೊಬ್ಬು ಕರಗುವುದಿಲ್ಲ ಮತ್ತು ಕೊಬ್ಬು ಗಟ್ಟಿಯಾಗುತ್ತದೆ. ಇದು ತೂಕ ಹೆಚ್ಚಳಕ್ಕೆ ಕಾರಣವಾಗಬಹುದು. ಆದ್ದರಿಂದ, ಸ್ಥೂಲಕಾಯತೆಯ ಸಮಸ್ಯೆಯನ್ನು ತಪ್ಪಿಸಲು ತಣ್ಣೀರು ಕುಡಿಯುವುದನ್ನು ತಪ್ಪಿಸಬೇಕು.

# ಸರ್ವ ರೋಗಕ್ಕೂ ಮದ್ದು ತುಳಸಿ

ತುಳಸಿಯನ್ನು ಎಲ್ಲಾ ಗಿಡಮೂಲಿಕೆಗಳ ರಾಣಿ ಎಂದು ಕರೆಯಲಾಗುತ್ತದೆ, ಇದನ್ನು ಆಯುರ್ವೇದ ಮತ್ತು ಪ್ರಕೃತಿಚಿಕಿತ್ಸೆಯ ಔಷಧಿಗಳಲ್ಲಿ ವ್ಯಾಪಕವಾಗಿ ಬಳಸಲಾಗುತ್ತದೆ. ಇದು ನೈಸರ್ಗಿಕ ರೀತಿಯಲ್ಲಿ ಮಾನವ ದೇಹಕ್ಕೆ ಎಲ್ಲಾ ರೀತಿಯಿಂದ ಸಹಕರಿಸುತ್ತದೆ. ತುಳಸಿ ಎಲೆಗಳು ಮಾತ್ರವಲ್ಲಅವುಗಳ ಹೂವುಗಳೂ ಪ್ರಯೋಜನಕಾರಿಯಾಗಿದೆ.

ತುಳಸಿಯು ಜ್ವರದಿಂದ ಹಿಡಿದು ಮೂತ್ರಪಿಂಡದ ಕಲ್ಲುಗಳವರೆಗೆ ಅನೇಕ ಆರೋಗ್ಯ ಸಮಸ್ಯೆಗಳನ್ನು ತೊಡೆದುಹಾಕಲು ಸಹಾಯ ಮಾಡುತ್ತದೆ.

ಹಿಂದೂ ಧರ್ಮದಲ್ಲಿ, ಪವಿತ್ರ ತುಳಸಿ ಧಾರ್ಮಿಕ ಸಂಕೇತವಾಗಿದೆ ಮತ್ತು ಉತ್ತಮ ವೈದ್ಯಕೀಯ ಪರಿಹಾರವಾಗಿದೆ. ವೈದ್ಯಕೀಯವಾಗಿ ಇದನ್ನು ಪ್ರಾಚೀನ ಆಯುರ್ವೇದ ಆರೋಗ್ಯ ವ್ಯವಸ್ಥೆಯಲ್ಲಿ ಸಾಮಾನ್ಯ ಕಾಯಿಲೆಗಳಿಗೆ ಚಿಕಿತ್ಸೆ ನೀಡಲು ಬಳಸಲಾಗುತ್ತದೆ.

ಕೊತ್ತಂಬರಿ ಸೊಪ್ಪಿನ ಪ್ರಯೋಜನಗಳ ಬಗ್ಗೆ ನಿಮಗೆಷ್ಟು ಗೊತ್ತು: ಇದರಲ್ಲಿರುವ ಪೌಷ್ಟಿಕಾಂಶಗಳು ಕಾರ್ಬೋಹೈಡ್ರೇಟ್‌ಗಳು, ಫೈಬರ್, ಪ್ರೋಟೀನ್, ಸೋಡಿಯಂ, ಪೊಟ್ಯಾಸಿಯಮ್, ಮೆಗ್ನೀಸಿಯಮ್, ಕ್ಯಾಲ್ಸಿಯಂ, ವಿಟಮಿನ್ ಸಿಗಳನ್ನು ಹೊಂದಿದೆ.

ತುಳಸಿಯ ಉಪಯೋಗಗಳು: 1. ಚರ್ಮದ ಬಳಕೆಗೆ ತುಳಸಿಯನ್ನು ಮೊಟ್ಟೆಯೊಂದಿಗೆ ಬೆರೆಸಿ ಮಿಶ್ರಣ ಮಾಡಿದರೆ ಚರ್ಮವನ್ನು ವೃಧು ವಾಗಿಸುತ್ತದೆ. ಈ ಗಿಡ ಮೂಲಿಕೆಯನ್ನು ಮೊಡವೆ, ಚರ್ಮದ ಸೋಂಕುಗಳಿಗೆ ಚಿಕಿತ್ಸೆ ನೀಡಲು, ಕಪ್ಪು ಕಲೆಗಳನ್ನು ಹೋಗಿಸಲು ಚರ್ಮದ ಕಾಂತಿಯನ್ನು ಹೆಚ್ಚಿಸಲು ಬಳಸಲಾಗುತ್ತದೆ. ಬೆಳಗಿನ ಜಾವ ಬೆಲ್ಲ ಹಾಗೂ ಕಡಲೆ ಬೀಜವನ್ನು ಸೇವಿಸುದರಿಂದ ಆಗುವ ಪ್ರಯೋಜನಗಳೇನು ಗೊತ್ತಾ

2. ಉತ್ತಮ ಕುದಲಿಗಾಗಿ ತುಳಸಿಯನ್ನು ನಿಮ್ಮ ಕೂದಲಿಗೆ ಹಲವಾರು ಕಾರಣಗಳಿಗಾಗಿ ಅನ್ವಯಿಸಬಹುದು ಮತ್ತು ಅದು ನಿಮ್ಮ ಕೂದಲನ್ನು ಎಲ್ಲಾ ರೀತಿಯಲ್ಲಿ ಉತ್ತಮವಾಗಿ ಕಾಣುವಂತೆ ಮಾಡುತ್ತದೆ–ತುಳಸಿ ಕೂದಲು ಉದುರುವುದನ್ನು ತಡೆಯುತ್ತದೆ–ಕೂದಲು ಬಿಳಿಯಾಗುವುದನ್ನು ಕಡಿಮೆ ಮಾಡುತ್ತದೆ–ದಟ್ಟವಾಗಿ ಮತ್ತು ಕಪ್ಪಾಗಿ ಇಡುತ್ತದೆ–ತುಳಸಿಯು ತಲೆಹೊಟ್ಟುನ್ನು ಕಡಿಮೆ ಮಾಡುತ್ತದೆ–ಒಣ ನೆತ್ತಿಯನ್ನು ತಡೆಯಲು ತುಳಸಿ ಸಹಾಯ ಮಾಡುತ್ತದೆ.

ತುಳಸಿಯು ಉತ್ತಮ ದೃಷ್ಠಿಗೆ ಸಹಕಾರಿಯಾಗಿದೆ. ರಾತ್ರಿಯಿಡೀ ನೆನೆಸಿದ ತುಳಸಿ ಎಲೆಗಳ ನೀರಿನಲ್ಲಿ ಕಣ್ಣುಗಳನ್ನು ತೊಳೆಯಲು ಬಳಸುವುದರಿಂದ ಕಣ್ಣುಗಳ ಮೇಲಿನ ಒತ್ತಡವನ್ನು ಕಡಿಮೆ ಮಾಡುತ್ತದೆ. ಕಾಂಜಂಕ್ಟಿವಿಟಿಸ್ ಮತ್ತು ಕಣ್ಣಿನ ಸಂಬಂಧಿತ ಸಮಸ್ಯೆಗಳನ್ನು ತಡೆಯುತ್ತದೆ.

# ಸಂಧಿವಾತದಿಂದ ಪಾರಾಗಲು ಈ 5 ಗಿಡಮೂಲಿಕೆಗಳನ್ನು ಬಳಸಿ

ಸಂಧಿವಾತವು ದೀರ್ಘಕಾಲದ ಕಾಯಿಲೆಯಾಗಿದ್ದು, ಇದು ಉರಿಯೂತ, ಕೀಲುಗಳಲ್ಲಿನ ಬಿಗಿತದಿಂದ ಉಂಟಾಗುತ್ತದೆ. ಸಂಧಿವಾತದ ನೋವನ್ನು ನಿವಾರಿಸಲು ಮತ್ತು ಈ ರೋಗವನ್ನು ನಿಯಂತ್ರಿಸಲು ಸಹಾಯ ಮಾಡುವ ಕೆಲವು ಗಿಡಮೂಲಿಕೆಗಳು ಇಲ್ಲಿವೆ. ಚಳಿಗಾಲದಲ್ಲಿ ಸಂಧಿವಾತದ (Arthritis Pain) ರೋಗಿಗಳಿಗೆ ಕೀಲುಗಳಲ್ಲಿ ಅಪಾರ ನೋವು ಉಂಟಾಗುತ್ತದೆ.



ಭಾರತದಲ್ಲಿ ಲಕ್ಷಾಂತರ ಜನರನ್ನು ಬಾಧಿಸುವ ಸಂಧಿವಾತವು ದೀರ್ಘಕಾಲದ ಕಾಯಿಲೆಯಾಗಿದ್ದು, ಇದು ಉರಿಯೂತ, ಊತ ಅಥವಾ ಕೀಲುಗಳಲ್ಲಿನ ಬಿಗಿತದಿಂದ ಉಂಟಾಗುತ್ತದೆ. ಸಂಧಿವಾತದ ನೋವನ್ನು ನಿವಾರಿಸಲು ಮತ್ತು ಈ ರೋಗವನ್ನು ನಿಯಂತ್ರಿಸಲು ಸಹಾಯ ಮಾಡುವ ಕೆಲವು ಗಿಡಮೂಲಿಕೆಗಳು ಇಲ್ಲಿವೆ.

ಪೌಷ್ಟಿಕ ತಜ್ಞ ಲೊವ್ನೀತ್ ಬಾತ್ರಾ ಅವರು ಕೀಲು ನೋವನ್ನು ನಿವಾರಿಸುವ ಗಿಡಮೂಲಿಕೆಗಳ ಕುರಿತು ಇನ್‌ಸ್ಟಾಗ್ರಾಂನಲ್ಲಿ ಪೋಸ್ಟ್ ಅನ್ನು ಹಂಚಿಕೊಂಡಿದ್ದಾರೆ. 'ಸಂಧಿವಾತವು ಭಾರತದಲ್ಲಿ 180 ಮಿಲಿಯನ್‌ಗಿಂತಲೂ ಹೆಚ್ಚು ಜನರ ಮೇಲೆ ಪರಿಣಾಮ ಬೀರುವ ದೀರ್ಘಕಾಲದ ಸ್ಥಿತಿಯಾಗಿದೆ' ಎಂದು ಅವರು ಇನ್‌ಸ್ಟಾಗ್ರಾಂನಲ್ಲಿ ಬರೆದುಕೊಂಡಿದ್ದಾರೆ.

ಪೌಷ್ಟಿಕ ತಜ್ಞರ ಪ್ರಕಾರ, ಅಸ್ಥಿಸಂಧಿವಾತ (OA) ಮತ್ತು ರುಮಟಾಯ್ಡ್ ಸಂಧಿವಾತ (RA) ಸಂಧಿವಾತದ ಎರಡು ಪ್ರಮುಖ ರೂಪಗಳಾಗಿವೆ. ಇದು ತೀವ್ರವಾದ ಕೀಲು ನೋವನ್ನು ಉಂಟುಮಾಡುತ್ತದೆ. ಸಂಧಿವಾತವನ್ನು ಕಡಿಮೆ ಮಾಡುವ 5 ಗಿಡಮೂಲಿಕೆಗಳು ಇಲ್ಲಿವೆ.

# ಒಣ ದ್ರಾಕ್ಷಿ ನೆನೆಸಿದ ನೀರು ಕುಡಿಯುವುದರಿಂದ ಇದೆ ಇಷ್ಟೆಲ್ಲಾ ಆರೋಗ್ಯಕರ ಲಾಭ

ಒಣದ್ರಾಕ್ಷಿಯನ್ನು ಎಲ್ಲರೂ ಇಷ್ಟಪಡುತ್ತಾರೆ. ಅದರಲ್ಲೂ ಗೋಡಂಬಿ ಜೊತೆ ತಿನ್ನಲು ತುಂಬಾ ಸಿಹಿಯಾಗಿರುತ್ತದೆ. ಅದನ್ನು ಹಾಗೇ ತಿನ್ನುವ ಬದಲು ನೀರಿನಲ್ಲಿ ನೆನೆಸಿ ತಿಂದರೆ ಆರೋಗ್ಯಕ್ಕೆ ಇನ್ನೂ ಉತ್ತಮ. ಆದರೆ ಒಣದ್ರಾಕ್ಷಿ ತಿಂದ ಬಳಿಕ ನೆನೆಸಿದ ನೀರನ್ನು ಚೆಲ್ಲುತ್ತೇವೆ. ಆ ನೀರಿನಿಂದ ಆಗುವ ಪ್ರಯೋಜನ ತಿಳಿದರೆ ಖಂಡಿತ ಎಸೆಯುವುದಿಲ್ಲ.

* ಪ್ರತಿದಿನ ಬೆಳಿಗ್ಗೆ ಒಣದ್ರಾಕ್ಷಿ ನೆನೆಸಿದ ನೀರನ್ನು ಕುದಿಸಿ ಕುಡಿಯುವುದರಿಂದ ಮಲಬದ್ಧತೆ, ಅಸಿಡಿಟಿ ಹಾಗೂ ಆಯಾಸ ಸಮಸ್ಯೆ ದೂರವಾಗುತ್ತದೆ.

* ಈ ನೀರು ಕೊಲೆಸ್ಟ್ರಾಲ್ ಮಟ್ಟವನ್ನು ಸರಿಯಾಗಿಡುತ್ತದೆ.

* ಇದು ದೇಹದಲ್ಲಿರುವ ಟ್ರೈಗ್ಲಿಸರೈಡ್ ಮಟ್ಟವನ್ನು ಕಡಿಮೆ ಮಾಡಲು



ನೆರವಾಗುತ್ತದೆ. * ಮುಖದ ಮೇಲಿನ ಸುಕ್ಕನ್ನು ಕಡಿಮೆ ಮಾಡಿ ಸೌಂದರ್ಯ ವೃದ್ಧಿಸುವ ಕೆಲಸ ಮಾಡುತ್ತದೆ.

* ಅಜೀರ್ಣ ಸಮಸ್ಯೆಯನ್ನು ಕಡಿಮೆ ಮಾಡಿ ಜೀರ್ಣಾಂಗ ವ್ಯವಸ್ಥೆ ಸರಿಯಾಗಿ ಕೆಲಸ ಮಾಡುವಂತೆ ಮಾಡುತ್ತದೆ.

* ಪ್ರತಿದಿನ ಈ ನೀರು ಕುಡಿಯುವುದರಿಂದ ಲಿವರ್ ಆರೋಗ್ಯವಾಗಿರುತ್ತದೆ. ಚಯಾಪಚಯ ಮಟ್ಟವನ್ನು ನಿಯಂತ್ರಿಸುತ್ತದೆ.

# ತೂಕ ಇಳಿಸಲು ಸೇವಿಸಬೇಕು ಅಧಿಕ ಕ್ಯಾಲೋರಿ ಇರುವ 'ಆಹಾರ'

ಡಯಟ್ ಅಂದ ತಕ್ಷಣ ಮೊದಲು ನಮ್ಮ ಮನಸ್ಸಿಗೆ ಬರೋದು ಕ್ಯಾಲೋರಿ. ಜಾಸ್ತಿ ಕ್ಯಾಲೋರಿ ಇರೋ ಪದಾರ್ಥಗಳನ್ನು ತಿಂದ್ರೆ ದಪ್ಪಗಾಗ್ತೀವಿ ಅನ್ನೋ ಆತಂಕ. ಹಾಗಾಗಿ ಡಯಟ್ ಚಕ್ಕರ್ ನಲ್ಲಿ ಎಲ್ರೂ ಕಡಿಮೆ ಕ್ಯಾಲೋರಿ ಇರೋ ತಿನಿಸುಗಳನ್ನೇ ಆಯ್ಕೆ ಮಾಡಿಕೊಳ್ತಾರೆ. ಆದ್ರೆ ಹೆಚ್ಚು ಕ್ಯಾಲೋರಿ ಇರುವ ಆಹಾರಗಳು ನಮ್ಮ ದೇಹಕ್ಕೆ ಅತ್ಯಂತ ಅವಶ್ಯಕ. ಅವುಗಳಿಂದ ತೂಕವನ್ನು ಕೂಡ ಇಳಿಸಬಹುದು. ತೂಕ ಇಳಿಕೆಗೆ ಅಗತ್ಯವಾದ ಹೈ ಕ್ಯಾಲೋರಿ ಇರುವ ಪದಾರ್ಥಗಳು ಯಾವುದು ಅನ್ನೋದನ್ನು ನೋಡೋಣ.

ತುಪ್ಪ: ಇದರಲ್ಲಿ ಒಳ್ಳೆಯ ಕೊಬ್ಬಿನ ಅಂಶವಿದೆ, ಪೌಷ್ಟಿಕವಾದ ಕ್ಯಾಲೋರಿ ಉಳ್ಳ ಪದಾರ್ಥ ಇದು. ಪ್ರತಿದಿನ ಒಂದು ಚಮಚ ತುಪ್ಪ ಸೇವನೆ ಆರೋಗ್ಯಕ್ಕೆ ಒಳ್ಳೆಯದು. ಇದರಲ್ಲಿರೋ ಅಧಿಕ ಕ್ಯಾಲೋರಿ ನಿಮ್ಮ ತೂಕ ಇಳಿಕೆಯ ವೇಗವನ್ನು ಹೆಚ್ಚಿಸುತ್ತೆ.

ಬಾಳೆಹಣ್ಣು: ಇದರಲ್ಲೂ ಕ್ಯಾಲೋರಿ ಹೆಚ್ಚಿದೆ, ಆದ್ರೆ ತೂಕ ಇಳಿಕೆಗೆ ಇದು ಬೆಸ್ಟ್ ಫುಡ್. ವರ್ಕೌಟ್ ಗೆ ಮೊದಲು ಅಥವಾ ನಂತರ ಯಾವಾಗ ಬೇಕಾದ್ರೂ ಬಾಳೆಹಣ್ಣನ್ನು ಸೇವಿಸಬಹುದು.

ಕೊಬ್ಬಿನ ಅಂಶವಿರುವ ಹಾಲು: ಸೂಪರ್ ಮಾರ್ಕೆಟ್ ಗೆ ಕಾಲಿಟ್ಟಾಗಲೆಲ್ಲಾ ನಾವು ಸ್ಕಿಮ್ಡ್, ಲೋ ಫ್ಯಾಟ್, ಫ್ಯಾಟ್ ಫ್ರೀ ಮತ್ತು ಸಾವಯವ ವಸ್ತುಗಳನ್ನೇ ಹುಡುಕುತ್ತೇವೆ. ಆದ್ರೆ ನೀವೇನಾದ್ರೂ ತೂಕ ಇಳಿಸುವ ಪ್ರಯತ್ನದಲ್ಲಿದ್ರೆ ಫುಲ್ ಫ್ಯಾಟ್ ಮಿಲ್ಕ್ ಅನ್ನೇ ಸೇವಿಸಿ. ಇದು ನಿಮಗೆ ಅಗತ್ಯ ಪೋಷಕಾಂಶವನ್ನು ಕೊಡುತ್ತದೆ ಜೊತೆಗೆ ಬ್ಯಾಡ್ ಫ್ಯಾಟ್ ಅನ್ನು ದೇಹದಿಂದ ಹೊರಹಾಕಲು ಸಹಕರಿಸುತ್ತದೆ.

ಮೊಟ್ಟೆಯ ಹಳದಿ ಭಾಗ: ಸಾಮಾನ್ಯವಾಗಿ ಎಲ್ಲರೂ ಮೊಟ್ಟೆಯ ಬಿಳಿ ಭಾಗವನ್ನು ಮಾತ್ರ ತಿನ್ನುತ್ತಾರೆ. ಮೊಟ್ಟೆಯ ಹಳದಿ ಭಾಗದಲ್ಲಿ ಜಾಸ್ತಿ ಕ್ಯಾಲೋರಿ ಇರೋದ್ರಿಂದ ದಪ್ಪಗಾಗಿಬಿಡ್ತೀವಿ ಅನ್ನೋದು ಅವರ ಆತಂಕ. ಹಳದಿ ಭಾಗದಲ್ಲಿ ಅತ್ಯಧಿಕ ಪೋಷಕಾಂಶವಿರುತ್ತದೆ. ಇದು ನಿಮ್ಮ ಚಯಾಪಚಯ ಕ್ರಿಯೆಯನ್ನು ಸುಧಾರಿಸುತ್ತದೆ. ಇದರಿಂದ ನೀವು ವರ್ಕೌಟ್ ಚೆನ್ನಾಗಿ ಮಾಡಬಹುದು, ಕ್ಯಾಲೋರಿ ಬರ್ನ್ ಕೂಡ ಮಾಡಬಹುದು.

ನಟ್ಸ್: ನಟ್ಸ್ ತೂಕ ಇಳಿಸಲು ಬೆಸ್ಟ್ ಫುಡ್ ಅನ್ನೋದನ್ನು ಎಲ್ರೂ ಒಪ್ಪಿಕೊಳ್ತಾರೆ. ಆದ್ರೆ ಗೋಡಂಬಿ ತಿಂದ್ರೆ ತೂಕ ಹೆಚ್ಚಾಗುತ್ತೆ ಅನ್ನೋ ಭಾವನೆ ಕೆಲವರಲ್ಲಿದೆ. ಆದ್ರೆ ನಟ್ಸ್ ಪೋಷಕಾಂಶಗಳ ಆಗರ, ಮಧ್ಯಾಹ್ನ ಒಂದು ಕಪ್ ಲೋ ಫ್ಯಾಟ್ ಮೊಸರು ಸೇವಿಸುವ ಬದಲು ಒಂದು ಮುಷ್ಟಿ ನಟ್ಸ್ ತಿನ್ನಿ.

ಎಣ್ಣೆ: ಹಾಲಿನಂತೆ ವೆರೈಟಿ ಎಣ್ಣೆಗಳು ಕೂಡ ಮಾರ್ಕೆಟ್ ನಲ್ಲಿ ಲಭ್ಯವಿವೆ. ಫ್ಯಾಟ್ ಫ್ರೀ ಆಯಿಲ್, ಲೋ ಫ್ಯಾಟ್ ಆಯಿಲ್, ನೋ ಗ್ರೀಸ್ ಆಯಿಲ್ ಹೀಗೆ ಹತ್ತಾರು ಬಗೆಯ ಎಣ್ಣೆಗಳನ್ನು ಜನರು ಖರೀದಿಸ್ತಾರೆ. ಆದ್ರೆ ಸಂಪೂರ್ಣವಾಗಿ ಎಣ್ಣೆ ಸೇವನೆಯನ್ನೇ ತ್ಯಜಿಸಬೇಡಿ, ಯಾಕಂದ್ರೆ ನಮ್ಮ ದೇಹ ಅದಕ್ಕೆ ಹೊಂದಿಕೊಂಡಿರುತ್ತದೆ.

ಕಡಲೆಕಾಯಿ ಬೆಣ್ಣೆ: ತೂಕ ಇಳಿಸಲು ಇಚ್ಛಿಸುವವರಿಗೆ ಮನೆಯಲ್ಲೇ ಮಾಡಿದ ಪೀನಟ್ ಬಟರ್ ಬೆಸ್ಟ್ ಆಪ್ಷನ್. ನಿಮ್ಮ ದೇಹದಲ್ಲಿರುವ ಬೇಡವಾದ ಕೊಬ್ಬು ಮತ್ತು ಕ್ಯಾಲೋರಿಯನ್ನು ಹೊರಹಾಕಲು ಕಡಲೆಕಾಯಿ ಬೆಣ್ಣೆ ಸಹಕಾರಿಯಾಗಿದೆ.

# ಸಂವಿಧಾನ ರಕ್ಷಣೆಗೆ ಕಾಂಗ್ರೆಸ್ ಬೆಂಬಲಿಸಿ: ಅಕ್ಷಯ ವೀರಮುಖ



ಹುಕ್ಕೇರಿ: ತಾಲೂಕಿನ ಹೆಬ್ಬಾಳ ಗ್ರಾಮದ ವಾರ್ಡ್ ನಂ. 3ರ ಅಂಬೇಡ್ಕರ ನಗರದಲ್ಲಿ ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಕಾರ್ಡ್ಗಳನ್ನು ವಿತರಿಸಿದ ಕಾರ್ಯಕರ್ತರು, ಚಿಕ್ಕೋಡಿ ಲೋಕಸಭೆ ಕ್ಷೇತ್ರದ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಪರ ಮತಯಾಚಿಸಿದರು.

ನೂರಾರು ಕಾರ್ಯಕರ್ತರು ಮನೆ ಮನೆಗೆ ತೆರಳಿ ಗ್ಯಾರಂಟಿ ಕಾರ್ಡ್ಗಳನ್ನು ವಿತರಿಸಿ ಕಾಂಗ್ರೆಸ್ ಪರವಾಗಿ ಮತಚಲಾಯಿಸುವಂತೆ ಮನವೊಲಿಸಿ ತಿಳಿವಳಿಕೆ ನೀಡಿದರು.

ಯುವ ಮುಖಂಡ ಅಕ್ಷಯ ವೀರಮುಖ ಮಾತನಾಡಿ, ಪ್ರಜಾಪ್ರಭುತ್ವ ಮತ್ತು ಸಂವಿಧಾನ ರಕ್ಷಣೆಗಾಗಿ ಪ್ರತಿಯೊಬ್ಬರೂ ಕಾಂಗ್ರೆಸ್ ಬೆಂಬಲಿಸುವುದು ಅನಿವಾರ್ಯವಾಗಿದೆ. ಹಾಗಾಗಿ ಕ್ಷೇತ್ರದ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಮತ ನೀಡಿ ಆಶೀರ್ವದಿಸಬೇಕು ಎಂದು ಕೋರಿಕೊಂಡರು.

ಈ ವೇಳೆ ಯಮಕನಮರಡಿ ಕಾಂಗ್ರೆಸ್ ಮಹಿಳಾ ಘಟಕ ಅಧ್ಯಕ್ಷೆ ಶಹಜಹಾನ ಗಡೇಕಾಯಿ, ಗ್ರಾಪಂ ಮಾಜಿ ಅಧ್ಯಕ್ಷ ಪ್ರಕಾಶ ಗಡಿನಾಯಿಕ, ಸದಸ್ಯರಾದ ಇಂದಿರಾ ಪಾಟೀಲ, ದೇವರಾಜ ಚೌಗಲಾ, ಮುಖಂಡರಾದ ಸದಾಶಿವ ವೀರಮುಖ, ಅನಿಲ ಜುಮ್ಮಾಯಿ, ದೀಪಕ ವೀರಮುಖ, ಮಾರುತಿ ಕೆಳಗಡೆ, ಸಾಗರ ಸಾತಪ್ಪಗೋಳ, ವಿಶಾಲ ತಳವಾರ, ಪ್ರಜ್ವಲ ಜುಮ್ಮಾಯಿ, ಆದಿತ್ಯ ಕಾಂಬಳೆ ಮತ್ತಿತರರು ಉಪಸ್ಥಿತರಿದ್ದರು.

# ನದಿಗೆ ಬಾಸಿಂಗ ಬಿಡಲು ಹೋಗಿ ಬಾಲಕ ನೀರು ಪಾಲು



ವಿಜಯಪುರ: ಬಾಸಿಂಗ ಬಿಡಲು ನದಿಗೆ ಇಳಿದ ಬಾಲಕ ಆಕಸ್ಮಿಕವಾಗಿ ಕಾಲು ಜಾರಿ ನೀರು ಪಾಲಾದ ಘಟನೆ ನಿಡಗುಂದಿ ತಾಲ್ಲೂಕಿನ ಯಲಗೂರು ಗ್ರಾಮದ ಬಳಿ ಕೃಷ್ಣಾ ನದಿತೀರದಲ್ಲಿ ಸೋಮವಾರ ನಡೆದಿದೆ. ಬಸವನಬಾಗೇವಾಡಿ ತಾಲ್ಲೂಕಿನ ಹಂಗರಗಿ ಗ್ರಾಮದ ವೆಂಕಟೇಶ ಶರಣಪ್ಪ ಚಲವಾದಿ(15) ಮೃತ ದುರ್ದೈವಿ.

ಮೃತ ಬಾಲಕನ ಚಿಕ್ಕಪ್ಪ ರವಿ ಅವರ ಮದುವೆ ಶುಕ್ರವಾರ ನಡೆದಿದ್ದು, ಸಂಪ್ರದಾಯದಂತೆ ನದಿಗೆ ಬಾಸಿಂಗ ಬಿಡಲು ಬಂಧುಗಳೊಂದಿಗೆ ನದಿತೀರಕ್ಕೆ ಬಂದಿದ್ದ. ಬಸವನಬಾಗೇವಾಡಿಯ ಅಗ್ನಿಶಾಮಕ ದಳ ಸಿಬ್ಬಂದಿ ಹಾಗೂ ಸ್ಥಳೀಯ ಮೀನುಗಾರರು ಶವದ ಹುಡುಕಾಟ ನಡೆಸಿದ್ದಾರೆ. ಸೋಮವಾರ ಆಲಮಟ್ಟಿ ಜಲಾಶಯದಿಂದ ನದಿ ಪಾತ್ರಕ್ಕೆ ನೀರು ಹರಿಸಿದ್ದರಿಂದ ನೀರು ಹೆಚ್ಚಿನ ಪ್ರಮಾಣದಲ್ಲಿರುವ ಕಾರಣ ಸಂಜೆಯಾದರೂ ಶವ ಸಿಗಲಿಲ್ಲ.

ಹೀಗಾಗಿ ಮಂಗಳವಾರ ಬೆಳಿಗ್ಗೆ ಮತ್ತೆ ಕಾರ್ಯಾಚರಣೆ ನಡೆಯಲಿದೆ. ಸ್ಥಳಕ್ಕೆ ಪಿಎಸ್ಐ ಶಿವರಾಜ ಧರಿಗೋಣ ಭೇಟಿ ನೀಡಿ ಪರಿಶೀಲಿಸಿದ್ದಾರೆ. ನದಿ ತೀರದಲ್ಲಿ ಸಂಬಂಧಿಗಳ ಆಕ್ರಂದನ ಮುಗಿಲು ಮುಟ್ಟಿತ್ತು.

## ಲೋಕಸಭಾ ಚುನಾವಣೆ-2024

# ಅಧಿಕಾರಿ, ಸಿಬ್ಬಂದಿಗಳು ಪರಸ್ಪರ ಸಮನ್ವಯದೊಂದಿಗೆ ಜಾಗರೂಕತೆಯಿಂದ ಕಾರ್ಯನಿರ್ವಹಿಸಿ; ಜಿ.ಪಂ. ಸಿ.ಇ.ಓ ಶಿಂಧೆ

ಬೆಳಗಾವಿ: ಲೋಕಸಭಾ ಚುನಾವಣೆಗೆ ಮತದಾನ ದಿನ ಹತ್ತಿರವಾಗುತ್ತಿದ್ದು ಚುನಾವಣೆಗೆ ನಿಯೋಜಿತ ಎಲ್ಲ ಅಧಿಕಾರಿ ಸಿಬ್ಬಂದಿಗಳು ಅತೀ ಜಾಗರೂಕತೆಯಿಂದ ಕಾರ್ಯನಿರ್ವಹಿಸಬೇಕು.

ಅಧಿಕಾರಿಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸುವುದರ ಮೂಲಕ ಯಾವುದೆ ಲೋಪಗಳಿಗೆ ಆಸ್ಪದ ನೀಡದಂತೆ ನಿಗಾವಹಿಸಲು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿ.ಪಂ. ಸಿ.ಇ.ಓ ಆದ ರಾಹುಲ ಶಿಂಧೆ ಅವರು ಸೂಚನೆ ನೀಡಿದರು.

ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ (ಏ.30) ರಂದು ಜರುಗಿದ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳು, ಸೆಕ್ಟರ ಅಧಿಕಾರಿ ಹಾಗೂ ವಿವಿಧ ಸಮಿತಿಗಳ ನೋಡೆಲ್ ಅಧಿಕಾರಿಗಳ ವೀಡಿಯೊ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮತದಾನ ದಿನದಂದು ಸೆಕ್ಟರ ಅಧಿಕಾರಿಗಳ ಪಾತ್ರ ಬಹುಮುಖ್ಯವಾಗಿರುತ್ತದೆ. ಮತದಾನ




ಪ್ರಾರಂಭದಿಂದ ಮುಕ್ತಾಯದ ವರೆಗೂ ಸೆಕ್ಟರ ಅಧಿಕಾರಿಗಳು ಅತೀ ಜಾಗರೂಕತೆಯಿಂದ ಚುನಾವಣಾ ಆಯೋಗದ ನಿರ್ದೇಶನಗಳನ್ವಯ ಕಾರ್ಯನಿರ್ವಹಿಸಬೇಕು.

ಮತದಾನ ಪ್ರಾರಂಭ ದಿಂದ ಮುಕ್ತಾಯದ ವರೆಗಿನ ವರದಿಗಳನ್ನು ನಿಗದಿತ ಸಮಯಕ್ಕೆ ಒದಗಿಸಬೇಕು. ಸೆಕ್ಟರ ಅಧಿಕಾರಿಗಳಿಗೆ ವಾಹನದ ಜೊತೆಗೆ ಶಸ್ತ್ರ ಸಜ್ಜಿತ ಪೋಲಿಸ ಭದ್ರತೆ ಒದಗಿಸುವಂತೆ ತಿಳಿಸಿದರು.

ಚುನಾವಣೆಗೆ ಸಂಬಂಧಿಸಿದ ದೂರುಗಳು ಬಂದಲ್ಲಿ ಕೂಡಲೇ ದೂರಿನ ಕುರಿತು ಕ್ರಮ ಕೈಗೊಳ್ಳಬೇಕು. ಚುನಾವಣೆಯ 72 ಹಾಗೂ 24 ಗಂಟೆಯ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಬೇಕು. ಮತಗಟ್ಟೆಗಳಲ್ಲಿ ಅಗತ್ಯದ ಪೋಲಿಸ್ ಸಿಬ್ಬಂದಿಗಳ ನಿಯೋಜನೆ ಕುರಿತು ಚರ್ಚಿಸಿದರು.

ಮತಗಟ್ಟೆ ಅಧಿಕಾರಿಗಳು, ಸಹಾಯಕ ಮತಗಟ್ಟೆ ಅಧಿಕಾರಿಗಳಿಗೆ ಆಯೋಜಿಸಲಾಗುವ ತರಬೇತಿ ದಿನದಂದು ಎಲ್ಲ ಅಧಿಕಾರಿ, ಸಿಬ್ಬಂದಿಗಳು ಕಡ್ಡಾಯವಾಗಿ ಮತದಾನ ಮಾಡುವಂತೆ ಅಗತ್ಯದ ಕ್ರಮ ವಹಿಸಬೇಕು.

ತರಬೇತಿ ಕೇಂದ್ರದಲ್ಲಿ ತೆರೆಯಲಾಗುವ ಮತಗಟ್ಟೆಗಳಲ್ಲಿ ಮತದಾನದ ಗೌಪ್ಯತೆಯನ್ನು ಕಾಪಾಡಿಕೊಳ್ಳಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು. ಚುನಾವಣೆ ಕಾರ್ಯಕ್ಕೆ ನಿಯೋಜಿತ ಅಗತ್ಯ ಸೇವೆಗಳಡಿ ಬರುವಂತಹ ಅಧಿಕಾರಿ, ಸಿಬ್ಬಂದಿಗಳಿಗೆ ಮತದಾನ ಮಾಡಲು ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ ಎಂದರು.

ವಿಕಲಚೇತನರು ಮತದಾನದ ದಿನದಂದು ಮತಗಟ್ಟೆಗಳಿಗೆ ಆಗಮಿಸಲು ವಾಹನ, ಗಾಲಿ ಕುರ್ಚಿ ಸೌಲಭ್ಯಗಳ ಕುರಿತು ಮನವಿ ಸಲ್ಲಿಸಿದಲ್ಲಿ ಅಂತಹ ವಿಕಲಚೇತನ ಮತದಾರರಿಗೆ ಸೌಲಭ್ಯ ಒದಗಿಸಲು ತಿಳಿಸಿದರು. ಈ ಕುರಿತು ಎಂ.ಆರ್.ಡಬ್ಲ್ಯೂಗಳಿಂದ ವರದಿ ಪಡೆದುಕೊಂಡು ವಿಕಲಚೇತನ ಮತದಾರರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಕ್ರಮ ವಹಿಸುವಂತೆ ತಿಳಿಸಿದರು.

ಜಿ.ಪಂ. ಮುಖ್ಯ ಯೋಜನಾಧಿಕಾರಿಗಳಾದ ಗಂಗಾಧರ ದಿವಕರ ಮಾತನಾಡಿ ಚುನಾವಣೆಗೆ ಸಂಬಂಧಿಸಿದಂತೆ ಮಸ್ಟರಿಂಗ್ ಹಾಗೂ ಡಿ ಮಸ್ಟರಿಂಗ್ ಕಾರ್ಯಗಳು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳ್ಳಬೇಕು. ಸಹಾಯಕ ಚುನಾವಣಾಧಿಕಾರಿಗಳು ಪ್ರತಿ ಎರಡು ಗಂಟೆಗಳ ವರದಿಯನ್ನು ನಿಗದಿತ ಕಾಲಮಿತಿಯೊಳಗೆ ಸಲ್ಲಿಸಬೇಕು.

ಮತದಾನ ದಿನದಂದು ಸೆಕ್ಟರ ಅಧಿಕಾರಿಗಳು ಅತೀ ಜಾಗರೂಕತೆಯಿಂದ ಕಾರ್ಯನಿರ್ವಹಿಸುವುದರ ಮೂಲಕ ತಮ್ಮ ವ್ಯಾಪ್ತಿಯ ಎಲ್ಲ ಮತಗಟ್ಟೆಗಳಿಗೆ ತಲುಪಿರುವ ಹಾಗೂ ನಿರ್ಗಮಿಸಿರುವ ಕುರಿತು ವರದಿಯನ್ನು ಸಲ್ಲಿಸಬೇಕು ಎಂದು ಸೆಕ್ಟರ ಅಧಿಕಾರಿಗಳ ಜವಾಬ್ದಾರಿಗಳ ಕುರಿತು ವಿವರಿಸಿದರು.

ಸಭೆಯಲ್ಲಿ ಚಿಕ್ಕೋಡಿ ಲೋಕಸಭಾ ಚುನಾವಣಾಧಿಕಾರಿಗಳ ಕಚೇರಿಯ ಸಹಾಯಕ ಚುನಾವಣಾಧಿಕಾರಿ ಬಸವರಾಜ ಅಡವಿಮಠ, ಚಿಕ್ಕೋಡಿ ಉಪವಿಭಾಗಾಧಿಕಾರಿ ಶ್ರೀಮತಿ ಮೆಹಬೂಬಿ, ಚಿಕ್ಕೋಡಿ ತಹಶೀಲ್ದಾರ ಚಿದಂಬರ ಕುಲಕರ್ಣಿ ಸೇರಿದಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳು, ತಹಶೀಲ್ದಾರರು, ಸೆಕ್ಟರ ಅಧಿಕಾರಿಗಳು, ವಿವಿಧ ಸಮಿತಿಯ ನೋಡೆಲ್ ಅಧಿಕಾರಿಗಳು ಹಾಜರಿದ್ದರು.

# ಏರುತ್ತಿದೆ ತಾಪಮಾನ ಜನರಿಗೆ ಬೆವರ ಮಜ್ಜನ: ತಂಪು ಪಾನೀಯ, ಹಣ್ಣುಗಳ ಮೊರೆ

ಬಾದಾಮಿ: ದಿನೇದಿನೆ ಪಟ್ಟಣ ಮತ್ತು ಗ್ರಾಮೀಣ ಪ್ರದೇಶದಲ್ಲಿ ಬಿಸಿಲು ಹೆಚ್ಚುತ್ತಿರುವುದರಿಂದ ಜನರು ಹೈರಾಣಾಗಿದ್ದಾರೆ. ಕಳೆದ ವಾರ 38ರಿಂದ 39 ಡಿಗ್ರಿ ಸೆಲ್ಸಿಯಸ್ ಇದ್ದ ಉಷ್ಣಾಂಶ ಶನಿವಾರ ಮತ್ತು ಭಾನುವಾರ 41 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ.

ಪ್ರಖರ ಬಿಸಿಲಿಗೆ ಬೆಟ್ಟಗಳು ಮತ್ತು ಸಿಸಿ ರಸ್ತೆಗಳು ಕಾದು ಕಾವು ಹೆಚ್ಚುತ್ತಿದೆ. ಬಿಸಿ ಗಾಳಿಗೆ ಜನರು ಮತ್ತು ಪ್ರಾಣಿಗಳು ತತ್ತರಿಸಿಹೋಗಿದ್ದಾರೆ.

ಬೆಳಿಗ್ಗೆ 10 ಗಂಟೆಗೇ ಹೆಚ್ಚಾಗುವ ಬಿಸಿಲಿನ ಧಗೆ, ಸಂಜೆ 4ರವರೆಗೆ ಇರುತ್ತದೆ. ಆನಂತರವೂ ಬಿಸಿಗಾಳಿ ಇರುತ್ತದೆ. ಇದರಿಂದ ಜನರು ಎಳನೀರು, ತಂಪುಪಾನೀಯ ಮತ್ತು



ಹಣ್ಣುಗಳ ಮೊರೆ ಹೋಗುತ್ತಿದ್ದಾರೆ.

'ಎಳನೀರು ಇಳುವರಿ ಕಡಿಮೆಯಾಗಿರುವುದರಿಂದ ಮಾರುಕಟ್ಟೆಯಲ್ಲಿ 30ರಿಂದ 40ಕ್ಕೆ ದರ ಏರಿದೆ. ಮಧ್ಯಾಹ್ನದೊಳಗೇ ಎಳನೀರು ಖಾಲಿಯಾಗುತ್ತದೆ' ಎಂದು ವರ್ತಕ ಶಂಕ್ರಪ್ಪ ಹೇಳಿದರು. 'ಮಾರುಕಟ್ಟೆಯಲ್ಲಿ ಹಣ್ಣಿನ ದರ ಹೆಚ್ಚಾಗಿದ್ದು, ದ್ರಾಕ್ಷಿ ದರ 60ರಿಂದ 80ಕ್ಕೆ, ಕಲ್ಲಂಗಡಿ 30ರಿಂದ 60ಕ್ಕೆ, ಸೇಬು 150ರಿಂದ 200ಕ್ಕೆ ಏರಿದೆ' ಹಣ್ಣಿನ ವ್ಯಾಪಾರಿ ಲಾಲಸಾಬ್ ತಿಳಿಸಿದರು.

### ವ್ಯಾಪಾರಸ್ಥರಿಗೆ ಸಂಕಷ್ಟ

'ಬಿಸಿಲು ಹೆಚ್ಚಾಗಿರುವ ಕಾರಣ ಹೆಚ್ಚಿನ ಜನರು ಮಾರುಕಟ್ಟೆಗೇ ಬರುತ್ತಿಲ್ಲ. ವ್ಯಾಪಾರ ಇಲ್ಲದ ಸುಮ್ಮನೆ ಕುಳಿತುಕೊಳ್ಳಬೇಕಿದೆ. ಮಧ್ಯಾಹ್ನ 12ರಿಂದ ಸಂಜೆ 4ರವರೆಗೆ ಯಾರೂ ಬರುವುದೆ ಇಲ್ಲ' ಎಂದು ವರ್ತಕ ಬಸವರಾಜ ಹಿರೇಹಾಳ ಹೇಳಿದರು.

'ನೆತ್ತಿ ಸುಡುವಂತಹ ಬಿಸಿಲೈತಿ. ಮೈಯಾಗ ಬೆವರು ಸುರಿತಾನೇ ಇರ್ತೈತಿ. ಮಳೀನೆ ಆಗೂವಲ್ದು. ಮಳಿ ಆಗದಿದ್ರ ಮುಂದ ಭಾಳ ಕಷ್ಟ ಐತ್ರಿ' ಎಂದು ಬಾದಾಮಿಯ ಸಂತೆಗೆ ಬಂದಿದ್ದ ಕುಟಕನಕೇರಿ ಗ್ರಾಮದ ಮಲ್ಲಿಕಾರ್ಜುನ ಹೇಳಿದರು.

# ಬಾಗಲಕೋಟೆಯಲ್ಲಿ ಕೈಗಾರಿಕೆ ಸ್ಥಾಪನೆ: ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತಾ ಪಾಟೀಲ



ಬೀಳಗಿ: ಬಿಜೆಪಿ ಅಭ್ಯರ್ಥಿ ಪಿ.ಸಿ.ಗದ್ದಿಗೌಡರಿಗೆ 20 ವರ್ಷ ಅವಕಾಶ ಕೊಟ್ಟಿದ್ದಿರಿ, ಹಾಗೆಯೇ ನನಗೂ ಒಂದು ಬಾರಿ ಅವಕಾಶ ಕೊಡಿ. ಮತಕ್ಷೇತ್ರದ ಅಭಿವೃದ್ಧಿಯ ಜೊತೆಗೆ, ಬಾಗಲಕೋಟೆ ನಗರದಲ್ಲಿ ಕಾರ್ಖಾನೆಗಳನ್ನು ಸ್ಥಾಪಿಸುವ ಮೂಲಕ ಕೈಗಾರಿಕಾ ಕ್ಷೇತ್ರವನ್ನು ಅಭಿವೃದ್ಧಿ ಪಡಿಸುತ್ತೇನೆ ಎಂದು ಕಾಂಗ್ರೆಸ್ ಅಭ್ಯರ್ಥಿ ಸಂಯುಕ್ತಾ ಪಾಟೀಲ ಹೇಳಿದರು.

ತಾಲ್ಲೂಕಿನ ಅರಕೇರಿ ಗ್ರಾಮದಲ್ಲಿ ಭಾನುವಾರ ಏರ್ಪಡಿಸಿದ್ದ ಲೋಕಸಭಾ ಚುನಾವಣಾ ಪ್ರಚಾರಾರ್ಥ ಸಭೆಯಲ್ಲಿ ಮತಯಾಚಿಸಿ ಮಾತನಾಡಿ, ಯುಕೆಪಿ, ಪ್ರವಾಸೋದ್ಯಮ, ರೈಲ್ವೆ, ಕೈಗಾರಿಕೆಗಳನ್ನು ಸ್ಥಾಪಿಸುವ ಮೂಲಕ ದುಡಿಯುವ ಕೈಗಳಿಗೆ ಕೆಲಸ ಒದಗಿಸುವ ಮೂಲಕ ಮತಕ್ಷೇತ್ರವನ್ನು ಸಮಗ್ರ ಅಭಿವೃದ್ಧಿ ಪಡಿಸುತ್ತೇನೆ ಎಂದು ಹೇಳಿದರು.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಮಹಿಳೆಯರಿಗೆ ಸರ್ಕಾರಿ ಉದ್ಯೋಗಗಳಲ್ಲಿ ಮೀಸಲಾತಿ ನೀಡುತ್ತೇವೆ. ನರೇಗಾ ಯೋಜನೆ ಸಂಬಳ ಹೆಚ್ಚಿಸುತ್ತೇವೆ. ರಾಜ್ಯದಲ್ಲಿ ಗ್ಯಾರಂಟಿ ಯೋಜನೆ ಲಾಭ ಪಡೆದುಕೊಳ್ಳುತ್ತಿದ್ದು, ಕೇಂದ್ರದಲ್ಲಿಯೂ ಕೂಡಾ ಗ್ಯಾರಂಟಿ ಯೋಜನೆ ಜಾರಿಗೆ ತರಲಾಗುತ್ತದೆ ಎಂದರು.

ಶಾಸಕ ಜೆ.ಟಿ.ಪಾಟೀಲ, ಕಾಂಗ್ರೆಸ್ ತಾಲ್ಲೂಕು ಘಟಕದ ಅಧ್ಯಕ್ಷ ಹನಮಂತ ಕಾಖಂಡಕಿ, ವೀಕ್ಷಕ ಡಾ.ಸಯ್ಯದ್ ಬೂರಾ, ಬಸವಪ್ರಭು ಸರನಾಡಗೌಡ, ಜಿ.ಪಂ. ಮಾಜಿ ಅಧ್ಯಕ್ಷ ಎಂ.ಎಲ್.ಕೆಂಪಲಿಂಗನ್ನವರ, ಕಸ್ತೂರಿ ಲಿಂಗಣ್ಣವರ, ಮುತ್ತು ದೇಸಾಯಿ, ಲಲಿತಾ ಗೊಣ್ಣಾಗರ, ಹನಮಂತ ಆಗೋಜಿ, ಮುದಕಪ್ಪ ಮಲ್ಲಾರ, ಬಸವರಾಜ ಸಾವಕಾರ, ಅಜಿತ್ ಪಾಟೀಲ, ನಾನಪ್ಪ ಪೂಜಾರಿ, ಮುತ್ತಪ್ಪ ಲಮಾಣಿ, ಕಲ್ಲಪ್ಪ ಆಲಗುಂಡಿ ಭಾಗವಹಿಸಿದ್ದರು.

# ಕೂಡಲಸಂಗಮದ ಸಂಗಮೇಶ್ವರ ಭವ್ಯ ರಥೋತ್ಸವ| ಬಂಗಾರ ಕಳಸದ ದರ್ಶನ ಪಡೆದ ಭಕ್ತಸಾಗರ

ಕೂಡಲಸಂಗಮ: ವರ್ಷದಲ್ಲಿ ಮೂರು ದಿನ ಮಾತ್ರ ಭಕ್ತರ ದರ್ಶನಕ್ಕೆ ದೊರೆಯುವ ಸಂಗಮನಾಥನ ಕಳಸಕ್ಕೆ ರಾಜ್ಯ ಮಾತ್ರವಲ್ಲದೆ ನೆರೆಯ ರಾಜ್ಯಗಳಿಂದ ಅಪಾರ ಭಕ್ತರು ಆಗಮಿಸಿ ದರ್ಶನ ಪಡೆದರು. ಕೆಲವು ಭಕ್ತರು ಬಂಗಾರದ ಕಳಸ ಹೊತ್ತು ನಡೆದರೆ ಇನ್ನೂ ಕೆಲವರು ಸ್ಪರ್ಶಿಸಿ ಸಂಭ್ರಮ ಪಟ್ಟರು.

ಬಾಗಲಕೋಟೆ ಜಿಲ್ಲಾ ಖಜಾನೆಯಲ್ಲಿ ವರ್ಷವಿಡಿ ಭದ್ರತೆಯಲ್ಲಿರುವ ಸಂಗಮೇಶ್ವರ ಬಂಗಾರ ಕಳಸವು ಜಾತ್ರೆಯ ನಿಮಿತ್ಯ 3 ದಿನ ಮಾತ್ರ ಭಕ್ತರ ದರ್ಶನಕ್ಕೆ ದೊರೆಯುವುದು. ಉಳಿದ ಅವಧಿಯಲ್ಲಿ ಜಿಲ್ಲಾ ಖಜಾನೆಯ ಭದ್ರತೆಯಲ್ಲಿ ಇರುವುದು.

ಭಾನುವಾರ ಬೆಳಗ್ಗೆ 8:30ಕ್ಕೆ ಬಾಗಲಕೋಟೆ ತಹಶೀಲ್ದಾರ್ ಕಾರ್ಯಾಲಯದಲ್ಲಿ ಕಳಸದ ಬಾಬುದಾರರು 72 ಗಂಟೆಯಲ್ಲಿ ಕಳಸವನ್ನು ಮರಳಿ ತಲ್ಲುಪಿಸುತ್ತೇವೆ ಎಂಬ ಷರತ್ತುಬದ್ಧ ಮುಚ್ಚಳಿಕೆ ಪತ್ರಕೊಟ್ಟು ಪೊಲೀಸ್ ಭದ್ರತೆಯಲ್ಲಿ ಸಾಯಂಕಾಲ 5:30ರವರೆಗೆ ಬಾಗಲಕೋಟೆಯಲ್ಲಿ, ರಾತ್ರಿ ಇಡೀ ಪಾದಯಾತ್ರೆಯ ಮೂಲಕ ಹಳೆಮಲ್ಲಾಪೂರ, ಕಿರಸೂರ, ಭಗವತಿ, ಹಳ್ಳೂರ, ಬೇವೂರ



ಮಾರ್ಗದ ಮೂಲಕ ಸೋಮವಾರ ಬೆಳಗ್ಗೆ 10 ಗಂಟೆಗೆ ಕೂಡಲಸಂಗಮಕ್ಕೆ ಆಗಮಿಸಿತು.

47 ಕಿ.ಮೀ. ದೂರದ ಮಾರ್ಗದುದ್ದಕ್ಕೂ ವಿವಿಧ ಗ್ರಾಮದ ಭಕ್ತರು ಸಂಭ್ರಮದಿಂದ ಬಂಗಾರದ ಕಳಸ ಸ್ವಾಗತಿಸಿ, ಪೂಜೆ, ಮೆರವಣಿಗೆ ಮಾಡಿ ಮುಂದಿನ ಗ್ರಾಮಕ್ಕೆ ಕಳುಹಿಸಿದರು. ಮಾರ್ಗದುದ್ದಕ್ಕೂ ಅನೇಕ ಭಕ್ತರು ಪ್ರಸಾದ, ತಂಪು ಪಾನಿಯ, ಹಣ್ಣುಗಳನ್ನು ವಿತರಿಸಿದರು.

ಪಾದಯಾತ್ರೆಯಲ್ಲಿ ಸುಮಾರು 16 ಸಾವಿರಕ್ಕೂ ಅಧಿಕ ಪುರುಷರು, 4 ಸಾವಿರಕ್ಕೂ ಅಧಿಕ ಮಹಿಳೆಯರು ಇದ್ದರು. 10 ಗಂಟೆಗೆ ಕೂಡಲಸಂಗಮಕ್ಕೆ ಆಗಮಿಸುತ್ತಿದ್ದಂತೆ ವಿವಿಧ ಗ್ರಾಮಗಳಿಂದ ಬಂದ ಕಲಾ ತಂಡಗಳು ನೃತ್ಯ ಪ್ರದರ್ಶನ ಮಾಡುತ್ತ ಸಂಗಮೇಶ್ವರ ದೇವಾಲಯಕ್ಕೆ ಆಗಮಿಸಿದರು.

ವಿವಿಧ ಗ್ರಾಮದ ಮಹಿಳೆಯರು ಆರತಿಯೊಂದಿಗೆ ಕಳಸದ ಹಿಂದೆ ಸಂಗಮನಾಥನ ದೇವಾಲಯದಲ್ಲಿ ಐದು ಸುತ್ತು ಪ್ರದಕ್ಷಿಣೆ ಹಾಕಿ ಸಂಗಮೇಶ್ವರ ದೇವಾಲಯದ ಮುಂದೆ ಪೂಜೆ ಸಲ್ಲಿಸಿ ದೇವಾಲಯದಿಂದ ಬಸವೇಶ್ವರ ವೃತ್ತದ ಮೂಲಕ ಗ್ರಾಮದ ಕಳಸದ ಕಟ್ಟೆಯವರೆಗೆ ಮೆರವಣಿಗೆಯ ಮೂಲಕ ತಂದರು. ನಂತರ ಗ್ರಾಮಸ್ಥರು ಕಳಸಕ್ಕೆ ದಿಂಡ ನಮಸ್ಕಾರ ಹಾಕುವ ಮೂಲಕ ಭಕ್ತಿಯನ್ನು ತೋರ್ಪಡಿಸಿದರು.

ಸಂಗಮೇಶ್ವರ ಜಾತ್ರೆಯಂದು ಮಾತ್ರ ಕೂಡಲಸಂಗಮಕ್ಕೆ ಬರುವ ಬಂಗಾರದ ಕಳಸವನ್ನು ನೋಡುವುದು ಬಾಗ್ಯ ನಮ್ಮ ಬಯಕೆಗಳು ಇಡೇರಿರುವುದಕ್ಕಾಗಿ ನಾವು ಕಳಸದ ಜೊತೆ ಪಾದಯಾತ್ರೆಯ ಮೂಲಕ ಬರುತ್ತೇವೆ ಎಂದು ಪಾದಯಾತ್ರೆಯಲ್ಲಿ ಭಕ್ತರು ಹೇಳಿದರು. ಹಿಂದೂ, ಮುಸ್ಲಿಂ, ಬೌದ್ಧರು ಕೂಡ ಪಾದಯಾತ್ರೆಯಲ್ಲಿ ಪಾಲ್ಗೊಂಡಿದ್ದರು.

### ಪಾದಯಾತ್ರಿಗಳಿಂದ ಪುಣ್ಯಸ್ನಾನ

ಬಾಗಲಕೋಟೆಯಿಂದ ಕೂಡಲಸಂಗಮಕ್ಕೆ ಕಳಸದ ಜೊತೆಗೆ ಪಾದಯಾತ್ರೆ ಮೂಲಕ ಬಂದ ಬಹುತೇಕ ಭಕ್ತರು, ಪ್ರವಾಸಿಗರು ಮೊನಕಾಲು ಮಟ್ಟದ ಕೃಷ್ಣಾ ನದಿಯಲ್ಲಿ ಮಿಂದು ಬೇಸಿಗೆ ಬೀಸಿಲಿನ ತಾಪ ತಣಿಸಿಕೊಂಡರು, ವಿಸ್ತಾರವಾಗಿ ಹರಡಿದ್ದರು ನೀರು ಮಾತ್ರ ಮೊನಕಾಲು ಮಟ್ಟದಲ್ಲಿ ಇದೆ.ಇನ್ನೂ ಕೆಲವರು ದೇವಾಲಯ ಹೊರ ಆವರಣದ ಉದ್ಯಾನವನ ಗಿಡದ ನೆರಳನ ತೆಳಗೆ ವಿಶ್ರಾಂತಿ ಪಡೆದರು.

ಸಂಚಾರಕ್ಕೆ ತೊಂದರೆ: ಬಸವೇಶ್ವರ ವೃತ್ತದಿಂದ ಸಂಗಮೇಶ್ವರ ದೇವಾಲಯದವರೆಗೆ ಇರುವ ರಸ್ತೆಗೆ ವ್ಯಾಪಾರಿಗಳು ನುಗ್ಗಿದ್ದರಿಂದ ಭಕ್ತರು ಸಂಚರಿಸಲು ತೊಂದರೆ ಅನುಭವಿಸಿದರು. ಮಾಹಿತಿ ಕೇಂದ್ರದ ಮುಂಭಾಗದಲ್ಲಿಯೇ ಅಧಿಕ ದ್ವಿಚಕ್ರವಾಹನಗಳು ನಿಂತಿರುವುದು ಸಂಚಾರಕ್ಕೆ ತೊಂದರೆ ಉಂಟುಮಾಡಿತು. ವಾಹನಗಳಲ್ಲಿ, ಬಸ್‌ಗಳಲ್ಲಿ ಬಂದ ಭಕ್ತರನ್ನು ಪೊಲೀಸ್ ಸಿಬ್ಬಂದಿ +ಸಂಗಮೇಶ್ವರ ಪ್ರೌಢಶಾಲಾ ಪ್ರವೇಶ ದ್ವಾರಕ್ಕೆ ತಡೆದಿದ್ದರಿಂದ ಭಕ್ತರು 600 ರಿಂದ 800 ಮೀಟರ್ ಬೀಸಿಲಿನಲ್ಲಿಯೇ ನಡೆದು ಸಂಗಮನಾಥನ ದರ್ಶನ ಪಡೆದು ಜಾತ್ರೆಯಲ್ಲಿ ಪಾಲ್ಗೊಂಡರು.

# ಮಹಾರಾಷ್ಟ್ರದ ಸಿಎಂ ಇಂದು ಬೆಳಗಾವಿಗೆ



ಬೆಳಗಾವಿ: ಜಿಲ್ಲೆಯಲ್ಲಿ ಲೋಕಸಭಾ ಚುನಾವಣೆ ದಿನದಿಂದ ದಿನಕ್ಕೆ ರಂಗೇರಿದೆ, ಮತಬೇಟೆಗಾಗಿ ಇಂದು ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ ಶಿಂಧೆ, ಮೇ 3 ರಂದು ಕೇಂದ್ರ ಗೃಹ ಸಚಿವ ಅಮೀತ್ ಶಾ ಅವರು ಬೆಳಗಾವಿಗೆ ಆಗಮಿಸಲಿದ್ದು, ಇಂದು ಮಹಾರಾಷ್ಟ್ರ ಸಿಎಂ ಏಕನಾಥ ಶಿಂಧೆ, ಅವರು ಮಧ್ಯಾಹ್ನ 1-00 ಗಂಟೆಗೆ ಬೆಳಗಾವಿ ಗ್ರಾಮೀಣ ಕ್ಷೇತ್ರದ ಬಾಳೆಕುಂದ್ರಿಯಲ್ಲಿ ಚುನಾವಣಾ ಪ್ರಚಾರ ಮಾಡಲಿದ್ದಾರೆ. ನಾಳೆ ಅಮೀತ್ ಶಾ ಅವರು ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಹುಕ್ಕೇರಿಯಲ್ಲಿ ಮತಯಾಚನೆ ಮಾಡಲಿದ್ದಾರೆ.

# ಉತ್ತರ ಕನ್ನಡ ಲೋಕಸಭೆ ಕ್ಷೇತ್ರ ಮೇಲೆ ನೋಡಿದ್ರೆ ಏನಿದೆ: ಡಾ.ಅಂಜಲಿ ಪ್ರಶ್ನೆ



ಚನ್ನಮ್ಮನ ಕಿತ್ತೂರು: 'ಉತ್ತರ ಕನ್ನಡ ಲೋಕಸಭೆ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು 'ನನ್ನನ್ನು ನೋಡಬೇಡಿ, ಮೇಲೆ ನೋಡಿ ವೋಟ್ ಹಾಕಿ' ಎನ್ನುತ್ತಾರೆ. ಮೇಲೆ ನೋಡಿದರೆ ಏನಿದೆ, ದೇವರೇ ಕಾಣುವುದಿಲ್ಲ; ಇನ್ನು ಮೋದಿ ಎಲ್ಲಿ ಕಾಣಬೇಕು' ಎಂದು ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಡಾ. ಅಂಜಲಿ ನಿಂಬಾಳಕರ ಲೇವಡಿ ಮಾಡಿದರು.

ಸೋಮವಾರ ಇಲ್ಲಿಯ ಸೋಮವಾರ ಪೇಟೆಯ ಚನ್ನಮ್ಮ ವರ್ತುಲದಲ್ಲಿ ಲೋಕಸಭೆ ಚುನಾವಣೆ ಪ್ರಯುಕ್ತ ಬಹಿರಂಗ ಪ್ರಚಾರ ಭಾಷಣ ಮಾಡಿದ ಅವರು, ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು. 'ಅದಾನಿ ಮತ್ತು ಅಂಬಾನಿಯ ಮನೆ ತುಂಬಿಸುವ ಕೆಲಸವನ್ನು ಕೇಂದ್ರದ ಮೋದಿ ಸರ್ಕಾರ ಮಾಡುತ್ತಿದೆ. ಈ ಬಗ್ಗೆ ಪ್ರಶ್ನೆ ಮಾಡಿದವರನ್ನು ಜೈಲಿಗೆ ಕಳುಹಿಸಲಾಗುತ್ತಿದೆ' ಎಂದು ಆರೋಪಿಸಿದರು.

'ಉತ್ತರ ಕನ್ನಡ ಲೋಕಸಭೆ ಕ್ಷೇತ್ರದ ಮತದಾರ ಇಲ್ಲಿಯವರೆಗೆ ಕಣ್ಮುಚ್ಚಿ ಮತ ಹಾಕುತ್ತ ಬಂದಿದ್ದಾನೆ. ಆಯ್ಕೆಯಾಗಿ ಹೋದ ಸಂಸದನಿಂದ ಏನೂ ಜನಹಿತ ಕಾರ್ಯಗಳಾಗಿಲ್ಲ. ಈ ಒಂದು ಬಾರಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಬೇಕು' ಎಂದು ಅವರು ಮನವಿ ಮಾಡಿಕೊಂಡರು.

ಶಾಸಕ ಬಾಬಾಸಾಹೇಬ ಪಾಟೀಲ ಮಾತನಾಡಿ, 'ಕಾಂಗ್ರೆಸ್ ಪಕ್ಷ ವಿಧಾನಸಭೆ ಚುನಾವಣೆ ಸಂದರ್ಭದಲ್ಲಿ ನೀಡಿದ ಐದು ಗ್ಯಾರಂಟಿ ಯೋಜನೆಯ ಭರವಸೆಗಳನ್ನೆಲ್ಲ ಈಡೇರಿಸಿ ನುಡಿದಂತೆ ನಡೆದಿದ್ದೇವೆ' ಎಂದು ಹೇಳಿದರು.

ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ಸೂಚಿಸಿ ಕರವೇ ಕಾರ್ಯಕರ್ತ ದಶರಥ ಬನೋಶಿ ಮಾತನಾಡಿ, 'ಇಬ್ಬರು ದೇಶ ಮಾರುತ್ತಿದ್ದಾರೆ, ಇಬ್ಬರು ಕೊಳ್ಳುತ್ತಿದ್ದಾರೆ. ಮಾರುವವರು, ಕೊಳ್ಳುವವರು ಎಲ್ಲರೂ ಗುಜರಾತ ರಾಜ್ಯದವರಾಗಿದ್ದಾರೆ' ಎಂದು ಮೋದಿ, ಅಮಿತ್ ಶಾ, ಅದಾನಿ ಮತ್ತು ಅಂಬಾನಿ ವಿರುದ್ಧ ವಾಗ್ದಾಳಿ ನಡೆಸಿದರು.

ರೈತ ಸಂಘಟನೆಗಳ ಒಕ್ಕೂಟದ ಮುಖಂಡ ಬಸನಗೌಡ ಪಾಟೀಲ ಮಾತನಾಡಿ, 'ರೈತರು ಬೆಳೆದ ಬೆಳೆಗಳಿಗೆ ಯೋಗ್ಯ ಬೆಲೆ ನೀಡದ, ಗೊಬ್ಬರ ಬೆಲೆ ಮಾತ್ರ ದುಪ್ಪಟ್ಟು ಮಾಡಿದ ನರೇಂದ್ರ ಮೋದಿ ಈ ಚುನಾವಣೆಯಲ್ಲಿ ಸೋಲಬೇಕು' ಎಂದರು.

ಕೆಪಿಸಿಸಿ ಸದಸ್ಯೆ ರೋಹಿಣಿ ಪಾಟೀಲ, ಮುಖಂಡರಾದ ಶಂಕರ ಹೊಳಿ, ಎಂ. ಎಫ್. ಜಕಾತಿ, ಸಿದ್ದು ಮಾರಿಹಾಳ, ಕೃಷ್ಣ ಬಾಳೇಕುಂದ್ರಿ, ಕಾರ್ಯಕರ್ತರು ಇದ್ದರು.

# ಉತ್ತರ, ದಕ್ಷಿಣ ಹಾಗೂ ಗ್ರಾಮೀಣ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಪ್ರಚಾರ

ಬೆಳಗಾವಿ: ಬೆಳಗಾವಿ ಉತ್ತರ ಹಾಗೂ ಗ್ರಾಮೀಣ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಂಗಳವಾರ ಸಂಜೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹಾಗೂ ಶಾಸಕ ರಾಜು ಸೇಠ್ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಪರವಾಗಿ ಮತಯಾಚನೆ ಮಾಡಿದರು.

ಬೆಳಗಾವಿ ಉತ್ತರ ವಿಧಾನಸಭಾ ಕ್ಷೇತ್ರದ ತೆಂಗಿನಕೇರಿಗಲ್ಲಿ, ನೆಹರು ನಗರ ಹಾಗೂ ಅಶೋಕ ನಗರ, ಗಾಂಧಿನಗರದ ದೀಪಕ್ ಗಲ್ಲಿ, ದೀಪಕ್ ಕಾಲೋನಿಗಳಲ್ಲಿ ಪ್ರಚಾರ ಮಾಡಲಾಯಿತು. ಈ ವೇಳೆ ನಾಗರಿಕರಿಂದ ಅತ್ಯುತ್ತಮ ಬೆಂಬಲ ದೊರೆಯಿತು. ಈ ಬಾರಿ ಮೃಣಾಲ ಹೆಬ್ಬಾಳಕರ್ ಆಯ್ಕೆ ಖಚಿತ ಎಂದು ಜನರು ಅಭಯ ನೀಡಿದರು.

ಈ ವೇಳೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಶಾಸಕ ರಾಜು ಅಸಿಫ್ ಸೇಠ್, ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ, ಎ.ಪಿ.ಎಂ.ಸಿ ಮಾಜಿ ಅಧ್ಯಕ್ಷರಾದ ಶಿವನಗೌಡ ಪಾಟೀಲ್, ಮುಖಂಡರಾದ ರಾಜಶೇಖರ ತಲ್ವಾರ್, ನಿಖಿಲ್ ರವೀಂದ್ರ ಮೂಲ್ಕೋಟೆ, ಅಮನ್ ಸೇಠ್ ಸೇರಿದಂತೆ ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು.




ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಕಂಗ್ರಾಳಿ ಕೆ.ಎಚ್ ಗ್ರಾಮದಲ್ಲಿ ಸಚಿವರು ಪ್ರಚಾರ ನಡೆಸಿದರು. ಈ ಸಮಯದಲ್ಲಿ ಲತಾ ಪಾಟೀಲ, ಬಾಳಾರಾಮ ಪಾಟೀಲ, ಜ್ಯೋತಿ ಪಾಟೀಲ, ವೀಣಾ ಮುತಗೇಕರ, ಮನೋಹರ್ ಪಾಟೀಲ, ಸುಧೀರ ಪಾಟೀಲ, ಕೆಂಪಣ್ಣ ಎಸ್, ರಾಧಾ ಕಾಂಬಳೆ, ಮೋಹನ್ ಪಾಟೀಲ, ಆನಂದ ಭಜಂತ್ರಿ ಉಪಸ್ಥಿತರಿದ್ದರು.

ನಂತರ ಕಂಗ್ರಾಳಿ ಬಿ.ಕೆ ಗ್ರಾಮದಲ್ಲಿ ಮತಯಾಚನೆ ಮಾಡಲಾಯಿತು. ಗ್ರಾಮ ಪಂಚಾಯತಿ ಅಧ್ಯಕ್ಷ ಕೌಸರಜಹಾನ್ ಸಯ್ಯದ್, ಜಯರಾಮ ಪಾಟೀಲ್, ದತ್ತಾ ಪಾಟೀಲ್, ಉಮೇಶ ಪಾಟೀಲ, ಶೀತಲ್ ಪಾಟೀಲ, ಸುವರ್ಣ ಲಕ್ಕಣ್ಣವರ, ಫಕೀರಪ್ಪ ಬೆಳಗಾವಿ, ಮೇನಕಾ ಕುರುಡೆ, ಶಕುಂತಲಾ ಸಿಂಗ್, ವೇದಿಕಾ ಪಠಾಣಿ, ಗಾಯತ್ರಿ ಪಾಟೀಲ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

ನಂತರ, ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಹಾಪೂರದ ಗಾಡೆ ಮಾರ್ಗ್ ಸಿದ್ದಾರ್ಥ ಕಾಲೋನಿಯ ಚಲವಾದಿ ಸಮಾಜ ಸೇವಾ ಕಮಿಟಿ ಹಾಲ್ ನಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಪ್ರಚಾರ ನಡೆಸಿದರು.

## 300 ಹಳ್ಳಿಗಳಿಗಿಲ್ಲ ಬಸ್ ಸೌಲಭ್ಯ: ವಿನಯ್ ಕುಮಾರ್

ದಾವಣಗೆರೆ: 'ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಸುಮಾರು 300 ಹಳ್ಳಿಗಳಿಗೂ ಹೆಚ್ಚು ಕಡೆಗಳಲ್ಲಿ ಬಸ್‌ಗಳಿಲ್ಲ. ಮೂರು ದಶಕ ಅಧಿಕಾರ ಅನುಭವಿಸಿದರು ಯಾಕೆ ಮಾಡಲಿಲ್ಲ ಎಂಬ ಪ್ರಶ್ನೆ ಕೇಳಿ' ಎಂದು ದಾವಣಗೆರೆ ಲೋಕಸಭಾ ಕ್ಷೇತ್ರದ ಪಕ್ಷೇತರ ಅಭ್ಯರ್ಥಿ ಜಿ.ಬಿ. ವಿನಯ್ ಕುಮಾರ್ ಹೇಳಿದರು.

ಚನ್ನಗಿರಿ ತಾಲ್ಲೂಕಿನ ಮರಡಿ ಗ್ರಾಮದಲ್ಲಿ ರೋಡ್ ಶೋ ನಡೆಸಿ ಅವರು ಮಾತನಾಡಿದ ಅವರು, 'ಶಿಕ್ಷಣ, ಉದ್ಯೋಗ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿಯೂ ಅಭಿವೃದ್ಧಿ ಕ್ರಾಂತಿ ಮಾಡಿ ತೋರಿಸುತ್ತೇನೆ. ಹಳ್ಳಿಗಳಲ್ಲಿ ಸೂಕ್ತ ಬಸ್ ಸೌಲಭ್ಯ ಇಲ್ಲದ ಕಾರಣ ಸಾವಿರಾರು ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ತೊಂದರೆ–ಯಾಗಿದೆ. ಪೋಷಕರು ಈ ಬಗ್ಗೆ ಗಂಭೀರವಾಗಿ ಆಲೋಚಿಸಬೇಕು. ಅಧಿಕಾರಕ್ಕೆ ಬಂದವರ ಕೈಯಲ್ಲಿ ಯಾಕೆ ಸಾಧ್ಯವಾಗಿಲ್ಲ' ಎಂದು ಪ್ರಶ್ನಿಸಿದರು. 'ಜಿಲ್ಲೆಯ ಅಭಿವೃದ್ಧಿಗಾಗಿ ದೊಡ್ಡ ದೊಡ್ಡ ಕನಸು ಕಂಡಿದ್ದೇನೆ. ಕ್ಷೇತ್ರದ ಜನರು, ಯುವಕರು, ಮಕ್ಕಳಿಗೆ ಒಳ್ಳೆಯದಾಗಬೇಕು ಎಂದು. ಯುವಕರಿಗೆ ಉದ್ಯೋಗಾವಕಾಶ ಸಿಗುವಂತಾಗಬೇಕು. ಆತ್ಮಸಾಕ್ಷಿಗೆ ಅನುಗುಣವಾಗಿ ಮತ ಚಲಾಯಿಸಿ.

# ಮುಸ್ಲಿಮರು ಮೋದಿ ಬೆಂಬಲಿಸಲಿ: ರಮೇಶ ಜಾರಕಿಹೊಳಿ

ಉದಯವಾಣಿ ಸಮಾಚಾರಗೋಕಾಕ: ಕಾಂಗ್ರೆಸ್ ಪಕ್ಷ ಎಸ್‌ಸಿ ಮತ್ತು ಎಸ್‌ಟಿ ಸಮುದಾಯವನ್ನು ತಮ್ಮ ವೋಟ್ ಬ್ಯಾಂಕ್ ಆಗಿ ಬಳಸಿಕೊಂಡಿದ್ದಾರೆ. ಕಾಂಗ್ರೆಸ್ ಪಕ್ಷದಿಂದ ಎಸ್‌ಸಿ, ಎಸ್‌ಟಿ, ಅಲ್ಪಸಂಖ್ಯಾತರ ಹಾಗೂ ಹಿಂದುಳಿದ ವರ್ಗಗಳ ಅಭಿವೃದ್ಧಿಯಾಗಿಲ್ಲ. ಎಲ್ಲರನ್ನೂ ಒಗ್ಗೂಡಿಸಿ ಕರೆದುಕೊಂಡು ಹೋಗುತ್ತಿರುವ ಪ್ರಧಾನಿ ನರೇಂದ್ರ ಮೋದಿಯವರನ್ನು ಬೆಂಬಲಿಸುವಂತೆ ಶಾಸಕ ರಮೇಶ ಜಾರಕಿಹೊಳಿ ಹೇಳಿದರು.

ಅವರು ನಗರದ ನ್ಯೂ ಇಂಗ್ಲಿಷ್ ಶಾಲೆ ಆವರಣದಲ್ಲಿ ನಡೆದ ಬೆಳಗಾವಿ ಲೋಕಸಭಾ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ ಪ್ರಚಾರ ಸಭೆ ಉದ್ಘಾಟಿಸಿ ಮಾತನಾಡಿ, ಮುಸ್ಲಿಮ್ ಸಮುದಾಯದವರು ಸಹ ಭಾರತೀಯ–ರೇ. ಕಾಂಗ್ರೆಸ್ ಪಕ್ಷದ ಸುಳ್ಳು ಭರವಸೆಗಳಿಗೆ ಕಿವಿಗೊಡದೆ ಪ್ರಧಾನಿ ನರೇಂದ್ರ ಮೋದಿಯವರನ್ನು ಈ ಬಾರಿ ಮುಸ್ಲಿಂ ಸಮುದಾಯ ಬೆಂಬಲಿಸಿ ಅವರ ಕೈ ಬಲಪಡಿಸಬೇಕು.

ಎಲ್ಲರೊಡನೆ ಎಲ್ಲರ ಶ್ರೇಯೋಭಿವೃದ್ಧಿ ಬಯಸುವ ಪ್ರಧಾನಿ ನರೇಂದ್ರ ಮೋದಿ ಮೂರನೇ ಬಾರಿಗೆ ಪ್ರಧಾನಿಯಾಗಿಸಲು ನಾವೆಲ್ಲರೂ ಶ್ರಮಿಸೋಣ ಎಂದರು. ಕಾಂಗ್ರೆಸ್ ಪಕ್ಷ ನೀಡುತ್ತಿರುವ ಗ್ಯಾರಂಟಿಗಳು ಚುನಾವಣೆ ಗಿಮಿಕ್. ಚುನಾವಣೆ ನಂತರ ಎಲ್ಲವನ್ನೂ ಸ್ಥಗಿತಗೊಳಿಸಲಿದ್ದಾರೆ. ಕಾಂಗ್ರೆಸ್‌ನ ಬಿಟ್ಟಿ ಭಾಗ್ಯಗಳು ಮುಂದುವರೆದಲ್ಲಿ ಪಾಕಿಸ್ತಾನ,



ಶ್ರೀಲಂಕಾ ದೇಶಗಳಂತೆ ಅರಾಜಕತೆ ಸೃಷ್ಟಿಯಾಗುತ್ತದೆ. ದೇಶದ ಭದ್ರತೆ, ಅಭಿವೃದ್ಧಿಯ ಚುನಾವಣೆ ಇದಾಗಿದ್ದು ಹಗಲಿರುಳು ದೇಶಕ್ಕಾಗಿ ದುಡಿಯುತ್ತಿರುವ ಉಕ್ಕಿನ ಮನುಷ್ಯ ಮೋದಿಯವರನ್ನು ಬೆಂಬಲಿಸೋಣ. ಅವರು ಪ್ರಧಾನಿ ಆಗುವದು ನಿಶ್ಚಿತ.

ಅದರೊಂದಿಗೆ ಜಗದೀಶ ಶೆಟ್ಟರ ಮಂತ್ರಿಯಾಗುವುದು ಜಿಲ್ಲೆಯ ಅಭಿವೃದ್ಧಿಗೆ ಸಹಕಾರಿಯಾಗುತ್ತದೆ. ಬೆಳಗಾವಿ ಜಿಲ್ಲೆಗೆ ಬಿಜೆಪಿ ಪಕ್ಷ ಅನೇಕ ಕೊಡುಗೆಗಳನ್ನು ನೀಡಿದೆ. ಕಳೆದ ಬಿಜೆಪಿ ಸರಕಾರದಲ್ಲಿ ತಾಲೂಕಿನ ಶಿವಾಪೂರ ಗ್ರಾಮದಲ್ಲಿ ಇಂಡಸ್ಟ್ರಿಯಲ್ ಪಾರ್ಕ್ ಸ್ಥಾಪಿಸಲು ಸರ್ವೇ ಮಾಡಿಸಲಾಗಿತ್ತು, ಕಾಂಗ್ರೆಸ್ ಅಧಿ ಕಾರ–ಕ್ಕೆ ಬಂದಿದ್ದರಿಂದ ಆ ಯೋಜನೆ ಸ್ಥಗಿತಗೊಂಡಿದೆ. ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ ಅನುಭವಿ ರಾಜಕಾರಣಿ.

ಅವರ ಮೂಲಕ ಬರುವ ದಿನಗಳಲ್ಲಿ ಕೈಗಾರಿ–ಕೆ, ನೀರಾವರಿ, ಆಧುನಿಕ ತಂತ್ರಜ್ಞಾನದ ಕೃಷಿ ಸೇರಿದಂತೆ ಇನ್ನಿತರ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವುದರೊಂದಿಗೆ ಜಿಲ್ಲೆ ಅಭಿವೃದ್ಧಿಯಾಗುತ್ತದೆ. ಜಗದೀಶ ಶೆಟ್ಟರ ಅವರು ನನ್ನ ಮಿತ್ರರಾಗಿದ್ದು ಅವರಿಗೆ ತಮ್ಮ ಮತವನ್ನು ನೀಡಿ ಆಶೀರ್ವದಿಸುವಂತೆ ಪ್ರಧಾನಿ ಮೋದಿಯವರೇ ಹೇಳಿದ್ದು, ಬಿಜೆಪಿಗೆ ಮತ ನೀಡುವಂತೆ ಮನವಿ ಮಾಡಿದರು.

ಅಭ್ಯರ್ಥಿ ಜಗದೀಶ ಶೆಟ್ಟರ ಮಾತನಾಡಿ, ನರೇಂದ್ರ ಮೋದಿಯವರು ದೇಶದ ಆಸ್ತಿಯಾಗಿದ್ದು ಅವರಂತಹ ಮತ್ತೊಬ್ಬ ಪ್ರಧಾನಿ ಸಿಗಲು ಸಾಧ್ಯವಿಲ್ಲ. ತಮ್ಮ ದಕ್ಷ ಆಡಳಿತದಿಂದ ದೇಶ ವಿದೇಶಗಳಲ್ಲಿ ಜನಪ್ರಿಯರಾಗಿದ್ದಾರೆ. ಯುದ್ಧಕಾಲದಲ್ಲಿ ಭಾರತೀಯರನ್ನು ಸುರಕ್ಷಿತವಾಗಿ ಕರೆ ತಂದಿದ್ದಾರೆ ಎಂದರು.

ವೇದಿಕೆ ಮೇಲೆ ಬೆಳಗಾವಿ ಜಿಲ್ಲಾ ಬಿಜೆಪಿ ಗ್ರಾಮಾಂತರ ಅಧ್ಯಕ್ಷ ಸುಭಾಸ ಪಾಟೀಲ, ಮಾಜಿ ಶಾಸಕ ಎಮ್ ಎಲ್ ಮುತ್ತೇನ್ನವರ, ಕೆಎಲ್‌ಇ ನಿರ್ದೇಶಕ ಜಯಾನಂದ ಮುನವಳ್ಳಿ, ಪ್ರಭಾ ಶುಗರ್ ಅಧ್ಯಕ್ಷ ಅಶೋಕ ಪಾಟೀಲ, ಬಿಜೆಪಿ ನಗರ ಮಂಡಲ ಅಧ್ಯಕ್ಷ ಭೀಮಶಿ ಭರಮನ್ನವರ, ಗ್ರಾಮೀಣ ಅಧ್ಯಕ್ಷ ರಾಜೇಂದ್ರ ಗೌಡಪ್ಪಗೋಳ, ಚಿಕ್ಕರೇವಣ್ಣ, ಕೆ ವಿ ಪಾಟೀಲ ಇದ್ದರು. ನ್ಯಾಯವಾದಿ ಎಲ್ ಎಚ್ ಭಂಡಿ ಸ್ವಾಗತಿಸಿ, ವಂದಿಸಿದರು.

## ಮೋದಿ ಸತ್ತರೆ ಯಾರೂ ಪ್ರಧಾನಿ ಆಗುವುದೇ ಇಲ್ವೇ ? ವಿವಾದಾತ್ಮಕ ಹೇಳಿಕೆ ನೀಡಿದ ಶಾಸಕ

ಬೆಳಗಾವಿ: ಮೋದಿ ತೀರಿಕೊಂಡರೆ ದೇಶದ 140 ಕೋಟಿ ಜನಸಂಖ್ಯೆಯಲ್ಲಿ ಪ್ರಧಾನಿ ಅಭ್ಯರ್ಥಿ ಯಾರೂ ಇಲ್ಲವೇ ಎಂದು ಕಾಗವಾಡ ಶಾಸಕ ರಾಜು ಕಾಗೆ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ಕಾಗವಾಡ ತಾಲೂಕಿನ ಮಮದಾಪುರ ಗ್ರಾಮದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರ ಚುನಾವಣಾ ಪ್ರಚಾರ ಸಭೆಯಲ್ಲಿ ಮಾತನಾಡಿದ ಕಾಗೆ ಅವರು ನರೇಂದ್ರ ಮೋದಿ ತೀರಿಕೊಂಡರೆ ಈ ದೇಶದಲ್ಲಿ ಮುಂದೆ ಯಾರೂ ಪ್ರಧಾನಿ ಆಗುವುದೇ ಇಲ್ಲವೇ ಎಂದು ನಾಲಿಗೆ ಹರಿಬಿಟ್ಟರು.

ನಾನು ಪದವೀಧರ ಇದ್ದೇನೆ. ನಾನೇನು ಕುರಿ ಅಲ್ಲ. ದೇಶವನ್ನು ಸಮರ್ಥವಾಗಿ



ನಡೆಸುವ ವಿಶ್ವಾಸ ನನ್ನಲ್ಲಿ ಇದೆ. ಈಗಿನ ಯುವಕರು ಮೋದಿ ಮೋದಿ ಎನ್ನುತ್ತಾರೆ. ಚಿಕ್ಕೋಡಿ ಕ್ಷೇತ್ರದ ಅಭ್ಯರ್ಥಿ ಜೊಲ್ಲೆ ದಂಪತಿಗಳು ಮೋದಿ ನೋಡಿ ಮತ ಹಾಕಿ ಎಂದು ಪ್ರಚಾರ ಮಾಡುತ್ತಾರೆ. ಮೋದಿ ಬೇಕು ಎನ್ನುತ್ತಾರೆ. ಇಲ್ಲಿ ಏನಾದರೂ ಸಮಸ್ಯೆಯಾದರೆ ಮೋದಿ ಬರುವುದಿಲ್ಲ. ನಾವೇ ನಿಮ್ಮ ಸಮಸ್ಯೆ ಕೇಳಬೇಕು ಎಂದು ವ್ಯಂಗ್ಯವಾಡಿದರು.

ಕೆಳಗಡೆ ನಾನು, ಲಕ್ಷ್ಮಣ ಸವದಿ ಹಾಗೂ ಸತೀಶ ಜಾರಕಿಹೊಳಿ ಬೇಕು. ಮೇಲುಗಡೆ ಮೋದಿ ಬೇಕು ಎನ್ನುತ್ತಾರೆ. ಇದಾವ ಲೆಕ್ಕ. ಇಲ್ಲಿ ನಿಮ್ಮನ್ನು ನೋಡುವವರು ನಾವು. ಮೋದಿ ಬರುವದಿಲ್ಲ.

ಪ್ರಧಾನಿ ನರೇಂದ್ರ ಮೋದಿ ಅವರು 3000 ಕೋಟಿ ವಿಮಾನದಲ್ಲಿ ಓಡಾಡುತ್ತಾ–ರೆ. ನಾಲ್ಕು ಲಕ್ಷ ರೂ ಬೆಲೆಯ ಸೂಟ್ ಹಾಕಿಕೊಳ್ಳುತ್ತಾರೆ ಎಂದು ವಾಗ್ದಾಳಿ ನಡೆಸಿದರು.

## ಮರುಭೂಮಿಯ ದಾಹವಾದ ಪ್ರಧಾನಿ ಮೋದಿ ಭರವಸೆ: ಶರದ್



ಬೆಳಗಾವಿ: ಪ್ರಧಾನಿ ಮೋದಿ ಭರವಸೆ ಮರುಭೂಮಿಯ ದಾಹವಾಗಿದೆ ಎಂದು ಎನ್‌ಸಿಪಿ ಮುಖ್ಯಸ್ಥ ಶರದ್ ಪವಾರ್ ಹೇಳಿಕೆ ನೀಡಿದ್ದಾರೆ. ಚಿಕ್ಕೋಡಿ ಲೋಕಸಭಾ ಕ್ಷೇತ್ರದ ನಿಪ್ಪಾಣಿಯಲ್ಲಿ ನಡೆದ ಕಾಂಗ್ರೆಸ್ ಪಕ್ಷದ ಪರವಾಗಿ ಎನ್ ಸಿ ಪಿ ಹಮ್ಮಿಕೊಂಡಿದ್ದ ಸಮಾವೇಶದಲ್ಲಿ ಮಾತನಾಡಿದ ಅವರು ಸದ್ಯ ದೇಶದಲ್ಲಿ ನಡೆಯುತ್ತಿರುವ ಲೋಕಸಭೆ ಚುನಾವಣೆ ಮಹತ್ವದ್ದಾಗಿದ್ದು, ವಿಶ್ವದ ಗಮನ ಈ ಚುನಾವಣೆಯತ್ತ ನೆಟ್ಟಿದೆ.

ಸ್ವಾತಂತ್ರ್ಯ ನಂತರ ದೇಶದ ಮೊದಲ ಪ್ರಧಾನಿಗಳಾಗಿದ್ದ ಪಂಡಿತ್ ಜವಾಹರಲಾಲ್ ನೆಹರು, ಇಂದಿರಾಗಾಂಧಿ, ರಾಜೀವ್ ಗಾಂಧಿ ಅವರ ಕಾಲದಲ್ಲಿ ಪ್ರಜಾಪ್ರಭುತ್ವ ಜೀವಂತವಾಗಿತ್ತು. ಆದ–ರೆ ಈಗ ನರೇಂದ್ರ ಮೋದಿಯವರ ಬಿಜೆಪಿ ಸರ್ಕಾರ ಪ್ರಜಾಪ್ರಭುತ್ವವನ್ನು ಕೊನೆಗೊಳಿಸಿ ಸರ್ವಾಧಿಕಾರವನ್ನು ತರುತ್ತಿದ್ದಾರೆ.

ಪ್ರಧಾನಿ ಮೋದಿ ಭರವಸೆ ಮರುಭೂಮಿಯ ದಾಹವಾಗಿದೆ ಎಂದು ಶರದ್ ಪವಾರ್ ಟೀಕೆ ಮಾಡಿದರು. ಸಾಮಾನ್ಯ ಮನುಷ್ಯನಿಗೆ ಬದುಕುವ ಹಕ್ಕಿದೆ. 2014ರಲ್ಲಿ ಮೋದಿ ಸರಕಾರ ಹಲವು ಭರವಸೆಗಳನ್ನು ನೀಡಿತ್ತು. ಆದರೆ ಅವರು ಅನುಸರಿಸಲಿಲ್ಲ. 2014ರಲ್ಲಿ 71 ರೂ. ಇದ್ದ ಪೆಟ್ರೋಲ್ ಬೆಲೆ ಈಗ 100 ರೂಪಾಯಿಯಾಗಿದೆ. ಗೃಹಬಳಕೆಯ ಗ್ಯಾಸ್ ಬೆಲೆ 410 ರೂಪಾಯಿಯಿಂದ 1100 ರೂ.ಗೆ ಏರಿಕೆಯಾಗಿದೆ.

ಮೋದಿ ಸರ್ಕಾರ ದೊಡ್ಡ ಉದ್ಯಮಿಗಳಿಗೆ ಉಣಬಡಿಸುವ ಕೆಲಸ ಮಾಡುತ್ತಿದೆ. ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಮತ್ತು ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್ ಅವರಂತಹ ಅನೇಕ ಸರ್ಕಾರಗಳನ್ನು ಮತ್ತು ನಾಯಕರನ್ನು ಜೈಲಿಗೆ ಹಾಕುವ ಕೆಲಸವನ್ನು ಮಾಡಿ ಬಿಜೆಪಿಯು ಸರ್ಕಾರಿ ಯಂತ್ರವನ್ನು ದುರುಪಯೋಗಪಡಿಸಿಕೊಳ್ಳುತ್ತಿದೆ.

ಆದರೆ ಕರ್ನಾಟಕ ಮತ್ತು ತೆಲಂಗಾಣದ ಕಾಂಗ್ರೆಸ್ ಸರಕಾರವು ಭರವಸೆಯಂತೆ ಐದು ಖಾತರಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸುವ ಮೂಲಕ ದೇಶಕ್ಕೆ ಹೊಸ ಮಾದರಿಯನ್ನು ಸೃಷ್ಟಿಸಿದೆ.

ಈ ಬಾರಿ ಚುನಾವಣೆಯಲ್ಲಿ ಭಾರತ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬರುವುದು ಅವಶ್ಯಕವಾಗಿದೆ ಎಂದು ಶರದ್ ಪವಾರ್ ಹೇಳಿದ್ದಾರೆ.

## ಲೋಕಸಭೆ ಚುನಾವಣಾ ಜಾಹೀರಾತು– ಪೂರ್ವಾನುಮತಿ ಕಡ್ಡಾಯ

ಬೆಳಗಾವಿ : ಲೋಕಸಭೆ ಚುನಾವಣೆ–2024 ಅಂಗವಾಗಿ ಮೇ 7, 2024ರಂದು ಮತದಾನ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಮೇ 6 ಹಾಗೂ 7 ರಂದು ಅಭ್ಯರ್ಥಿಗಳು/ಸಂಸ್ಥೆಗಳು ಅಥವಾ ಯಾವುದೇ ವ್ಯಕ್ತಿಯು ದಿನಪತ್ರಿಕೆಗಳಲ್ಲಿ ಯಾವುದೇ ರೀತಿಯ ಚುನಾವಣಾ ಜಾಹೀರಾತು ಪ್ರಕಟಿಸಬೇಕಾದರೆ ಸದರಿ ಜಾಹೀರಾತಿಗೆ ಜಿಲ್ಲಾ ಮಟ್ಟದ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿಯ(ಎಂಸಿಎಂಸಿ) ಕಡೆಯಿಂದ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

ಚುನಾವಣಾ ಜಾಹೀರಾತು ಪ್ರಕಟಿಸಲು ಬಯಸುವ ಅಭ್ಯರ್ಥಿಗಳು ಮೇ 6 ಹಾಗೂ 7 ರಂದು ಮುದ್ರಣ ಮಾಧ್ಯಮಗಳಲ್ಲಿ ಜಾಹೀರಾತು ಪ್ರಕಟಿಸಬೇಕಾದರೆ ಸದರಿ ಜಾಹೀರಾತಿನ ಎರಡು ಸ್ವಯಂ ದೃಢೀಕೃತ ಪ್ರತಿಗಳೊಂದಿಗೆ ನಿಗದಿತ ಅರ್ಜಿ ನಮೂನೆಯಲ್ಲಿ ಮೇ 4 ರೊಳಗೆ ಜಿಲ್ಲಾ ಮಟ್ಟದ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿ(ಎಂಸಿಎಂಸಿ)ಗೆ ಅರ್ಜಿ ಸಲ್ಲಿಸಬೇಕು.

**ಪೂರ್ವಾನುಮತಿಗೆ ಅರ್ಜಿ ಲಭ್ಯ:**

ಮೇ 6 ಹಾಗೂ 7 ರಂದು ಮುದ್ರಣ ಮಾಧ್ಯಮದಲ್ಲಿ ಪ್ರಕಟಿಸಲು ಅಗತ್ಯವಿರುವ ನಿಗದಿತ ನಮೂನೆಯ ಅರ್ಜಿ ನಮೂನೆಗಳು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ 'ವಾರ್ತಾಭವನ' ನ್ಯಾಯಾಲಯ ಆವರಣ, ಬೆಳಗಾವಿ– ಈ ಕಚೇರಿಯಿಂದ ಪಡೆಯಬಹುದು. ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ರೀತಿಯ ಜಾಹೀರಾತುಗಳನ್ನು ಪ್ರಕಟಿಸಲು ಜಿಲ್ಲಾಮಟ್ಟದ ಎಂಸಿಎಂಸಿ ಕಡೆಯಿಂದ ಪೂರ್ವಾನುಮತಿ ಪಡೆಯದ ಅಭ್ಯರ್ಥಿಗಳ ಜಾಹೀರಾತುಗಳನ್ನು ಸ್ಥಳೀಯ, ಜಿಲ್ಲಾ, ರಾಜ್ಯ ಹಾಗೂ ರಾಷ್ಟ್ರಮಟ್ಟದ ದಿನಪತ್ರಿಕೆಗಳು ಪ್ರಕಟಿಸಬಾರದು ಎಂದು ಚುನಾವಣಾ ಆಯೋಗ ತಿಳಿಸಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

## ಲೋಕಸಭಾ ಫಲಿತಾಂಶದ ನಂತರ ಗ್ಯಾರಂಟಿಯ ವಾರಂಟಿ ಅಂತ್ಯ: ಕಡಾಡಿ




ಕಾಗವಾಡ: 'ಬರುವ ಲೋಕಸಭಾ ಚುನಾವಣೆ ಫಲಿತಾಂಶ ನಂತರ ರಾಜ್ಯ ಸರ್ಕಾರ ಉಳಿಯುವ ಗ್ಯಾರಂಟಿ ಇಲ್ಲದಿರುವಾಗ ಈಗ ನೀಡುತ್ತಿರುವ ಪಂಚ ಗ್ಯಾರಂಟಿಯ ವಾರಂಟಿ ಮುಗಿಯುತ್ತದೆ' ಎಂದು ರಾಜ್ಯ ಸಭಾ ಸದಸ್ಯ ಈರಣ್ಣ ಕಡಾಡಿ ಕಾಂಗ್ರೆಸ್ ವಿರುದ್ಧ ವ್ಯಂಗ್ಯವಾಡಿದರು.

ತಾಲ್ಲೂಕಿನ ಶಿರುಗುಪ್ಪಿ ಗ್ರಾಮದಲ್ಲಿ ಬಿಜೆಪಿ ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, 'ಸ್ಥಳೀಯ ಕಾಂಗ್ರೆಸ್ ಶಾಸಕರೆ ನಮಗೆ ಅನುದಾನ ಸಿಗುತ್ತಿಲ್ಲಾ ಎಂದು ತಮ್ಮದೇ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಇದೇ ರೀತಿ ರಾಜ್ಯದ ಹಲವು ಕಾಂಗ್ರೆಸ್ ಶಾಸಕರು ತಮ್ಮ ಅನುದಾನ ಸಿಗುತ್ತಿಲ್ಲಾ ಎಂದು ಅಸಮಾಧಾನರಾಗಿದ್ದಾರೆ. ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಮಾಡಿ ಎನ್ನುವ ಜನರಿಗೆ ಉತ್ತರ ನೀಡಲಾಗದ ಪರಿಸ್ಥಿತಿ ರಾಜ್ಯದ ಕಾಂಗ್ರೆಸ್ ಶಾಸಕರದ್ದಾಗಿದೆ ಇದರಲ್ಲಿ ತಿಳಿಯುತ್ತದೆ' ಎಂದರು.

'ಕಳೆದ ಒಂದು ವರ್ಷದಿಂದ ಅಭಿವೃದ್ಧಿ ಕಾರ್ಯ ನಿಂತಿವೆ. ರೈತರಿಗೆ ಸರಿಯಾಗಿ ವಿದ್ಯುತ್ ನೀಡದೆ ಸತಾಯಿಸುತ್ತಿದ್ದಾರೆ. ಒಂದು ವಿದ್ಯುತ್ ಪರಿವರ್ತಕಕ್ಕೆ ಮೊದಲು ?20 ಸಾವಿರ ಖರ್ಚು ಆಗುತ್ತಿತ್ತು. ಕಾಂಗ್ರೆಸ್ ಸರ್ಕಾರ ಬಂದ ಮೇಲೆ ಅದು ? 1.5 ಲಕ್ಷ ನೀಡಬೇಕಾಗಿದೆ. ಎಲ್ಲ ದಿನ ಬಳಕೆ ವಸ್ತುಗಳ ಬೆಲೆಗಳನ್ನು ಹೆಚ್ಚಿಗೆ ಮಾಡಿ ಜನ ಸಾಮನ್ಯರ ಮೇಲೆ ದೊಡ್ಡ ಮಟ್ಟದ ಹೊರೆ ಹಾಕಲಾಗುತ್ತಿದೆ. ಹೀಗಾಗಿ ಈ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆ ಅವರಿಗೆ ಮತ ನೀಡಿ ಮತ್ತೊಮ್ಮೆ ಮೋದಿಯವರ ಕೈ ಬಲಪಡಿಸಬೇಕು' ಎಂದು ಹೇಳಿದರು.

ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆ ಮಾತನಾಡಿ, 'ಪ್ರಧಾನಿ ಮೋದಿ ಅವರು ಹತ್ತೇ ವರ್ಷಗಳಲ್ಲಿ ಜಗತ್ತೇ ಭಾತರದತ್ತ ತಿರುಗಿ ನೋಡುವ ಹಾಗೆ ಮಾಡಿದ್ದಾರೆ. ಜನ ಸಾಮಾನ್ಯರು ನೆಮ್ಮದಿಯ ಜೀವನ ಸಾಗಿಸುತ್ತಿದ್ದಾರೆ. ಬರುವ ಚುನಾವಣೆಯಲ್ಲಿ ನನ್ನನ್ನು ಅತಿ ಹೆಚ್ಚು ಮತಗಳಿಂದ ಆಯ್ಕೆ ಮಾಡಿ' ಎಂದು ಮನವಿ ಮಾಡಿದರು.

ಈ ವೇಳೆ ವಿಜಯಪುರ ಶಾಸಕ ಬಸವನಗೌಡ ಪಾಟೀಲ ಯತ್ನಾಳ ಹಾಗೂ ಮಾಜಿ ಸಚಿವ ಶ್ರೀಮಂತ ಪಾಟೀಲ ಮಾತನಾಡಿ ಮತಯಾಚಿಸಿದರು. ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಸತೀಶ ಅಪ್ಪಾಜಿಗೋಳ, ಮಾಜಿ ಶಾಸಕ ಬಾಳಾಸಾಹೇಬ ವಡ್ಡರ, ಪ್ರಧಾನ ಕಾರ್ಯದರ್ಶಿ ದೀಪಕ ಪಾಟೀಲ, ನಿಂಗಪ್ಪ ಖೋಕಲೆ, ಶೀತಲ ಪಾಟೀಲ, ಶಿವಾನಂದ ಪಾಟೀಲ, ಸಂಜಯ ತೆಲಸಂಗ,ಅಭಯ ಅಕ್ಕಿವಾಟೆ, ತಮ್ಮಣ್ಣ ಪಾರಶೆಟ್ಟಿ, ಅರುಣ ಗಣೇಶವಾಡಿ, ಯೋಗೇಶ ಕುಂಬಾರ ಇದ್ದರು.

## ಲೋಕಸಭಾ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿ

ಸಂತೇಬೆನ್ನೂರು: ರೈತರಿಗೆ ನೀರಾವರಿ ಯೋಜನೆಗಳ ಅನುಷ್ಠಾನದ ಜತೆಯಲ್ಲಿ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಬದ್ಧ. ಈ ಬಾರಿ ಸಾಮಾಜಿಕ ಸೇವೆಯಲ್ಲಿ ಈಗಾಗಲೇ ನಿಸ್ವಾರ್ಥವಾಗಿ ತೊಡಗಿಸಿಕೊಂಡು ಜನ ಮೆಚ್ಚುಗೆ ಗಳಿಸಿರುವ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರನ್ನು ಗೆಲ್ಲಿಸಬೇಕು ಎಂದು ಸಚಿವ ಎಸ್. ಎಸ್.ಮಲ್ಲಿಕಾರ್ಜುನ್ ಮನವಿ ಮಾಡಿದರು.

ಇಲ್ಲಿನ ಲಕ್ಷ್ಮಿ ವೆಂಕಟೇಶ್ವರ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಬ್ಲಾಕ್ ಮಟ್ಟದ ಮುಖಂಡರ, ಕಾರ್ಯಕರ್ತರ ಹಾಗೂ ಚುನಾಯಿತ ಪ್ರತಿನಿಧಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಕಾಂಗ್ರೆಸ್ ಗೆಲುವಿಗೆ ಚನ್ನಗಿರಿ ವಿಧಾನಸಭಾ ಕ್ಷೇತ್ರ ಮಹತ್ವ ಪಡೆದಿದೆ. 1,99,000 ಮತಗಳನ್ನು ಸೆಳೆಯಲು ಕಾರ್ಯಕರ್ತರು ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಚುನಾವಣೆಗೆ ಆರು ದಿನಗಳಿದ್ದು, ಗ್ರಾಮ ಪಂಚಾಯಿತಿ ಚುನಾವಣೆ ರೀತಿಯಲ್ಲಿ ಮತದಾರ ಮನವೊಲಿಸಿ ಪಕ್ಷದ ಅಭ್ಯರ್ಥಿಯನ್ನು ಗೆಲ್ಲಿಸಲು ಶ್ರಮಿಸಬೇಕು ಎಂದು ತಿಳಿಸಿದರು.

## ಅಣಕು ಮತದಾನ ಕಡ್ಡಾಯ: ಶಿಂಧೆ



ಹುಕ್ಕೇರಿ: 'ಚುನಾವಣೆ ಪ್ರಕ್ರಿಯೆಯಲ್ಲಿ ಅಣಕು ಮತದಾನ ಕಡ್ಡಾಯ. ಅಣುಕು ಮತದಾನವಾದ ಬಳಿಕ ಚುನಾವಣಾ ಸಿಬ್ಬಂದಿ ಮತಯಂತ್ರದಲ್ಲಿನ ಸಂಖ್ಯೆಯನ್ನು ಸೊನ್ನೆ ಮಾಡಿ ಮತದಾನ ಆರಂಭಿಸಬೇಕು. ಸೊನ್ನೆ ಮಾಡದೆ ಆರಂಭಿಸಿದಲ್ಲಿ ಅಂಥವರನ್ನು ತಕ್ಷಣವೇ ಅಮಾನತು ಮಾಡಲಾಗುವುದು' ಎಂದು ಚಿಕ್ಕೋಡಿ ಚುನಾವಣಾಧಿಕಾರಿಯೂ ಆದ ಜಿಲ್ಲಾ ಪಂಚಾಯ್ತಿ ಸಿಇಒ ರಾಹುಲ್ ಶಿಂಧೆ ಎಚ್ಚರಿಕೆ ನೀಡಿದರು. ಸ್ಥಳೀಯ ಎಸ್.ಎಸ್.ಎನ್. ಕಾಲೇಜು ಮತ್ತು ಎಸ್.ಕೆ.ಪಿಯು ಕಾಲೇಜಿನಲ್ಲಿ ಹುಕ್ಕೇರಿ ಮತ್ತು ಯಮಕನಮರಡಿ ವಿಧಾನಸಭಾ ಮತಕ್ಷೇತ್ರಗಳ ಚುನಾವಣಾ ಸಿಬ್ಬಂದಿಗೆ ಬುಧವಾರ ಆಯೋಜಿಸಿದ್ದ ಚುನಾವಣಾ ತರಬೇತಿಯಲ್ಲಿ ಮಾತನಾಡಿದರು.

ವಿವಿಧ ಕೊಠಡಿಗಳಿಗೆ ತೆರಳಿ ತರಬೇತಿ ಪಡೆಯುತ್ತಿದ್ದ ಸಿಬ್ಬಂದಿಗೆ ಚಾಲೆಂಜ್ ವೋಟ್, ಅಣುಕು ಮತದಾನ ಪ್ರಕ್ರಿಯೆ, ಚುನಾವಣಾ ಸಮಯ ಸೇರಿದಂತೆ ವಿವಿಧ ಪ್ರಶ್ನೆಗಳನ್ನು ಕೇಳಿ ಸಲಹೆ ನೀಡಿದರು. ಇದೇ ಸಂದರ್ಭದಲ್ಲಿ ಪೋಸ್ಟಲ್ ಬ್ಯಾಲೆಟ್ ಕುರಿತು ವಿಚಾರಿಸಿದರು.

ಯಮಕನಮರಡಿ ಚುನಾವಣಾಧಿಕಾರಿಯೂ ಆದ ಬೆಳಗಾವಿ ಎಸಿ ಬಸವಣ್ಣೆಪ್ಪ ಕಲಶೆಟ್ಟಿ, ಹುಕ್ಕೇರಿ ಕ್ಷೇತ್ರದ ಎ.ಆರ್.ಒ.ರೇಖಾ ಡೊಳ್ಳಿನವರ್, ತಹಶೀಲ್ದಾರ್ ಬಲರಾಮ ಕಟ್ಟಿಮನಿ, ಶಶಿಕಾಂತ ಹೆಗಡೆ, ಎಂ.ಸಿ.ಸಿ. ನೋಡಲ್ ಅಧಿಕಾರಿ ಬಸವರಾಜ್, ಸ್ವೀಪ್ ಅಧಿಕಾರಿ ಟಿ.ಆರ್.ಮಲ್ಲಾಡದ, ಬಿಇಒ ಪ್ರಭಾವತಿ ಪಾಟೀಲ್, ಚುನಾವಣಾ ಶಿರಸ್ತೇದಾರ್ ಅನಿತಾ ಏಶಿ, ಸಂತೋಷ ನಾಯ್ಕರ್ ಇದ್ದರು.

## ಅಂಚೆ ಮತದಾನದ ಮೂಲಕ ತಮ್ಮ ಹಕ್ಕನ್ನು ಚಲಾಯಿಸಿದ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ಶಿಂಧೆ

ಚಿಕ್ಕೋಡಿ (ಮೇ.1) ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿ.ಪಂ. ಸಿ.ಇ.ಓ ಆದಂತಹ ರಾಹುಲ ಶಿಂಧೆ ಅವರು ಬುಧವಾರ (ಮೇ.1) ರಂದು ಅಂಚೆ ಮತದಾನದ ಮೂಲಕ ತಮ್ಮ ಮತದಾನದ ಹಕ್ಕನ್ನು ಚಲಾಯಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಲೋಕಸಭಾ ಚುನಾವಣೆ 2024ರ ಹಿನ್ನಲೆಯಲ್ಲಿ ಅಗತ್ಯ ಸೇವೆಗಳಡಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ ಸಿಬ್ಬಂದಿಗಳಿಗೆ ಅಂಚೆ ಮತದಾನದ ಮೂಲಕ ತಮ್ಮ ಮತದಾನದ ಹಕ್ಕನ್ನು ಚಲಾಯಿಸಲು ಅವಕಾಶ ಕಲ್ಪಿಸಲಾಗಿದೆ.

ಲೋಕಸಭಾ ಚುನಾವಣೆ–2024ಕ್ಕೆ ಸಂಬಂಧಿಸಿದಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿನ ಅಗತ್ಯ ಸೇವೆಗಳಡಿ ಬರುವಂತಹ ಅಧಿಕಾರಿ, ಸಿಬ್ಬಂದಿಗಳಿಗೆ ಮತದಾನ ಮಾಡಲು ಅನುಕೂಲವಾಗುವಂತೆ ಚಿಕ್ಕೋಡಿ ತಹಶೀಲ್ದಾರ ಕಚೇರಿಯಲ್ಲಿನ ಕೋರ್ಟ



ಹಾಲನಲ್ಲಿ ವ್ಯವಸ್ಥೆ ಮಾಡಲಾಗಿರುತ್ತದೆ.

ಮೇ 1 ರಿಂದ 3 ರ ವರೆಗೆ ಅಗತ್ಯ ಸೇವೆಗಳಡಿ ಬರುವ ನೌಕರರು ಚಿಕ್ಕೋಡಿ ತಹಶೀಲ್ದಾರ ಕಚೇರಿಯ ಕೋರ್ಟ ಹಾಲನಲ್ಲಿ ಸ್ಥಾಪಿಸಲಾಗಿರುವ ಮತಗಟ್ಟೆಗೆ ಮುಂಜಾನೆ 9 ಗಂಟೆಯಿಂದ ಸಾಯಂಕಾಲ 5 ಗಂಟೆಯೊಳಗಾಗಿ ಆಗಮಿಸಿ ತಪ್ಪದೇ ಮತ ಚಲಾಯಿಸುವಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ಅವರು ತಿಳಿಸಿದರು. ಇದೇ ಸಂದರ್ಭದಲ್ಲಿ ಚಿಕ್ಕೋಡಿ ಉಪವಿಭಾಗಾಧಿಕಾರಿಗಳಾದ ಶ್ರೀಮತಿ ಮೆಹಬೂಬಿ ಸೇರಿದಂತೆ ತರಬೇತಿಗೆ ಆಗಮಿಸಿದ ಮತಗಟ್ಟೆ ಅಧಿಕಾರಿ, ಸಿಬ್ಬಂದಿಗಳು ಅಂಚೆ ಮತದಾನದ ಮೂಲಕ ತಮ್ಮ ಹಕ್ಕನ್ನು ಚಲಾಯಿಸಿದರು. ಚಿಕ್ಕೋಡಿ ತಹಶೀಲ್ದಾರ ಚಿದಂಬರ ಕುಲಕರ್ಣಿ ಉಪಸ್ಥಿತರಿದ್ದರು.



## ಮನೆ ಮನೆಗೆ ತೆರಳಿ ಬಿಜೆಪಿ ಅಭ್ಯರ್ಥಿ ಜಗದೀಶ ಶಟ್ಟರ ಪರ ಮತಯಾಚನೆ

ಬೆಟಗೇರಿ:ನರೇಂದ್ರ ಮೋದಿ ಅವರು ದೇಶದಲ್ಲಿ ಪುನಃ ಪ್ರಧಾನಿಯಾಗುವ ಅವಶ್ಯಕತೆಯಿದೆ. ದೇಶದ ಭದ್ರತೆಗಾಗಿ ನರೇಂದ್ರ ಮೋದಿ ಮತ್ತೆ ಪ್ರಧಾನಿಯಾಗಲು, ಬಿಜೆಪಿಯ ಅಭ್ಯರ್ಥಿ ಜಗದೀಶ ಶಟ್ಟರ ಅವರಿಗೆ ಮತ ನೀಡಿ ಬಹು ಅಂತರದ ಮತಗಳಿಂದ ಗೆಲ್ಲಿಸಿ ತರಬೇಕೆಂದು ಅರಭಾಂವಿ ಮತಕ್ಷೇತ್ರ ವ್ಯಾಪ್ತಿಯ ಬೆಟಗೇರಿ ಗ್ರಾಮ ಪಂಚಾಯ್ತಿ ಮಾಜಿ ಅಧ್ಯಕ್ಷ ಲಕ್ಷ್ಮಣ ಚಂದರಗಿ ಸ್ಥಳೀಯ ಮತದಾರರಲ್ಲಿ ವಿನಂತಿಸಿಕೊಂಡರು.

ಅರಭಾಂವಿ ಮತಕ್ಷೇತ್ರ ವ್ಯಾಪ್ತಿಯ ಬೆಟಗೇರಿ ಗ್ರಾಮದ ವಾರ್ಡ ನಂ3 ಮತ್ತು 4ರಲ್ಲಿ ಮನೆ ಮನೆಗೆ ತೆರಳಿ ಬಿಜೆಪಿ ಅಭ್ಯರ್ಥಿ ಜಗದೀಶ ಶಟ್ಟರ ಪರ ಏ.30ರಂದು ಮತಯಾಚಿಸಿ ಮಾತನಾಡಿದರು. ಮುಂದಿನ ಅವಧಿಗೂ ಅವರು ಪ್ರಧಾನಿಯಾದರೆ ದೇಶವನ್ನು ಮತ್ತಷ್ಟು ಅಭಿವೃದ್ಧಿ ಪಡಿಸಲು ಸಾಧ್ಯ. ಕಳೆದ 10 ವರ್ಷಗಳ ಅವಧಿಯಲ್ಲಿ ಹಿಂದೆಂದೂ ಕಾಣದ ಅಭಿವೃದ್ಧಿ ಕಾರ್ಯಗಳಾಗಿವೆ ಎಂದರು.

ಇಲ್ಲಿಯ ಗ್ರಾಮ ಪಂಚಾಯ್ತಿ ಮಾಜಿ ಅಧ್ಯಕ್ಷ ಲಕ್ಷ್ಮಣ ಚಂದರಗಿ ನೇತೃತ್ವದಲ್ಲಿ ಸ್ಥಳೀಯ ಮುಖಂಡರು, ಬಿಜೆಪಿ ಕಾರ್ಯಕರ್ತರು, ಅಭಿಮಾನಿಗಳು, ಬೆಟಗೇರಿ ಗ್ರಾಮದ ವಾರ್ಡ ನಂ3 ಮತ್ತು 4ರಲ್ಲಿರುವ ಮನೆ ಮನೆಗೆ ತೆರಳಿ ಬಿಜೆಪಿ ಅಭ್ಯರ್ಥಿ ಜಗದೀಶ ಶಟ್ಟರ ಪರ ಏ.30ರಂದು ಮತಯಾಚಿಸಿದರು.

ಮುಖಂಡರಾದ ಈರಣ್ಣ ಬಳಿಗಾರ, ಈಶ್ವರ ಮುಧೋಳ, ಅಶೋಕ ಕೋಣಿ, ಸಿದ್ದಪ್ಪ ವಡೇರ, ಮಾರುತಿ ಚಂದರಗಿ, ಬಸವರಾಜ ಚಂದರಗಿ, ಭಾಗಪ್ಪ ಚಂದರಗಿ, ಬಾಳಪ್ಪ ಬಾಣಸಿ, ಮಹಾದೇವ ದೇಯಣ್ಣವರ, ಹನುಮಂತ ಕರಿಗಾರ, ಕಲ್ಲಪ್ಪ ದೇಯಣ್ಣವರ, ಮೈಬೂಬಸಾಬ ಯಲಿಗಾರ, ಮುತ್ತೆಪ್ಪ ಕಲ್ಲೂರ, ಮಹಾಂತೇಶ ಪಟ್ಟೇದ, ವಿಠಲ ಚಂದರಗಿ, ಬೀರಪ್ಪ ಜಟ್ಟೆಪ್ಪಗೋಳ, ಬಸವರಾಜ ಯಾದವಾಡ, ಕಲ್ಲಪ್ಪ ಚಂದರಗಿ ಸೇರಿದಂತೆ ಗ್ರಾ.ಪಂ. ಸದಸ್ಯರು, ಬಿಜೆಪಿ ಕಾರ್ಯಕರ್ತರು, ಅಭಿಮಾನಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಕಲ್ಲಿನಾಥೇಶ್ವರ ದೇವಸ್ಥಾನದಲ್ಲಿ ಹುಂಡಿ ಹಣ ಕಳ್ಳತನ

ಕುಕನೂರು: ಕಲ್ಲೂರು ಗ್ರಾಮದ ಕಲ್ಲಿನಾಥೇಶ್ವರ ದೇವಸ್ಥಾನದ ಹುಂಡಿ ಹಣ ಕಳ್ಳತನವಾಗಿ ನಾಲ್ಕು ದಿನಗಳಾದರು ಸಂಬಂಧಿಸಿದ ಅಧಿಕಾರಿಗಳು ಕ್ರಮಕ್ಕೆ ಮುಂದಾಗಿಲ್ಲ ಎಂದು ಗ್ರಾಮಸ್ಥರು ಬುಧವಾರ ಆರೋಪಿಸಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ದೇವಸ್ಥಾನದ ಮಾಜಿ ಸದಸ್ಯ ಕಲ್ಲಿನಾಥಯ್ಯ ಜಾರಗಡ್ಡಿಮಠ ಮಾತನಾಡಿ, ಏ.26ರಂದು ಕಲ್ಲೂರು ಗ್ರಾಮದ ಕಲ್ಲಿನಾಥೇಶ್ವರ ದೇವಸ್ಥಾನದ ಹುಂಡಿ ಹಣ ? 1 ಲಕ್ಷಕ್ಕಿಂತಲು ಅಧಿಕ ಹಣವನ್ನು ಕಳ್ಳತನ ಮಾಡಿಕೊಂಡು ಹೋಗಿದ್ದಾರೆ.

ದೇವಸ್ಥಾನವು ಮುಜರಾಯಿ ಇಲಾಖೆಗೆ ಒಳಪಡುತ್ತದೆ. ವರ್ಷದಲ್ಲಿ ಎರಡು ಬಾರಿ ದೇವಸ್ಥಾನದ ಹುಂಡಿ ಹಣವನ್ನು ಎಣಿಕೆ ಮಾಡಲಾಗುತ್ತಿತ್ತು.? 6 ರಿಂದ 7ಲಕ್ಷ ವರ್ಷಕ್ಕೆ ಜಮಾವಾಗುತ್ತದೆ. ಇದನ್ನು ಗಮನಿಸಿದ ಕೆಲವರು, ಕಳ್ಳರ ವೇಷದಲ್ಲಿ ಬಂದು ಹುಂಡಿಯ ಬೀಗ ತೆಗೆದು ಕಳ್ಳತನ ಮಾಡಿದ್ದಾರೆ. ಹುಂಡಿ ಬೀಗದ ಕಿಲಿ ತಹಶೀಲ್ದಾರ್ ಬಳಿ ಇರಬೇಕು. ಆದರೆ, ಒಂದು ನಕಲಿ ಕಿಲಿಯನ್ನು ಯಾ–ರೋ ಮಾಡಿಸಿಕೊಂಡು ಇಂತಹ ಕೃತ್ಯ ಎಸಗಿದ್ದಾರೆ. ಹುಂಡಿ ಹಣ ಕಳ್ಳತನವಾಗಿ ನಾಲ್ಕು ದಿನಗಳಾದರು ತಹಶೀಲ್ದಾರ್, ದೇವಸ್ಥಾನದ ಕಮೀಟಿಯ ಅಧ್ಯಕ್ಷರು, ಸದಸ್ಯರು ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳ ನಿರ್ಲಕ್ಷ್ಯವಹಿಸಿದ್ದಾರೆ ಎಂದರು. ತಹಶೀಲ್ದಾರ್ ಖಾತೆಯಲ್ಲಿ ದೇವಸ್ಥಾನದ ? 1 ಕೋಟಿಗೂ ಅಧಿಕ ಹಣ ಇದೆ. ಆದರೆ, ದೇವಸ್ಥಾನದಲ್ಲಿ ಮೂಲ ಸೌಕರ್ಯಗಳನ್ನು ಒದಗಿಸಲು ಸಾಧ್ಯವಾಗಿಲ್ಲ. ಶೌಚಾಲಯ, ಸ್ನಾನದ ಗೃಹಗಳು, ಸಿಸಿ ಕ್ಯಾಮೆರಾಗಳು ಹಾಗೂ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089